ದೆಹಲಿ ವಾರ್ತೆ
ಸೆಪ್ಟಂಬರ್ 21, 2026, ಸೋಮವಾರ



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು



# ದಿಟ್ಟ ನುಡಿ, ಖಚಿತ ನಡೆ, ಸ್ಪಷ್ಟ ಗುರಿ
# ದೃಢ ಕರ್ನಾಟಕದ ಸಂಕಲ್ಪ

## ಕರ್ನಾಟಕ ಸರ್ಕಾರವು ತುಳು ಭಾಷೆಯನ್ನು ರಾಜ್ಯದ ಎರಡನೇ ಹೆಚ್ಚುವರಿ ಆಡಳಿತ ಭಾಷೆಯಾಗಿ ಘೋಷಿಸಿದೆ



- ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗೆ ಅನ್ವಯವಾಗುವಂತೆ ಈ ಘೋಷಣೆ ಮಾಡಲು ತೀರ್ಮಾನಿಸಲಾಗಿದೆ.
- ಜಿಲ್ಲಾಡಳಿತವನ್ನು ಈ ಘೋಷಣೆಯ ಅನುಷ್ಠಾನ ಕೇಂದ್ರವಾಗಿ ಮಾಡಲಾಗುವುದು.
- ಅನುವಾದ, ತರಬೇತಿ ಮತ್ತು ಭಾಷಾ ಬಳಕೆಗೆ ಸಂಬಂಧಿಸಿದ ಚಟುವಟಿಕೆಗಳಿಗೆ ಪ್ರತಿ ವರ್ಷ 82 ಲಕ್ಷ ರೂ. ಒದಗಿಸಲಾಗುವುದು.

ಗೃಹಲಕ್ಷ್ಮಿ ಅನ್ನಭಾಗ್ಯ ಗೃಹ ಜ್ಯೋತಿ ಯುವನಿಧಿ ಶಕ್ತಿ



ದೃಢ ಕರ್ನಾಟಕದ ಸಂಕಲ್ಪ
ಶತಕದ ಪಥ ಪ್ರಗತಿಯ ರಥ

ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka https://dipr.karnataka.gov.in/ Karnatakavarthe ಕರ್ನಾಟಕ ವಾರ್ತೆ

## ನಿತ್ಯ ಪಂಚಾಂಗ 21.09.2026 ಸೋಮವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ**

ಭಾದ್ರಪದ ಶುದ್ಧ, ದಶಮಿ, ಉತ್ತರಾಷಾಢ ನಕ್ಷತ್ರ, ಸುಗಂದ ದಶಮಿ, ತಿರುಪತಿ ರಥ, ರಾಮಕೃಷ್ಣ ಪರಮಹಂಸರ ಪುಣ್ಯದಿನ, ಅಂತರರಾಷ್ಟ್ರೀಯ ಶಾಂತಿ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಎಚ್.ಡಿ. ರೇವಣ್ಣ - ಕುಮಾರಸ್ವಾಮಿ ಹಾಸನ ಜಿಲ್ಲಾಧಿಕಾರಿಗೆ ದಮ್ಕಿ: ಸಿಎಂ ಡಿಕೆಶಿ ಡಿಸಿಗೆ ಅಭಯ



**ಹಾಸನ, ಸೆ.20:** ಗ್ರಾಮ ಪಂಚಾಯ್ತಿ ಚುನಾವಣೆಗೆ ಮೀಸಲಾತಿ ವಿಚಾರದಲ್ಲಿ ಮಾಜಿ ಸಚಿವ ಎಚ್.ಡಿ. ರೇವಣ್ಣ ಜಿಲ್ಲಾಧಿಕಾರಿ ವಿರುದ್ಧ ಹರಿಹಾಯ್ದಿದ್ದರು. ಭಾನುವಾರ ಸಕಲೇಶಪುರ ಪಟ್ಟಣದ ಎಪಿಎಂಸಿ ಆವರಣದಲ್ಲಿ ನಡೆದ ಕಸ್ತೂರಿ ರಂಗನ್ ವರದಿ ಕುರಿತು ನೇರ ಸಂವಾದ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಸನ ಜಿಲ್ಲಾಧಿಕಾರಿ ಬೆಂಬಲಕ್ಕೆ ನಿಂತರು. ಹಾಸನ ಡಿ.ಸಿ.ಗೆ ಕಿರುಕುಳ ಇದೆ. ಯಾರಿಂದ ಕಿರಕುಳ ಇದೆ ಅನ್ನೋದು ನಿಮಗೆ ಗೊತ್ತಿದೆ. ನಾನು ಅವರಿಗೆ ಫೋನ್ ಮಾಡಿ ಹೇಳಿದ್ದೇನೆ. ಯಾರಿಗೂ ಹೆದರಿಕೊಳ್ಳುವ ಅವಶ್ಯಕತೆ ಇಲ್ಲ. ಬಡವರ ಪರವಾಗಿ ಕೆಲಸ ಮಾಡಮ್ಮ ಎಂದು ಹೇಳುವ ಮೂಲಕ ಮಾಜಿ ಸಚಿವ ಎಚ್.ಡಿ.ರೇವಣ್ಣ ವಿರುದ್ಧ ಪರೋಕ್ಷವಾಗಿ ಕಿಡಿಕಾರಿದರು ಕೆಲವರು ಟೀಕೆ ಮಾಡುತ್ತಾರೆ, ಮಾಡಲಿ ಸಂತೋಷ. ನಾನು ಸಂಪುಟ ಸಭೆ ಮಾಡಿದರೂ ಟೀಕೆ ಮಾಡ್ತಾರೆ, ನಡೆದರೂ ಟೀಕೆ ಮಾಡ್ತಾರೆ ಎಂದು ಕೇಂದ್ರ ಸಚಿವ ಕುಮಾರ ಸ್ವಾಮಿಗೆ ತಿರುಗೇಟು ನೀಡಿದರು. ಬಿಜೆಪಿ ಸ್ನೇಹಿತರು ಅವರ ಸಾಧನೆ ಗಳನ್ನು ಹೇಳಲಿ, ಬೇಡ ಎನ್ನಲ್ಲ, ಆದರೆ ಮಾಡದೆ ಹೋದಾಗ, ದೇವರು ವರಾನೂಕೊಡಲ್ಲ, ಶಾಪಾನೂಕೊಡಲ್ಲ ಅವಕಾಶ ಕೊಡ್ತಾನೆ. ನನಗೆ ಒಂದು ಅವಕಾಶ ಕೊಟ್ಟಿದ್ದಾನೆ ಎಂದರು

# ಕರ್ನಾಟಕದಾದ್ಯಂತ 200ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆ ಸಾಧ್ಯತೆ: ಡಿಸಿಎಂ



**ಬೆಂಗಳೂರು, ಸೆ.20:** ನಿಗದಿತ ಮಾನದಂಡಗಳು ಮತ್ತು ಸ್ಥಳ ಪರಿಶೀಲನೆಯ ಆಧಾರದ ಮೇಲೆ ರಾಜ್ಯ ಸರ್ಕಾರ ಹಂತ ಹಂತವಾಗಿ ನಡೆಸುತ್ತಿರುವ ಮೌಲ್ಯಮಾಪನದ ಪ್ರಕಾರ, ಕರ್ನಾಟಕದಾದ್ಯಂತ 200ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಗೊಳ್ಳುವ ಸಾಧ್ಯತೆಯಿದೆ ಎಂದು ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ ಭಾನುವಾರ ತಿಳಿಸಿದರು. ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಹಾಗೂ ನಂತರದ ಹಂತದಲ್ಲಿ ಇನ್ನೂ 24 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ ಎಂದು ಅವರು ಹೇಳಿದರು. ಮುಂದಿನ ಮೂರ್ನಾಲ್ಕು ದಿನಗಳಲ್ಲಿ ಹೆಚ್ಚುವರಿಯಾಗಿ 52 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ನಿರೀಕ್ಷೆಯಿದೆ. ಮುಂದಿನ ಹಂತದಲ್ಲಿ, ಮೌಲ್ಯಮಾಪನದ ಆಧಾರದ ಮೇಲೆ ನಿರ್ಧಾರ ಕೈಗೊಳ್ಳುವ ಮೊದಲು ಇನ್ನೂ ಸುಮಾರು 50 ತಾಲೂಕುಗಳಲ್ಲಿ ಸ್ಥಳ ಪರಿಶೀಲನೆ ನಡೆಸಲಾಗುವುದು ಎಂದು ಅವರು ತಿಳಿಸಿದರು."ಪ್ರಸ್ತುತ ಲಭ್ಯವಿರುವ ಮಾಹಿತಿಯ ಆಧಾರದ ಮೇಲೆ, ರಾಜ್ಯದಾದ್ಯಂತ 200ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳ್ಳುವ ಸಾಧ್ಯತೆಯಿದೆ," ಎಂದು ಕಂದಾಯ ಖಾತೆಯನ್ನು ಹೊಂದಿರುವ ಪರಮೇಶ್ವರ ಹೇಳಿದ್ದಾರೆ.

ಮಳೆಗಾಲ ಮುಗಿಯುವವರೆಗೂ ಪರಿಸ್ಥಿತಿಯನ್ನು ಪರಿಶೀಲಿಸಲಾಗುವುದು ಎಂದು ಅವರು ಹೇಳಿದರು. ಜಗಳೂರಿನಂತಹ ತಾಲೂಕುಗಳು, ಇವುಗಳನ್ನು ಇನ್ನೂ ಪಟ್ಟಿಗೆ ಸೇರಿಸಲಾಗಿಲ್ಲ ವಾದರೂ, ನಿಗದಿತ ಮಾನದಂಡ ಗಳನ್ನು ಪೂರೈಸಿದರೆ ಮುಂದಿನ ಹಂತಗಳಲ್ಲಿ ಬರಪೀಡಿತ ಎಂದು ಘೋಷಿಸಲ್ಪಡಬಹುದು."ತಮ್ಮ ತಾಲೂಕು ಇನ್ನೂ ಪಟ್ಟಿಯಲ್ಲಿ ಸೇರ್ಪಡೆಗೊಂಡಿಲ್ಲ ದಿದ್ದರೆ ಜನರು ಆತಂಕಪಡುವ ಅಗತ್ಯವಿಲ್ಲ," ಎಂದು ಅವರು ಹೇಳಿದರು.ಬರ ಪರಿಸ್ಥಿತಿ ಮತ್ತು ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶಗಳ ಕುರಿತಾದ ಕಸ್ತೂರಿರಂಗನ್ ವರದಿಯ ಬಗ್ಗೆ ಚರ್ಚಿಸಲು ರಾಜ್ಯ ವಿಧಾನ ಮಂಡಲದ ಮೂರು ದಿನಗಳ ವಿಶೇಷ ಅಧಿವೇಶನವನ್ನು ಕರೆಯಲಾಗಿದೆ ಎಂದು ಪರಮೇಶ್ವರ ತಿಳಿಸಿದರು.

# ರೇಷ್ಮೆ ಉತ್ಪಾದನೆಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿ: ಗಿರಿರಾಜ್ ಸಿಂಗ್



**ಬೆಂಗಳೂರು, ಸೆ.20:** ರೇಷ್ಮೆ ಉತ್ಪಾದನೆಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು, ಭಾರತ ವಿಶ್ವದಲ್ಲೇ ಎರಡನೇ ಸ್ಥಾನ ಹೊಂದಿದೆ ಎಂದು ಕೇಂದ್ರ ಜವಳಿ ಖಾತೆ ಸಚಿವ ಗಿರಿರಾಜ್ ಸಿಂಗ್ ಹೇಳಿದ್ದಾರೆ.

ಬೆಂಗಳೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಕೇಂದ್ರ ರೇಷ್ಮೆ ಮಂಡಳಿಯ 77ನೇ ಸಂಸ್ಥಾಪನಾ ದಿನ ಉದ್ಘಾಟಿಸಿದ ಅವರು, ರೈತರ ಆದಾಯ ಹೆಚ್ಚಾಗಬೇಕು ಎನ್ನುವುದು ಪ್ರಧಾನಿ ನರೇಂದ್ರ ಮೋದಿ ಅವರ ಆಶಯವಾಗಿದ್ದು, ಈ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳನ್ನು ರೂಪಿಸಿದೆ. ಪ್ರಸ್ತುತ ದೇಶದಲ್ಲಿಂದು 42 ಸಾವಿರ ರೇಷ್ಮೆ ನೂಲಿನುಂಡೆ ಉತ್ಪಾದನೆ ಮಾಡಲಾಗುತ್ತಿದ್ದು, 2029 ರ ವೇಳೆಗೆ ಈ ಸಂಖ್ಯೆಯನ್ನು 60 ಸಾವಿರಕ್ಕೆ ಹೆಚ್ಚಿಸುವ ಗುರಿಯೊಂದಿಗೆ ಕೆಲಸ ನಿರ್ವಹಿಸಬೇಕಾಗಿದೆ ಎಂದು ಹೇಳಿದರು. ರೇಷ್ಮೆ ಕೃಷಿಗೆ ಅಗತ್ಯವಾಗುವ ಎಲ್ಲ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ರೇಷ್ಮೆ ಉತ್ಪಾದನೆಯಲ್ಲಿ ವಿಶ್ವದಲ್ಲೇ ಪ್ರಥಮ ಸ್ಥಾನಕ್ಕೇರಲು ಸಾಧ್ಯ. ರೈತರ ಸಾಮರ್ಥ್ಯ ಹೆಚ್ಚಿಸಲು ತಕ್ಷಣ ಕಾರ್ಯಪ್ರವೃತ್ತರಾಗುವುದು ಅಗತ್ಯ. ರೇಷ್ಮೆ ದುಬಾರಿ ಬಟ್ಟೆಯಾಗಿದ್ದು, ವಿಭಿನ್ನ ಮಾದರಿಯ ಉಡುಪುಗಳ ತಯಾರಿಕೆಗೆ ಒತ್ತು ನೀಡಬೇಕು. ಭಾರತದಲ್ಲಿ ಖರೀದಿ ಸಾಮರ್ಥ್ಯ ಹೆಚ್ಚುತ್ತಿದ್ದು, ವಿಶ್ವದಲ್ಲೂ ಭಾರತದ ರೇಷ್ಮೆಗೆ ಬೇಡಿಕೆಯಿದೆ ಎಂದು ಹೇಳಿದರು.

ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಅನ್ನ ಕೊಡುವ ರೈತರು , ಕೃಷಿ ಸಂಬಂಧಿತ ಚಟುವಟಿಕೆ ನಡೆಸುವವರು, ಸಂಶೋಧಕರು, ದೇಶದ ಅಭಿವೃದ್ಧಿಗೆ ಅನನ್ಯ ಕೊಡುಗೆ ನೀಡುತ್ತಿದ್ದಾರೆ. ದೇಶದ ಮೊದಲ ಕೈಗಾರಿಕಾ ಸಚಿವರಾಗಿ ಕಾರ್ಯನಿರ್ವಹಿಸಿದ್ದ ಡಾ. ಶ್ಯಾಮಪ್ರಸಾದ್ ಮುಖರ್ಜಿ ಅವರು ರೇಷ್ಮೆ ಸಂಸ್ಥೆಯ ನಿರ್ಮಾತೃವಾಗಿದ್ದಾರೆ. ದೇಶದ ಅಭಿವೃದ್ಧಿಗೆ ಕೈಗಾರಿಕೆಗಳ ಅಗತ್ಯವನ್ನು ಅವರು ಅರಿತಿದ್ದರು ಎಂದು ತಿಳಿಸಿದರು.

ಅಭಿವೃದ್ಧಿಯ ವಿಚಾರ ಬಂದಾಗ ಎಲ್ಲರೂ ಒಗ್ಗೂಡಿ ಕಾರ್ಯನಿರ್ವಹಿಸಬೇಕು. ಅಭಿವೃದ್ಧಿಯ ಕೆಲಸದಲ್ಲಿ ರಾಜಕೀಯ ಸಲ್ಲದು. ಭಾರತ ಮತ್ತು ಕರ್ನಾಟಕದ ರೇಷ್ಮೆ ಶತಮಾನಗಳ ವರ್ಷಗಳ ಇತಿಹಾಸ ಹೊಂದಿದ್ದು, ರಾಜ-ಮಹಾರಾಜರ ಕಾಲದಿಂದಲೂ ಜೀವನದ ಭಾಗವಾಗಿದೆ. ರೇಷ್ಮೆಸೀರೆ ನೇಯುವವರು ಕಲಾ ನೈಪುಣ್ಯತೆಗೆ ಹೆಸರಾಗಿದ್ದರು. ಪ್ರಸ್ತುತ, ದೇಶದಲ್ಲಿ 3 ಸಾವಿರದ 600 ಕೋಟಿ ರೂ. ರೇಷ್ಮೆ ರಫ್ತು ಮಾಡಲಾಗುತ್ತಿದ್ದು, ಇದನ್ನು ಹೆಚ್ಚಿಸಬೇಕಾಗಿದೆ. ರೇಷ್ಮೆ ವಲಯ ಬೃಹತ್ ಉದ್ಯಮವಾಗಿ ಬೆಳೆಯಬೇಕು ಎಂದು ಹೇಳಿದರು.



ಸಿಎಂ ಡಿ.ಕೆ.ಶಿವಕುಮಾರ್ ಅವರು ಸಕಲೇಶಪುರದ ಸಕಲೇಶ್ವರ ದೇವಾಲಯಕ್ಕೆ ಭಾನುವಾರ ಭೇಟಿ ನೀಡಿ ಪೂಜೆ ಸಲ್ಲಿಸಿದರು.

# ಹೆಬ್ಬಾಳದಲ್ಲಿ 125 ಹಾಸಿಗೆ ಸಾಮರ್ಥ್ಯದ ಸರ್ಕಾರಿ ಆಸ್ಪತ್ರೆಗೆ ಶಂಕುಸ್ಥಾಪನೆ

**ಗ್ಯಾರಂಟಿ ಯೋಜನೆಗಳಿಗೆ 1.56 ಲಕ್ಷ ಕೋಟಿ ವೆಚ್ಚ: ಬಿಜೆಪಿ ನಾಯಕರಿಗೆ ಸಚಿವ ಬೈರತಿ ಸುರೇಶ್ ತಿರುಗೇಟು**



**ಬೆಂಗಳೂರು, ಸೆ.20:** ರಾಜ್ಯದಲ್ಲಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ಜನಸಾಮಾನ್ಯರ ಆರೋಗ್ಯ ಮತ್ತು ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಿದೆ ಎಂದು ಹೆಬ್ಬಾಳ ಕ್ಷೇತ್ರದ ಶಾಸಕರೂ ಆಗಿರುವ ಸಾರಿಗೆ ಸಚಿವ ಬೈರತಿ ಸುರೇಶ್ ಹೇಳಿದ್ದಾರೆ. ಹೆಬ್ಬಾಳದ ಪಶು ವೈದ್ಯಕೀಯ ಕಾಲೇಜು ಆವರಣದಲ್ಲಿ 125 ಹಾಸಿಗೆ ಸಾಮರ್ಥ್ಯದ ಸರ್ಕಾರಿ ಆಸ್ಪತ್ರೆ ನಿರ್ಮಾಣಕ್ಕೆ ಭಾನುವಾರ ಶಂಕುಸ್ಥಾಪನೆ ನೆರವೇರಿಸಿದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು, ದಿನದಿಂದ ದಿನಕ್ಕೆ ಬೆಳೆಯುತ್ತಿರುವ ಜನಸಂಖ್ಯೆ ಯನ್ನು ಗಮನದಲ್ಲಿಟ್ಟುಕೊಂಡು ಅಗತ್ಯವಿರುವ ಕಡೆಯಲ್ಲೆಲ್ಲಾ ಸರ್ಕಾರಿ ಆಸ್ಪತ್ರೆಗಳನ್ನು ನಿರ್ಮಾಣ ಮಾಡುವ ಸಂಕಲ್ಪ ಮಾಡಿದ್ದಾರೆ.

ಈ ಮೂಲಕ ನಮ್ಮ ಕಾಂಗ್ರೆಸ್ ಸರ್ಕಾರದ ಬದ್ಧತೆಯನ್ನು ತೋರಿಸು ತ್ತಿದ್ದಾರೆ ಎಂದರು. ಸರ್ಕಾರದ ಬಳಿ ಹಣ ಇಲ್ಲ ಎಂದು ಬಿಜೆಪಿ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ. ಆದರೆ, ಕಳೆದ ಮೂರು ವರ್ಷಗಳಲ್ಲಿ ಪಂಚ ಗ್ಯಾರಂಟಿ ಉಚಿತ ಯೋಜನೆಗಳಿಗೆ ನಮ್ಮ ಸರ್ಕಾರ ಬರೋಬ್ಬರಿ 1.56 ಲಕ್ಷ ಕೋಟಿ ರೂ.ಗಳನ್ನು ವೆಚ್ಚ ಮಾಡಿದೆ ಎಂದರು .ಇದನ್ನು ನೋಡಿ ಹೊಟ್ಟೆ ಉರಿದುಕೊಳ್ಳುತ್ತಿರುವ ಬಿಜೆಪಿ ನಾಯಕರು ಬೊಗಳೆ ಬಿಡುತ್ತಿದ್ದಾರೆ ಎಂದು ಬೈರತಿ ಸುರೇಶ್ ಲೇವಡಿ ಮಾಡಿದರು.ನಮ್ಮ ಹೆಬ್ಬಾಳ ಕ್ಷೇತ್ರಕ್ಕೆ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಈಗಿನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಳೆದ ಮೂರು ವರ್ಷಗಳಲ್ಲಿ ಸುಮಾರು ಒಂದು ಸಾವಿರ ಕೋಟಿ ರೂ.ಗಳ ಅನುದಾನ ನೀಡಿದ್ದಾರೆ. ಹಣವಿಲ್ಲದಿದ್ದರೆ ಕೇವಲ ಒಂದು ಕ್ಷೇತ್ರಕ್ಕೆ ಇಷ್ಟೊಂದು ಹಣ ಕೊಡಲು ಸಾಧ್ಯವಾಗುತ್ತಿತ್ತೇ ಎಂದು ಬಿಜೆಪಿ ನಾಯಕರನ್ನು ತರಾಟೆಗೆ ತೆಗೆದುಕೊಂಡರು.

**13 ತಿಂಗಳಲ್ಲಿ ಪೂರ್ಣ :** ಸಿದ್ದರಾಮಯ್ಯ ಅವರು ಸಿಎಂ ಆಗಿದ್ದ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿಗಳಾಗಿದ್ದ ಶಿವಕುಮಾರ್ ಅವರು ವಿಶೇಷ ಆಸಕ್ತಿ ತೋರಿ ಆಸ್ಪತ್ರೆ ನಿರ್ಮಾಣಕ್ಕೆ ಸಮ್ಮತಿ ಸೂಚಿಸಿದ್ದರು. ಅವರ ಈ ಜನಪರ ನಿಲುವಿನಿಂದಾಗಿ ಇಂದು ಹೆಬ್ಬಾಳಕ್ಕೆ ಹೈಟೆಕ್ ಆಸ್ಪತ್ರೆ ಬರಲಿದೆ ಎಂದರು. ಸುಮಾರು 3 ಎಕರೆ ಪ್ರದೇಶದಲ್ಲಿ ಈ ಆಸ್ಪತ್ರೆಯನ್ನು ಮುಂದಿನ 13 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಿ ಮುಖ್ಯಮಂತ್ರಿ ಶಿವಕುಮಾರ್ ಅವರೇ ಉದ್ಘಾಟನೆ ಮಾಡಲಿದ್ದಾರೆ ಎಂದು ಸುರೇಶ್ ಘೋಷಿಸಿದರು.

**ಸಾವಿರ ಕೋಟಿ ಅನುದಾನ:** ಕಳೆದ ಮೂರು ವರ್ಷಗಳಲ್ಲಿ ಹೆಬ್ಬಾಳ ಕ್ಷೇತ್ರಕ್ಕೆ ಒಂದು ಸಾವಿರ ಕೋಟಿ ರೂ.ಗಳನ್ನು ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಈಗಿನ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಅನುದಾನ ನೀಡಿದ್ದಾರೆ. ಇದರಲ್ಲಿ ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ಉದ್ಯಾನಗಳ ಅಭಿವೃದ್ಧಿ ಸೇರಿದಂತೆ ಅನೇಕ ಜನಪರ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದು ಬೈರತಿ ಸುರೇಶ್ ತಿಳಿಸಿದರು.

# ಮೋದಿ ತಾಯಿ ಅವಹೇಳನ ಸಲ್ಲದು: ಜೋಶಿ ಟೀಕೆ





**ಬೆಂಗಳೂರು, ಸೆ.20:** ಪ್ರಧಾನಿ ನರೇಂದ್ರ ಮೋದಿ ಅವರ ತಾಯಿಯನ್ನು ಅವಮಾನಿಸಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನಡೆ ಸರಿಯಲ್ಲ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ವಿದ್ಯಾರ್ಥಿ ಗಳೊಂದಿಗಿನ ಸಂವಾದದ ಸಮಯದಲ್ಲಿ ಅಪಹಾಸ್ಯ ಮಾಡಲು ಪ್ರಧಾನಿ ಅವರ ತಾಯಿಯನ್ನು ಬಳಸಿಕೊಂಡಿರುವುದು ಸರಿಯಲ್ಲ. ಈ ಮೂಲಕ ತಾವೊಬ್ಬ ಜವಾಬ್ದಾರಿಯುತ ವಿರೋಧ ಪಕ್ಷದ ನಾಯಕ ಎನ್ನುವುದನ್ನೇ ಮರೆತಂತಿದೆ ಎಂದು ತಿಳಿಸಿದ್ದಾರೆ. ಸೈದ್ಧಾಂತಿಕವಾಗಿ ರಾಜಕೀಯ ವಿರೋಧ ಸಹಜ. ಆದರೆ ಯಾರೂ ಕೂಡ ಪೋಷಕರನ್ನು ಅವಮಾನಿಸಲು ಸಮೀತ ಆಗಬಾರದು. ಹಿರಿಯರ ವಿರುದ್ಧ ಅಪಮಾನ ಮಾಡಲು ವಿದ್ಯಾರ್ಥಿಗಳ ಸಂವಾದವನ್ನು ಬಳಸಿಕೊಳ್ಳುವುದು ಭಾರತೀಯ ಸಂಸ್ಕೃತಿಯಲ್ಲ.

ಯಾವುದೇ ರಾಜಕೀಯ ಹೋರಾಟ ನೀತಿ ಮತ್ತು ದೂರದೃಷ್ಟಿ ಆಧಾರದ ಮೇಲೆ ನಡೆಯಬೇಕೇ ಹೊರತು ವೈಯಕ್ತಿಕ ದಾಳಿಯಿಂದ ಅಲ್ಲ ಎಂದು ಜೋಶಿ ಎಚ್ಚರಿಕೆ ನೀಡಿದ್ದಾರೆ.

# ಗದಗ ಬರಪೀಡಿತ ಎಂದು ಘೋಷಿಸದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ: ಸ್ವಪಕ್ಷದ ವಿರುದ್ಧವೇ ಗುಡುಗಿದ ಎಚ್.ಕೆ. ಪಾಟೀಲ್



**ಗದಗ, ಸೆ.20:** ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸದಿದ್ದರೆ ಮುಂಬರುವ ಅಕ್ಟೋಬರ್ 10ರ ನಂತರ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಕಾಂಗ್ರೆಸ್ನ ಹಿರಿಯ ನಾಯಕ ಹಾಗೂ ಶಾಸಕ ಎಚ್.ಕೆ. ಪಾಟೀಲ್ ಸ್ವಪಕ್ಷದ ಸರ್ಕಾರದ ವಿರುದ್ಧವೇ ಬಹಿರಂಗವಾಗಿ ಗುಡುಗಿದ್ದಾರೆ.ಗದಗ ತಾಲೂಕಿನಲ್ಲಿ ತೀವ್ರ ಮಳೆ ಕೊರತೆಯಾಗಿದ್ದರೂ ಬರಪೀಡಿತ ಪಟ್ಟಿಯಿಂದ ಕೈಬಿಟ್ಟಿರುವುದಕ್ಕೆ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶೇ 49ರಷ್ಟು ಮಳೆ ಅಭಾವಿದ್ದರೂ ಬರ ಪಟ್ಟಿಗೆ ಸೇರಿಸದ್ದಕ್ಕೆ ಪ್ರಶ್ನೆ ಗದಗ ತಾಲೂಕಿನ ಮುಳಗುಂದದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಎಚ್.ಕೆ. ಪಾಟೀಲ್, ಗದಗ ತಾಲೂಕಿನಲ್ಲಿ ಶೇ. 49ರಷ್ಟು ಮಳೆ ಕೊರತೆ ಉಂಟಾಗಿದೆ. ಆದರೂ ಸರ್ಕಾರ ಇದನ್ನು ಬರಪೀಡಿತ ಪ್ರದೇಶವೆಂದು ಯಾಕೆ ಘೋಷಿಸಿಲ್ಲ ಈ ರೀತಿ ಬರ ಪಟ್ಟಿಗೆ ಸೇರಿಸಲು ಯಾರು ಅಡ್ಡಿಯಾಗುತ್ತಿದ್ದಾರೆ ಎಂದು ಸಾಲುಸಾಲು ಪ್ರಶ್ನೆಗಳನ್ನು ಎಸೆದಿದ್ದಾರೆ.

ಸರ್ಕಾರದ ಈ ನಿರ್ಧಾರದಿಂದಾಗಿ ತಾಲೂಕಿನ ರೈತರ ಆಕ್ರೋಶದ ಕಟ್ಟೆ ಒಡೆದಿದೆ ಎಂದು ಅವರು ತಿಳಿಸಿದ್ದಾರೆ.ಸಿಎಂ ಬೆಳೆ ವೀಕ್ಷಣೆ ನಡೆಸಿದ್ದರೂ ತಾಲೂಕಿಗೆ ತಪ್ಪದ ಅನ್ಯಾಯ ಜಿಲ್ಲಾ ಉಸ್ತುವಾರಿ ಸಚಿವರ ಹಾಗೂ ಶಾಸಕರ ನೇತೃತ್ವದಲ್ಲಿ ಈಗಾಗಲೇ ಸಭೆಗಳನ್ನು ನಡೆಸಿ, ಗದಗ ಜಿಲ್ಲೆಯ ಸ್ಪಷ್ಟ ಪರಿಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತರಲಾಗಿತ್ತು. ಅಧಿಕಾರಿಗಳ ವರದಿ ಬಂದ ನಂತರ ಸ್ವತಃ ಮುಖ್ಯಮಂತ್ರಿಗಳೇ ಕದಂಪುರದಿಂದ ಕುರ್ತಕೋಟಿವರೆಗೆ ಬೆಳೆ ಹಾನಿ ವೀಕ್ಷಣೆ ನಡೆಸಿದ್ದರು. ಇಷ್ಟೆಲ್ಲಾ ಪರಿಶೀಲನೆಗಳು ನಡೆದ ಮೇಲೆಯೂ ಗದಗ ತಾಲೂಕನ್ನು ಬರಪೀಡಿತ ಎಂದು ಘೋಷಿಸದಿರುವುದು ರೈತರಿಗೆ ಎಸಗಿದ ದ್ರೋಹ ಎಂದು ಎಚ್.ಕೆ. ಪಾಟೀಲ್ ಬೇಸರ ವ್ಯಕ್ತಪಡಿಸಿದ್ದಾರೆ.

ಸರ್ಕಾರಕ್ಕೆ ಅಕ್ಟೋಬರ್ 10ರ ಗಡುವು ನೀಡಿದ ಎಚ್.ಕೆ. ಪಾಟೀಲ್ ತಾವೂ ಕೂಡ ರೈತ ಕುಟುಂಬದಿಂದ ಬಂದವರಾಗಿದ್ದು, ರೈತರ ಸಂಕಷ್ಟ ಹಾಗೂ ಪರಿಸ್ಥಿತಿಯ ಅರಿವು ತಮಗಿದೆ ಎಂದಿರುವ ಅವರು, "ಅನ್ಯಾಯ ಮತ್ತು ಮೋಸವನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಗದಗ ತಾಲೂಕನ್ನು ಬರಪೀಡಿತ ಎಂದು ಘೋಷಿಸಲು ಕೊನೆಯ ಹಂತದವರೆಗೆ ಶ್ರಮಿಸುತ್ತೇನೆ.

ಶಾಸನಸಭೆಯ ಮೂಲಕ ರಾಜ್ಯ ಸರ್ಕಾರಕ್ಕೆ ಅಕ್ಟೋಬರ್ 10ರವರೆಗೆ ಗಡುವು ನೀಡುತ್ತಿದ್ದೇನೆ. ಅಷ್ಟರೊಳಗೆ ಸರ್ಕಾರ ನಿರ್ಧಾರ ಕೈಗೊಳ್ಳದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ" ಎಂದು ಎಚ್ಚರಿಸಿದ್ದಾರೆ.

ಉತ್ತರ ಕರ್ನಾಟಕದ 27 ತಾಲೂಕುಗಳನ್ನು ಬರದ ಪಟ್ಟಿಗೆ ಸೇರಿಸಲು ಆಗ್ರಹ ರಾಜ್ಯದಲ್ಲಿ ತೀವ್ರ ಮಳೆ ಕೊರತೆ ಹಾಗೂ ಒಣಹವೆ ಮುಂದುವರಿದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಹಾಗೂ ಎರಡನೇ ಹಂತದಲ್ಲಿ 23 ತಾಲೂಕುಗಳನ್ನು ಸೇರಿಸಿ ಒಟ್ಟು 124 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಆದರೆ ಉತ್ತರ ಕರ್ನಾಟಕ ಭಾಗದ 73 ತಾಲೂಕುಗಳ ಪೈಕಿ ಗದಗ ಸೇರಿದಂತೆ 27 ತಾಲೂಕುಗಳನ್ನು ಬರ ಪಟ್ಟಿಯಿಂದ ಹೊರಗಿಡಲಾಗಿದೆ. ಕೈಬಿಡಲಾದ ಉತ್ತರ ಕರ್ನಾಟಕದ ಈ ಎಲ್ಲಾ ತಾಲೂಕುಗಳನ್ನು ತಕ್ಷಣವೇ ಬರಪೀಡಿತ ಎಂದು ಘೋಷಿಸಬೇಕೆಂದು ಅವರು ಒತ್ತಾಯಿಸಿದ್ದಾರೆ.

# ಸೆಪ್ಟೆಂಬರ್ 26 ರಿಂದ 30 ರವರೆಗೆ ಕರ್ನಾಟಕ ಪರ್ವ ಕಾರ್ಯಕ್ರಮ ಆಯೋಜನೆ: ಸಚಿವ ಯು.ಟಿ. ಖಾದರ್



**ಬೆಂಗಳೂರು, ಸೆ.20:** ಕರ್ನಾಟಕ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಸೆಪ್ಟೆಂಬರ್ 26 ರಿಂದ 30 ರವರೆಗೆ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಐದು ದಿನಗಳ ಕಾಲ ಕರ್ನಾಟಕ ಪರ್ವ-2026 ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

ಅವರು ಅಲ್ಪಸಂಖ್ಯಾತರ ನಿರ್ದೇಶನಾಲಯ, ಮೌಲಾನ ಅಜಾದ್ ಭವನದಲ್ಲಿ ಕರ್ನಾಟಕ ಪರ್ವ-2026 ಕಾರ್ಯಕ್ರಮ ಕುರಿತು ವರದಿ ನೀಡಲು ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸೆಪ್ಟೆಂಬರ್ 26 ರಂದು ಬೆಳಗ್ಗೆ 11.00 ಗಂಟೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಕಾರ್ಯಕ್ರಮವನ್ನು ಉದ್ಘಾಟಿಸುವರು. ಸಚಿವರುಗಳು, ಶಾಸಕರುಗಳು ಹಾಗೂ ನಿಗಮ ಮಂಡಳಿಯ ಅಧ್ಯಕ್ಷರುಗಳು ಉಪಸ್ಥಿತರಿರುವರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಅಲ್ಪಸಂಖ್ಯಾತರ ಸಮುದಾಯದ ಕುಶಲಕರ್ಮಿಗಳ ಕಲೆ, ಕೌಶಲ್ಯ, ಕರಕುಶಲ ಉತ್ಪನ್ನಗಳು ಹಾಗೂ ಉದ್ಯಮಶೀಲತೆಗೆ ಉತ್ತೇಜನ ನೀಡುವ ಉದ್ದೇಶದಿಂದ ಕರ್ನಾಟಕ ಪರ್ವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಕರ್ನಾಟಕದ ವಿವಿಧ ಭಾಗಗಳ ಅಲ್ಪಸಂಖ್ಯಾತ ಸಮುದಾಯದ ಕುಶಲಕರ್ಮಿಗಳು ತಯಾರಿಸಿರುವ ವಿಶಿಷ್ಟ ಕರಕುಶಲ ಮತ್ತು ಸಾಂಪ್ರದಾಯಿಕ ಉತ್ಪನ್ನಗಳನ್ನು ಒಂದೇ ವೇದಿಕೆಯಲ್ಲಿ ಪ್ರದರ್ಶಿಸಿ ಅವುಗಳಿಗೆ ವಿಶಾಲ ಮಾರುಕಟ್ಟೆ ಹಾಗೂ ನೇರ ಗ್ರಾಹಕ ಸಂಪರ್ಕ ಕಲ್ಪಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದ್ದು, 180 ಕ್ಕೂ ಹೆಚ್ಚು ಮಳಿಗೆಗಳನ್ನು ಹಾಕಲಾಗುವುದು ಎಂದರು.

ಕಾರ್ಯಕ್ರಮದ ಅಂಗವಾಗಿ ಕುಶಲಕರ್ಮಿಗಳಿಗೆ ಇ-ಕಾಮರ್ಸ್, ಡಿಜಿಟಲ್ ಮಾರ್ಕೆಟಿಂಗ್, ಆಧುನಿಕ ವ್ಯಾಪಾರ ಪದ್ಧತಿ, ಉದ್ಯಮ ಸಂಪರ್ಕ, ಮಾರುಕಟ್ಟೆ ವಿಸ್ತರಣೆ ಹಾಗೂ ವ್ಯವಹಾರ ಜಾಲಬಂಧನ ಕುರಿತು ಜ್ಞಾನವರ್ಧಕ ತರಬೇತಿ ಮತ್ತು ಸಂವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಕರಕುಶಲ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟದ ಜೊತೆಗೆ ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ವೈವಿಧ್ಯಮಯ ಆಹಾರಮೇಳ ಆಯೋಜಿಸಲಾಗುವುದು. ರಾಜ್ಯದ ಕಲೆ, ಸಂಸ್ಕೃತಿ, ಆಹಾರ ಪರಂಪರೆ ವೈವಿಧ್ಯವನ್ನು ಒಂದೇ ವೇದಿಕೆಯಲ್ಲಿ ಸಾರ್ವಜನಿಕರಿಗೆ ಪ್ರದರ್ಶಿಸಲಾಗುವುದು ಎಂದರು.

ಕುಶಲಕರ್ಮಿಗಳ ಆರ್ಥಿಕ ಸ್ವಾವಲಂಬನೆ ಹೆಚ್ಚಿಸುವುದು, ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವುದು, ಸಾಂಪ್ರದಾಯಿಕ ಕಲೆ ಮತ್ತು ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ಉಳಿಸುವುದು ಹಾಗೂ ಅವರ ಉತ್ಪನ್ನಗಳಿಗೆ ಸುಸ್ಥಿರ ಮಾರುಕಟ್ಟೆ ಸೃಷ್ಟಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದ್ದು ಕಲೆ ಉಳಿಯಲಿ, ಕೌಶಲ್ಯ ಬೆಳೆಯಲಿ, ಕುಶಲಕರ್ಮಿಗಳ ಬದುಕು ಸಮೃದ್ಧವಾಗಲಿ ಎಂಬ ಆಶಯದೊಂದಿಗೆ ಕರ್ನಾಟಕ ಪರ್ವವನ್ನು ಆಯೋಜಿಸಲಾಗುತ್ತಿದೆ.

ಕರ್ನಾಟಕ ಪರ್ವ ಸ್ವಾವಲಂಬನೆಯ ದಾರಿಯಲಿ ಎಂಬ ಸಂದೇಶದೊಂದಿಗೆ ಈ ಕಾರ್ಯಕ್ರಮವು ಕರ್ನಾಟಕದ ಸಾಂಸ್ಕೃತಿಕ ವೈವಿಧ್ಯ ಮತ್ತು ಕುಶಲಕರ್ಮಿಗಳ ಪ್ರತಿಭೆಯಲ್ಲಿ ಸಂಭ್ರಮಿಸುವ ವೇದಿಕೆಯಾಗಲಿದೆ. ರಾಜ್ಯದ ಸಾರ್ವಜನಿಕರು, ಕಲಾಸಕ್ತರು, ಉದ್ಯಮಿಗಳು, ವ್ಯಾಪಾರಿಗಳು ಹಾಗೂ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕುಶಲಕರ್ಮಿಗಳ ಉತ್ಪನ್ನಗಳನ್ನು ವೀಕ್ಷಿಸಿ, ಖರೀದಿಸುವ ಮೂಲಕ ಅವರನ್ನು ಪ್ರೋತ್ಸಾಹಿಸಬೇಕು ಎಂದು ಸಚಿವರು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಮನೋಜ್ ಜೈನ್, ನಿರ್ದೇಶಕ ಯಾಸ್ಮಿನ್ ವಾಲಿಕಾರ್, ಜಂಟಿ ನಿರ್ದೇಶಕ ಪುಂಡಲೀಕ ಅನವಾಲ್, ವ್ಯವಸ್ಥಾಪಕ ನಿರ್ದೇಶಕ ಶೇಖ್ ಲತೀಫ್ ಅವರು ಹಾಜರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 86 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 21 2026 ಸೋಮವಾರ

## ಒಳಪುಟಗಳಲ್ಲಿ

ಪಂಜಾಬ್ ಪೊಲೀಸ್ ಅಧಿಕಾರಿ ಹತ್ಯೆ ಪ್ರಕರಣ ಎನ್‌ಕೌಂಟರ್‌ನಲ್ಲಿ ಆರೋಪಿ ಸಾವು - ಪು.4

ಪ್ರಜಾಪ್ರಭುತ್ವದಲ್ಲಿ ಪ್ರಧಾನಿಯನ್ನು ಟೀಕಿಸುವ ಹಕ್ಕು ಇದೆ- ಶಾಸಕ ಸುರೇಶ್ ಕುಮಾರ್‌ಗೆ ಬಿ.ಕೆ. ಹರಿಪ್ರಸಾದ್ ತಿರುಗೇಟು - ಪು.5

## ಹಿರಿಯ ಪತ್ರಕರ್ತೆ ಪಾಯಲ್ ಮೆಹ್ತಾ ನಿಧನ ಗಣ್ಯರ ಸಂತಾಪ



ಮುಂಬೈ, ಸೆ20: ಹಿರಿಯ ಪತ್ರಕರ್ತೆ ಸಿಎನ್‌ಎನ್ ನ್ಯೂಸ್ 18ನ ಅಸಿಸ್ಟೆಂಟ್ ಎಡಿಟರ್ ಪಾಯಲ್ ಮೆಹ್ತಾ ನಿಧನರಾಗಿದ್ದಾರೆ. 46 ವರ್ಷದ ಪಾಯಲ್ ಮೆಹ್ತಾ ಮುಂಬೈನ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಬೆಳಗಿನಜಾವ ಪಾಯಲ್ ಮೆಹ್ತಾ ಅಸ್ವಸ್ಥರಾಗಿದ್ದು, ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ರಾಜಕೀಯ ಮತ್ತು ರಾಷ್ಟ್ರೀಯ ವಿದ್ಯಮಾನಗಳಿಗೆ ಹೆಸರಾಗಿದ್ದ ಪಾಲ್ ಮೆಹ್ತಾ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಕಂಬನಿ ಮಿಡಿದಿದ್ದಾರೆ.

ವರದಿಗಾರಿಕೆಯಲ್ಲಿ ಹೆಸರು ಮಾಡಿದ್ದ ಪಾಯಲ್ ಮೆಹ್ತಾ

ಪಾಯಲ್ ಮೆಹ್ತಾ ಅವರು ಸಂಸತ್ತು, ಸರ್ಕಾರ ಮತ್ತು ಬಿಜೆಪಿಯ ವರದಿಗಳನ್ನು ಒಳಗೊಂಡ ಕಠಿಣ ಪರಿಶ್ರಮಿ ಪತ್ರಕರ್ತರಾಗಿ ಹೆಸರುವಾಸಿಯಾಗಿದ್ದರು. ಹಿರಿಯ ಪತ್ರಕರ್ತೆ ಶೀಲಾಭಟ್, "ಮುಂಬೈಗೆ ಭೇಟಿ ನೀಡಿದಾಗ ಅವರಿಗೆ ಅಸ್ವಸ್ಥತೆ ಉಂಟಾಯಿತು. ಬೆಳಗಿನಜಾವ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಚಿಕಿತ್ಸೆ ನೀಡುವ ಮೊದಲು, ಅವರ ನಾಡಿಮಿಡಿತ ನಿಶ್ಯಬ್ದವಾಯಿತು ಎಂದು ದುಃಖ ವ್ಯಕ್ತಪಡಿಸಿದ್ದಾರೆ.

# ಕಸ್ತೂರಿರಂಗನ್ ವರದಿ: ಜನಾಭಿಪ್ರಾಯ ಆಧರಿಸಿ ನಿರ್ಧಾರ- ಸಿಎಂ ಡಿ.ಕೆ.ಶಿವಕುಮಾರ್

## ಕಸ್ತೂರಿರಂಗನ್ ವರದಿ, ಬರ ಮತ್ತು ರೈತರ ವಿಚಾರಕ್ಕೂ ವಿಶೇಷ ಅಧಿವೇಶನದಲ್ಲಿ ಚರ್ಚೆ

**ಸಕಲೇಶಪುರ, ಸೆ.20: ಕಸ್ತೂರಿ ರಂಗನ್ ವರದಿ ಜಾರಿ ವಿಚಾರದಲ್ಲಿ ಕೇಂದ್ರ ಸರ್ಕಾರಕ್ಕೆ ರಾಜ್ಯದ ನಿಲುವು ತಿಳಿಸುವ ಮುನ್ನ ರೈತರು, ಅರಣ್ಯ ಪ್ರದೇಶದ ಸುತ್ತಮುತ್ತ ವಾಸಿಸುವವರು ಹಾಗೂ ಸ್ಥಳೀಯ ಜನರ ಅಭಿಪ್ರಾಯವನ್ನು ನೇರವಾಗಿ ಪಡೆದು, ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ವಿಸ್ತೃತ ಚರ್ಚೆ ನಡೆಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.**





ಭಾನುವಾರ ಸಕಲೇಶಪುರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕಸ್ತೂರಿ ರಂಗನ್ ವರದಿಯನ್ನು ರಾಜ್ಯ ಸರ್ಕಾರ ಈ ಹಿಂದೆಯೇ ತಿರಸ್ಕರಿಸಿತ್ತು. ಆದರೆ ಕೇಂದ್ರ ಸರ್ಕಾರ ಮತ್ತೆ ರಾಜ್ಯದ ಅಭಿಪ್ರಾಯ ಸೆ.27ರೊಳಗೆ ತಿಳಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ಈ ಕುರಿತು ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರೊಂದಿಗೆ ಚರ್ಚಿಸಲಾಗುತ್ತಿದೆ ಎಂದರು. ವಿರೋಧಪಕ್ಷದವರಿಗೆ ರಾಜಕಾರಣ ಮುಖ್ಯವಾಗಿರಬಹುದು; ನಮಗೆ ಜನರ ಬದುಕು ಮುಖ್ಯ ಎಂದು ಅವರು ಹೇಳಿದರು.

**ಕಸ್ತೂರಿ ರಂಗನ್ ವರದಿಗೆ ರಾಜ್ಯದ ವಿರೋಧ ಮುಂದುವರಿಕೆ:**

ಕಸ್ತೂರಿರಂಗನ್ ವರದಿಯನ್ನು ರಾಜ್ಯ ಸರ್ಕಾರ ಹಿಂದಿನಿಂದಲೂ ವಿರೋಧಿಸುತ್ತಾ ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಅವಧಿಯಲ್ಲಿಯೂ ರಾಜ್ಯದ ವತಿಯಿಂದ ವರದಿಯನ್ನು ತಿರಸ್ಕರಿಸಲಾಗಿತ್ತು. ಆದರೆ ಕೇಂದ್ರ ಸರ್ಕಾರ ಮತ್ತೆ ಈ ವಿಚಾರವನ್ನು ರಾಜ್ಯಕ್ಕೆ ಕಳುಹಿಸಿರುವ ಹಿನ್ನೆಲೆಯಲ್ಲಿ ಜನರ ಅಭಿಪ್ರಾಯ ಪಡೆದು ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ವರದಿಯಿಂದ ಉಂಟಾಗಬಹುದಾದ ಪರಿಣಾಮಗಳು, ಜನರ ಬದುಕಿನ ಮೇಲೆ ಬೀರುವ ಪರಿಣಾಮ, ರೈತರ ಸಮಸ್ಯೆಗಳು ಹಾಗೂ ಅರಣ್ಯ ಪ್ರದೇಶದ ಸುತ್ತಮುತ್ತ ವಾಸಿಸುವ ಜನರ ಆತಂಕಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುತ್ತಿದೆ ಎಂದರು.

**ಕಸ್ತೂರಿರಂಗನ್ ವರದಿ, ಬರ ಮತ್ತು ರೈತರ ವಿಚಾರಕ್ಕೂ ವಿಶೇಷ ಅಧಿವೇಶನದಲ್ಲಿ ಚರ್ಚೆ:**

ಕಸ್ತೂರಿರಂಗನ್ ವರದಿ ಸೇರಿದಂತೆ ಜನರಿಗೆ ಸಂಬಂಧಿಸಿದ ಪ್ರಮುಖ ವಿಚಾರಗಳ ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆಯಲಾಗಿದೆ. ಅಧಿವೇಶನದಲ್ಲಿ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರಿಗೆ ವಿಸ್ತೃತವಾಗಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಅವಕಾಶ ನೀಡಲಾಗುವುದು ಹೇಳಿದರು. ಜನರ ಭಾವನೆ ಏನು, ರೈತರ ಭಾವನೆ ಏನು, ಅರಣ್ಯದ ಪಕ್ಕದಲ್ಲಿ ವಾಸಿಸುವ ಜನರ ಪರಿಸ್ಥಿತಿ ಏನು ಎಂಬುದನ್ನು ತಿಳಿದುಕೊಂಡು, ನಂತರ ಸದನದಲ್ಲಿ ಚರ್ಚೆ ಮಾಡುತ್ತೇವೆ' ಎಂದು ಅವರು ಹೇಳಿದರು. ಕಸ್ತೂರಿರಂಗನ್ ವರದಿ ಕುರಿತು ಈಗಾಗಲೇ ವಿವಿಧ ಜಿಲ್ಲೆಗಳ ಶಾಸಕರು ಹಾಗೂ ಜನಪ್ರತಿನಿಧಿಗಳೊಂದಿಗೆ ಚರ್ಚೆ ನಡೆಸಿರುವುದಾಗಿ ಎಂದು ತಿಳಿಸಿದರು. ಉಡುಪಿ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಜನರ ಅಭಿಪ್ರಾಯ ಸಂಗ್ರಹಿಸಿದ್ದು, ಇದೀಗ ಹಾಸನ ಜಿಲ್ಲೆಯ ಸಕಲೇಶಪುರ ಭಾಗಕ್ಕೆ ಭೇಟಿ ನೀಡಲಾಗಿದೆ. 6 ರಾಜ್ಯಗಳ ಪೈಕಿ ಹೆಚ್ಚು ತಿಂದರೆ ಕರ್ನಾಟಕಕ್ಕೆ ಆಗುತ್ತಿದೆ. ರಾಜ್ಯದ 20 ಸಾವಿರ ಚ.ಕಿ.ಮೀ ಪ್ರದೇಶ ಇದರ ವ್ಯಾಪ್ತಿಗೆ ಸೇರಿದೆ. ಕಸ್ತೂರಿ ರಂಗನ್ ಹಾಗೂ ಅವರ ಸಮಿತಿಯ 10 ಜನ ಸದಸ್ಯರು ಈ ಭಾಗದ ಜನರನ್ನು ಭೇಟಿ ಮಾಡಿಲ್ಲ, ಜನರ ಜೀವನ ನೋಡಿಲ್ಲ. ಉಪಗ್ರಹ ಸಮೀಕ್ಷೆ ಮಾಡಿದ್ದಾರೆ. ಇದರ ಮಧ್ಯೆ ಈ ವರದಿ ಜಾರಿ ಆದರೆ, ಇದು ರೈತರ ಪಾಲಿನ ಮರಣ ಶಾಸನ. ಇದನ್ನು ಅನುಷ್ಠಾನ ಮಾಡಬಾರದು. ಇದನ್ನು ಅಧಿವೇಶನದಲ್ಲಿ ಈ ವರದಿಯನ್ನು ತಿರಸ್ಕರಿಸಿ ನಿರ್ಣಯ ಹೊರಡಿಸ ಬೇಕು.

> ಕಸ್ತೂರಿರಂಗನ್ ವಿಚಾರವಾಗಿ ಅಧಿವೇಶನದಲ್ಲಿ ಚರ್ಚೆ ಮಾಡಿ, ತೀರ್ಮಾನ ಮಾಡಿದ ಬಳಿಕ ಶಾಸಕರು, ಸಂಸದರನ್ನು ಒಳಗೊಂಡ ಸರ್ವಪಕ್ಷ ನಿಯೋಗವನ್ನು ಪ್ರಧಾನಮಂತ್ರಿ ಹಾಗೂ ಕೇಂದ್ರ ಸಚಿವರ ಬಳಿಗೆ ಕರೆದೊಯ್ದು ನಿಮ್ಮ ಅಭಿಪ್ರಾಯವನ್ನು ಮುಟ್ಟಿಸುತ್ತೇವೆ"
>
> – ಸಿಎಂ ಡಿ.ಕೆ.ಶಿವಕುಮಾರ್

**ಜನರ ಮನೆ ಬಾಗಿಲಿಗೆ ಸರ್ಕಾರ:**

ಸರ್ಕಾರ ಮತ್ತು ಜನರ ನಡುವೆ ಇರುವ ಅಂತರವನ್ನು ಕಡಿಮೆ ಮಾಡುವುದು ತಮ್ಮ ಉದ್ದೇಶ ಎಂದು ಹೇಳಿದರು. ಸರ್ಕಾರಕ್ಕೂ ಜನರಿಗೂ ಮಧ್ಯೆ ಇರುವ ಗೋಡೆಯನ್ನು ಒಡೆಯಬೇಕು. ಎಷ್ಟು ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವೋ ಅಷ್ಟು ಸಮಸ್ಯೆ ಗಳನ್ನು ಬಗೆಹರಿಸಲು ಪ್ರಯತ್ನ ಮಾಡುತ್ತೇವೆ' ಎಂದರು. ಪ್ರತಿ ಶನಿವಾರ ಸಚಿವರು ಹಾಗೂ ಶಾಸಕರು ಕಡ್ಡಾಯವಾಗಿ ಜನರ ಮಧ್ಯೆ ತೆರಳಿ ಅಹವಾಲು ಸ್ವೀಕರಿಸುವಂತೆ ಸೂಚಿಸಲಾಗಿದೆ. ಜನರ ಸಮಸ್ಯೆಗಳಿಗೆ ಅಧಿಕಾರಿಗಳು ಸಹಕಾರ ನೀಡುವಂತೆ ಕ್ರಮ ಕೈಗೊಳ್ಳಲಾಗಿದೆ. ಈ ಉದ್ದೇಶದಿಂದ 'ಪ್ರಜಾಸೇವಾ' ವ್ಯವಸ್ಥೆಯನ್ನೂ ಆರಂಭಿಸಲಾಗಿದ್ದು, ಹಂತ ಹಂತವಾಗಿ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿದರು.

**ಸಕಲೇಶಪುರದಲ್ಲಿ ಕಾಡಾನೆ ಸಮಸ್ಯೆ ಗಂಭೀರ ಅಧಿವೇಶನದಲ್ಲಿ ಚರ್ಚೆ :**

ಸಕಲೇಶಪುರ ಭಾಗದಲ್ಲಿ ಕಾಡಾನೆಗಳ ಹಾವಳಿ ತೀವ್ರವಾಗಿದ್ದು, ಕಳೆದ ಒಂದು ದಶಕದಿಂದ ಈ ಸಮಸ್ಯೆ ಮುಂದುವರಿದಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ಕಸ್ತೂರಿ ರಂಗನ್ ವರದಿಯ ಜೊತೆಗೆ ಕಾಡಾನೆಗಳ ಹಾವಳಿ, ರೈತರ ಸಮಸ್ಯೆಗಳು ಹಾಗೂ ಅರಣ್ಯ ಪ್ರದೇಶದ ಸುತ್ತಮುತ್ತ ವಾಸಿಸುವ ಜನರ ಸಮಸ್ಯೆಗಳ ಬಗ್ಗೆಯೂ ಸಮಗ್ರವಾಗಿ ಚರ್ಚಿಸಲಾಗುವುದು ಎಂದರು. ನಾಳೆ ಶಾಸಕರು ಬಂದು ಮಾತನಾಡಲಿ, ಸಚಿವರು ಮಾತನಾಡಲಿ, ಎಲ್ಲರೂ ಮಾತನಾಡಲಿ. ಜನರ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಕ್ರಮ ಕೈಗೊಳ್ಳುತ್ತೇವೆ? ಎಂದು ಅವರು ಹೇಳಿದರು.

**ಉದ್ಯೋಗ ಸೃಷ್ಟಿಸಿ, ವಲಸೆ ತಪ್ಪಿಸಲು ಪ್ರವಾಸೋದ್ಯಮ ನೀತಿ:**

ಕಳೆದ ಐದು ದಿನಗಳಲ್ಲಿ ಕಲಬುರ್ಗಿ, ಮಂಗಳೂರು, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಪ್ರವಾಸ ಮಾಡು ತ್ತಿರುವೆ. ಮಂಗಳೂರಿನಲ್ಲಿ ಯುವಕರು ವಲಸೆ ತಪ್ಪಿಸಿ ಅಲ್ಲೇ ಉದ್ಯೋಗ ಸೃಷ್ಟಿಸಲು ಪ್ರವಾಸೋದ್ಯಮ ನೀತಿ ರೂಪಿಸಿದೆ. ಮಲೆನಾಡಿನಲ್ಲೂ ಇದೇ ಪರಿಸ್ಥಿತಿ ಇರುವುದರಿಂದ ಕರಾವಳಿ ಜೊತೆಗೆ ಮಲೆನಾಡು ಭಾಗಕ್ಕೆ ಪ್ರವಾಸೋದ್ಯಮ ನೀತಿ ರೂಪಿಸಿ ಬಂಡವಾಳ ಹೂಡಿಕೆದಾರರಿಗೆ ಉತ್ತೇಜನ ನೀಡಲು ಮುಂದಾಗಿದ್ದೇವೆ" ಎಂದು ತಿಳಿಸಿದರು.

ಸಚಿವ ಶಿವಲಿಂಗೇ ಗೌಡ, ಸಂಸದಶ್ರೇಯಸ್ ಪಟೇಲ್, ಜಿ.ಸಿ.ಚಂದ್ರಶೇಖರ್, ಶಾಸಕರಾದ ಸಿಮೆಂಟ್ ಮಂಜು, ಟಿ.ಡಿ.ರಾಜೇಗೌಡ, ಸಿಎಂ ರಾಜಕೀಯ ಕಾರ್ಯದರ್ಶಿ ಎ.ಎಸ್.ಪೊನ್ನಣ್ಣ, ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್, ಜಿಲ್ಲಾಧಿಕಾರಿ ಲತಾಕುಮಾರಿ, ಮಾಜಿ ಶಾಸಕರಾದ ಎಚ್.ಕೆ.ಕುಮಾರಸ್ವಾಮಿ, ಬಿ.ಆರ್.ಗುರುದೇವ್, ಎಚ್.ಎಂ.ವಿಶ್ವನಾಥ್, ಗೋಪಾಲಸ್ವಾಮಿ, ಕಾಂಗ್ರೆಸ್ ಮುಖಂಡರಾದ ಮುರಳಿ ಮೋಹನ್ ಮತ್ತಿತರರು ಹಾಜರಿದ್ದರು.

## ಕಸ್ತೂರಿರಂಗನ್ ವರದಿ ಜಾರಿಗೆ ಬಿಜೆಪಿ ವಿರೋಧ: ಅಶೋಕ್



ವಿಶೇಷ ಅಧಿವೇಶನದಲ್ಲಿ ಕಸ್ತೂರಿರಂಗನ್ ವರದಿ ಕುರಿತು ಬಿಜೆಪಿ ತನ್ನ ನಿಲುವನ್ನು ಸ್ಪಷ್ಟವಾಗಿ ಮಂಡಿಸಲಿದೆ ಎಂದು ಆರ್. ಅಶೋಕ್ ಹೇಳಿದರು. ಪಶ್ಚಿಮ ಘಟ್ಟಗಳ ಪರಿಸರ ಸಂರಕ್ಷಣೆ ಅತ್ಯಂತ ಮುಖ್ಯ. ಆದರೆ ಪರಿಸರ ಸಂರಕ್ಷಣೆಯ ಹೆಸರಿನಲ್ಲಿ ಮಲೆನಾಡಿನ ಜನರ ಜೀವನ, ಕೃಷಿ, ಮೂಲಸೌಕರ್ಯ ಮತ್ತು ಬದುಕಿಗೆ ಅತಿಯಾದ ನಿರ್ಬಂಧಗಳು ಬರುವಂತಾಗಬಾರದು. ಸ್ಥಳೀಯ ಜನರ ಬದುಕು ಮತ್ತು ಪರಿಸರ, ಇವೆರಡನ್ನೂ ಸಮತೋಲನದಲ್ಲಿ ನೋಡಬೇಕು, ಎಂದರು. ಕಸ್ತೂರಿರಂಗನ್ ವರದಿಯ ಪ್ರಕ್ರಿಯೆಯ ಇತಿಹಾಸವನ್ನು ಉಲ್ಲೇಖಿಸಿದ ಅವರು, UPA ಸರ್ಕಾರದ ಅವಧಿಯಲ್ಲಿ ಪಶ್ಚಿಮ ಘಟ್ಟಗಳ ಕುರಿತ ಗಾಡ್ಗಿಳ್ ವರದಿಯ ನಂತರ ಕಸ್ತೂರಿರಂಗನ್ ನೇತೃತ್ವದ ಉನ್ನತ ಮಟ್ಟದ ಕಾರ್ಯಪಡೆ ರಚನೆಯಾಯಿತು. ಕಸ್ತೂರಿರಂಗನ್ ಸಮಿತಿ ತನ್ನ ವರದಿಯನ್ನು 2013ರಲ್ಲಿ ಸಲ್ಲಿಸಿತು. ಆದ್ದರಿಂದ ಇಂದು ಕಾಂಗ್ರೆಸ್ ಈ ವಿಚಾರದಲ್ಲಿ ಬಿಜೆಪಿ ಮೇಲೆ ಆರೋಪ ಮಾಡುವ ಮೊದಲು ತನ್ನದೇ ಹಿಂದಿನ ನಿಲುವು ಮತ್ತು ನಿರ್ಧಾರಗಳನ್ನು ಜನರಿಗೆ ವಿವರಿಸಬೇಕು ಎಂದರು. ನಮ್ಮ ಸರ್ಕಾರದ ಅವಧಿಯಲ್ಲಿಯೂ ಕಸ್ತೂರಿರಂಗನ್ ವರದಿ ಜಾರಿಗೆ ವಿರೋಧ ವ್ಯಕ್ತಪಡಿಸಿ ಕೇಂದ್ರಕ್ಕೆ ಪತ್ರ ಬರೆಯಲಾಗಿತ್ತು. ಈಗಲೂ ಬಿಜೆಪಿ ಅದೇ ನಿಲುವಿನಲ್ಲಿ ಇದೆ. ಮಲೆನಾಡಿನ ಜನರ ಹಿತಾಸಕ್ತಿಯನ್ನು ರಕ್ಷಿಸುವುದು ನಮ್ಮ ನಿಲುವು, ಎಂದು ಹೇಳಿದರು.

## ಅ.1 ರಿಂದ ಎಲ್ಪಿಜಿ ಬುಕ್ಕಿಂಗ್‌ಗೆ ಆಧಾರ್ e-KYC ಕಡ್ಡಾಯ




**ಬೆಂಗಳೂರು, ಸೆ.20:** ಎಲ್ಪಿಜಿ ಸಿಲಿಂಡರ್ (ಬಳಕೆದಾರರಿಗೆ ಅಕ್ಟೋಬರ್ 01 ರಿಂದ ಗ್ಯಾಸ್ ಬುಕ್ಕಿಂಗ್ ಮಾಡಲು ಆಧಾರ್ ಇ-ಕೆವೈಸಿ ಮಾಡಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ಒಂದು ವೇಳೆ ಗ್ರಾಹಕರು ಆಧಾರ್ ಇ-ಕೆವೈಸಿ ಮಾಡಿಸದಿದ್ದರೆ ಗ್ಯಾಸ್ ಬುಕ್ ಮಾಡಲು ಸಾಧ್ಯವಾಗುವುದಿಲ್ಲ. ಅಷ್ಟೇ ಅಲ್ಲದೆ, ಆಧಾರ್ ಬಯೋಮೆಟ್ರಿಕ್ ಪ್ರಕ್ರಿಯೆ ಪೂರ್ಣಗೊಳ್ಳದಿದ್ದರೆ ಸಬ್ಸಿಡಿ ದರದಲ್ಲಿ ಎಲ್ಪಿಜಿ ಸಿಲಿಂಡರ್ ಲಭ್ಯವಿರುವುದಿಲ್ಲ. ದೇಶದಲ್ಲಿ ಇದುವರೆಗೂ 27.43 ಕೋಟಿ ಗ್ರಾಹಕರು ಮಾತ್ರ ಆಧಾರ್ ಇ-ಕೆವೈಸಿ ಮಾಡಿಸಿದ್ದು, ಇನ್ನು 3.16 ಕೋಟಿ ಜನರು ಇ-ಕೆವೈಸಿ ಮಾಡಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಗ್ರಾಹಕರಿಗೆ ಅನುಕೂಲ ಮಾಡಿಕೊಡಲು ತೈಲ ಕಂಪನಿಗಳು ಪ್ರಮುಖ ಆಯ್ಕೆಗಳನ್ನು ನೀಡಿವೆ.

ಮನೆಬಾಗಿಲಲ್ಲೇಇ-ಕೆವೈಸಿ –ಮನೆಗೆ ಸಿಲಿಂಡರ್ ಡೆಲಿವರಿ ಮಾಡಲು ಬರುವ ವ್ಯಕ್ತಿಯ ಮೊಬೈಲ್ ಆಯಪ್ನಲ್ಲಿ ಬೆರಳಚ್ಚು (ಬಯೋಮೆಟ್ರಿಕ್) ನೀಡುವ ಮೂಲಕ ಇ-ಕೆವೈಸಿ ಪ್ರಕ್ರಿಯೆಯನ್ನು ಸುಲಭವಾಗಿ ಮುಗಿಸಬಹುದು.ಗ್ಯಾಸ್‌ಏಜೆನ್ಸಿಗೆ ಭೇಟಿ ನೀಡಿ–ಗ್ರಾಹಕರು ತಮ್ಮ ಹತ್ತಿರದ ಗ್ಯಾಸ್ ಏಜೆನ್ಸಿ ಬಳಿಗೆ ನೇರವಾಗಿ ತೆರಳಿ ಆಧಾರ್ ಇ-ಕೆವೈಸಿ ಮಾಡಿಸಬಹುದು.

ಗ್ರಾಹಕರು ತಮ್ಮ ಮೊಬೈಲ್ ಆಯಪ್ಗಳ ಮೂಲಕ ಮನೆಯಲ್ಲೇ ಕುಳಿತು ಸ್ವತಃ ಇ-ಕೆವೈಸಿ ಮಾಡಿಕೊಳ್ಳಬಹುದು. ಇಂಡಿಯನ್ ಆಯಿಲ್ ಬಳಕೆದಾರರು ಇಂಡಿಯನ್ ಆಯಿಲ್ ಒನ್ ಭಾರತ್ ಗ್ಯಾಸ್ ಬಳಕೆದಾರರು ಹಲೋ ಬಿಪಿಸಿಎಲ್ ಮತ್ತು ಹೆಚ್ಪಿ ಬಳಕೆದಾರರು ಹೆಚ್ ಪಿ ಪೇ (ಆಯಪ್ ಮೂಲಕ ಸೆಲ್ಫ್ ಇ-ಕೆವೈಸಿ ಮಾಡಿಕೊಳ್ಳಲು ಅವಕಾಶವಿದೆ.

ಒಂದು ವೇಳೆ ಸಬ್ಸಿಡಿ ದರದಲ್ಲಿ ಗ್ಯಾಸ್ ಬೇಡವೆಂದಾದಲ್ಲಿ, ತಮಗೆ ಮೊಬೈಲ್ ಆಯಪ್ ಬಯೋಮೆಟ್ರಿಕ್ ಮಾಡಿಸುವುದು ಅಗತ್ಯವಿಲ್ಲ ಎಂದು ಗ್ರಾಹಕರು ಘೋಷಿಸಬೇಕು.ಮಾರುಕಟ್ಟೆ ದರ ಅನ್ವಯ: ಬಯೋಮೆಟ್ರಿಕ್ ನೀಡದ ಗ್ರಾಹಕರು ಸಬ್ಸಿಡಿ ರಹಿತವಾಗಿ, ಮಾರುಕಟ್ಟೆ ದರದಲ್ಲೇ ಗ್ಯಾಸ್ ಸಿಲಿಂಡರ್ ಪಡೆಯಬೇಕಾಗುತ್ತದೆ.

### ಆಕ್ಸ್‌ಫರ್ಡ್ ಎಕನಾಮಿಕ್ಸ್ ಗ್ಲೋಬಲ್ ಸಿಟೀಸ್ ಇಂಡೆಕ್ಸ್: ವಿಶ್ವದ ಅಗ್ರ ನಗರಪಟ್ಟಿಯಲ್ಲಿ ಕರ್ನಾಟಕದ 6 ನಗರಗಳು

## ಜಾಗತಿಕ ನಗರಗಳ ಸೂಚ್ಯಂಕದಲ್ಲಿ ನವೋದ್ಯಮ ರಾಜಧಾನಿ ಬೆಂಗಳೂರಿಗೆ 311ನೇ ಶ್ರೇಯಾಂಕ

**ಬೆಂಗಳೂರು, ಸೆ.20:** ಪ್ರತಿಷ್ಠಿತ ಆಕ್ಸ್‌ಫರ್ಡ್ ಎಕನಾಮಿಕ್ಸ್ ಗ್ಲೋಬಲ್ ಸಿಟೀಸ್ ಇಂಡೆಕ್ಸ್' ಬಿಡುಗಡೆಯಾಗಿದ್ದು, ಜಾಗತಿಕ ಮಟ್ಟದ ಪ್ರಮುಖ 1,000 ನಗರಗಳ ಪಟ್ಟಿಯಲ್ಲಿ ಕರ್ನಾಟಕದ ಒಟ್ಟು ಆರು ನಗರಗಳು ಸ್ಥಾನ ಪಡೆದುಕೊಂಡಿವೆ. ಆರ್ಥಿಕತೆ, ಮಾನವ ಬಂಡವಾಳ, ಜೀವನದ ಗುಣಮಟ್ಟ, ಪರಿಸರ ಮತ್ತು ಆಡಳಿತ ಎಂಬ ಐದು ಪ್ರಮುಖ ಜಾಗತಿಕ ಮಾನದಂಡಗಳ ಅಡಿಯಲ್ಲಿ ಈ ನಗರಗಳನ್ನು ಮೌಲ್ಯಮಾಪನ ಮಾಡಲಾಗಿದೆ.ಕರ್ನಾಟಕದ ಬೆಂಗಳೂರು, ಮೈಸೂರು, ಮಂಗಳೂರು, ಬೆಳಗಾವಿ ಹಾಗೂ ಹುಬ್ಬಳ್ಳಿ–ಧಾರವಾಡ ಸೇರಿದಂತೆ ಒಟ್ಟು ಆರು ನಗರಗಳು ಈ ಜಾಗತಿಕ ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ಆಕ್ಸ್‌ಫರ್ಡ್ ಎಕನಾಮಿಕ್ಸ್ ವಿಶ್ವದ ಪ್ರಮುಖ ಸ್ವತಂತ್ರ ಆರ್ಥಿಕ ಸಲಹಾ ಸಂಸ್ಥೆಯಾಗಿದ್ದು, 200ಕ್ಕೂ ಹೆಚ್ಚು ದೇಶಗಳು, 100 ಕೈಗಾರಿಕಾ ವಲಯಗಳು ಹಾಗೂ 8,000 ನಗರಗಳು ಮತ್ತು ಪ್ರದೇಶಗಳನ್ನು ಒಳಗೊಂಡಂತೆ ಅಧ್ಯಯನ ನಡೆಸುತ್ತದೆ. ಸಂಕೀರ್ಣ ಹಾಗೂ ಅನಿಶ್ಚಿತ ಜಾಗತಿಕ ಪರಿಸ್ಥಿತಿಯಲ್ಲಿ ವೇಗವಾಗಿ ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಅಗತ್ಯವಾದ ಮಾಹಿತಿ ಮತ್ತು ಪರಿಹಾರಗಳನ್ನು ಸಂಸ್ಥೆ ಒದಗಿಸುತ್ತದೆ. ಆಕ್ಸ್‌ಫರ್ಡ್ ಜಾಗತಿಕ ನಗರಗಳ ಸೂಚ್ಯಂಕವನ್ನು ಆಕ್ಸ್‌ಫರ್ಡ್ ಎಕನಾಮಿಕ್ಸ್ನ ನಗರಗಳು ಮತ್ತು ಪ್ರದೇಶಗಳ ತಂಡ ಸಿದ್ಧಪಡಿಸುತ್ತದೆ. 40ಕ್ಕೂ ಹೆಚ್ಚು ಅರ್ಥಶಾಸ್ತ್ರಜ್ಞರನ್ನು ಒಳಗೊಂಡಿರುವ ಈ ತಂಡಕ್ಕೆ ನಗರ ಪ್ರದೇಶಗಳ ದತ್ತಾಂಶ, ನಗರಗಳ ಬೆಳವಣಿಗೆ ಹಾಗೂ ಭವಿಷ್ಯದ ಆರ್ಥಿಕ ಅಂದಾಜುಗಳ ಕುರಿತು ವಿಶೇಷ ಪರಿಣತಿ ಇದೆ.2026ರ ಆಕ್ಸ್‌ಫರ್ಡ್ ಜಾಗತಿಕ ನಗರಗಳ ಸೂಚ್ಯಂಕದಲ್ಲಿ ಭಾರತದ 1,000 ನಗರಗಳ ಪೈಕಿ 100 ನಗರಗಳು ಜಾಗತಿಕ ಮಟ್ಟದಲ್ಲಿ ಸ್ಥಾನ ಪಡೆದಿವೆ. ಇದು ಜಾಗತಿಕ ನಗರ ವ್ಯವಸ್ಥೆಯಲ್ಲಿ ಭಾರತದ ನಗರಗಳ ಹೆಚ್ಚುತ್ತಿರುವ ಪ್ರಾಮುಖ್ಯವನ್ನು ಪ್ರತಿಬಿಂಬಿಸುತ್ತದೆ. ಭಾರತದ ನಗರಗಳ ಪೈಕಿ ಬೆಂಗಳೂರು 3111ನೇ ಜಾಗತಿಕ ಸ್ಥಾನ ಪಡೆದಿದ್ದು, ಮುಂಬೈ 330ನೇ, ಚೆನ್ನೈ 381ನೇ ಹಾಗೂ ಹೈದರಾಬಾದ್ 421ನೇ ಸ್ಥಾನದಲ್ಲಿವೆ.2026ರ ಆಕ್ಸ್‌ಫರ್ಡ್ ಜಾಗತಿಕ ನಗರಗಳ ಸೂಚ್ಯಂಕದಲ್ಲಿ ವಿಶ್ವದ 1,000 ಪ್ರಮುಖ ನಗರಗಳಿಗೆ ವಿವಿಧ ವಿಭಾಗಗಳ ಆಧಾರದ ಮೇಲೆ ಶ್ರೇಯಾಂಕ ನೀಡಲಾಗಿದೆ. ಸಮೃದ್ಧ ಪರಂಪರೆ, ಬೆಳೆಯುತ್ತಿರುವ ಭವಿಷ್ಯ ವಿಭಾಗದಲ್ಲಿ ಕಲಬುರಗಿ 781ನೇ ಜಾಗತಿಕ ಸ್ಥಾನ ಪಡೆದಿದೆ. ಭಾರತದ ನವೋದ್ಯಮ ರಾಜಧಾನಿ ವಿಭಾಗದಲ್ಲಿ ಬೆಂಗಳೂರು 311ನೇ ಸ್ಥಾನ, ಜಾಗತಿಕ ಆಕರ್ಷಣೆಯ ಪರಂಪರೆಯ ನಗರ ವಿಭಾಗದಲ್ಲಿ ಮೈಸೂರು 628ನೇ ಸ್ಥಾನ ಪಡೆದಿವೆ.ಬೆಳವಣಿಗೆಗೆ ಚಾಲನೆ ನೀಡುವ ಕರಾವಳಿ ಕೇಂದ್ರ ವಿಭಾಗದಲ್ಲಿ ಮಂಗಳೂರು 665ನೇ ಸ್ಥಾನ, ಅವಕಾಶಗಳ ನಗರ ವಿಭಾಗದಲ್ಲಿ ಬೆಳಗಾವಿ 683ನೇ ಸ್ಥಾನ ಹಾಗೂ ಎಂಜಿನಿಯರಿಂಗ್, ಕೈಗಾರಿಕಾ ಮತ್ತು ಶಿಕ್ಷಣ ಕೇಂದ್ರ ವಿಭಾಗದಲ್ಲಿ ಹುಬ್ಬಳ್ಳಿ–ಧಾರವಾಡ 707ನೇ ಜಾಗತಿಕ ಸ್ಥಾನ ಪಡೆದಿವೆ.

## ಇಂದಿನಿಂದ 3 ದಿನ ವಿಧಾನಮಂಡಲದ ವಿಶೇಷ ಅಧಿವೇಶನ



**ಬೆಂಗಳೂರು, ಸೆ.20:** ರಾಜ್ಯದಲ್ಲಿ ಎದುರಾಗಿರುವ ಗಂಭೀರ ಬರ ಪರಿಸ್ಥಿತಿ ಮತ್ತು ಪಶ್ಚಿಮಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿ ಕುರಿತು ಚರ್ಚಿಸಲು ಸೆ.21 ರಿಂದ23ರವರೆಗೆ 3 ದಿನಗಳ ಕಾಲ ವಿಶೇಷ ಅಧಿವೇಶನವನ್ನು ರಾಜ್ಯ ಸರ್ಕಾರ ಕರೆದಿದೆ. ಈ ಅಧಿವೇಶನ ಸುಗಮ ಮತ್ತು ಅರ್ಥಪೂರ್ಣವಾಗಿ ನಡೆಸಲು ಸಹಕರಿಸುವಂತೆ ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಪ್ರತಿಪಕ್ಷ ನಾಯಕರಿಗೆ ಮನವಿ ಮಾಡಿದ್ದಾರೆ.

ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ಮತ್ತು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರಿಗೆ ಪತ್ರ ಬರೆದಿರುವ ಸಚಿವರು, ಈ ಎರಡು ಸೂಕ್ಷ್ಮ ವಿಷಯಗಳ ಬಗ್ಗೆ ಪಕ್ಷಾತೀತವಾಗಿ, ಆರೋಪ-ಪ್ರತ್ಯಾರೋಪಗಳಿಗೆ ಸೀಮಿತವಾಗದೆ ವಾಸ್ತವಾಂಶ, ಅಂಕಿಅಂಶ, ತಜ್ಞರ ಅಭಿಪ್ರಾಯ ಮತ್ತು ಜನರ ಹಿತಾಸಕ್ತಿ ಆಧರಿಸಿ ಚರ್ಚೆ ನಡೆದು ಕೇಂದ್ರಕ್ಕೆ ರಾಜ್ಯದ ನಿಲುವು ತಿಳಿಸುವ ಅಗತ್ಯವಿದೆ ಎಂದಿದ್ದಾರೆ.

**124 ತಾಲೂಕು ಬರಪೀಡಿತ ಎಂದು ಘೋಷಣೆ**

ಈಗಾಗಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ಅವರು ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿ ಅವಲೋಕಿಸಿದ್ದು, 2 ಹಂತದಲ್ಲಿ ವರದಿ ತರಿಸಿಕೊಂಡು 124 ತಾಲೂಕುಗಳನ್ನು ಬರಪೀಡಿತ ಎಂದು ಅಧಿಕೃತವಾಗಿ ಘೋಷಣೆ ಮಾಡಲಾಗಿದೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಿಗೆ ಕುಡಿಯುವ ನೀರಿನ ಸಮಸ್ಯೆ ನಿಭಾಯಿಸಲು ತಲಾ 1 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಅಲ್ಲದೆ, 17 ಜಿಲ್ಲೆಗಳ 53 ತಾಲೂಕುಗಳಲ್ಲಿ 3ನೇ ಹಂತದ ಬರ ಪರಿಸ್ಥಿತಿ ಮತ್ತು ಬೆಳೆನಷ್ಟದ ಬಗ್ಗೆ ಪರಿಶೀಲನೆ ನಡೆಯುತ್ತಿದೆ. ಬರಪೀಡಿತ ತಾಲೂಕುಗಳಲ್ಲಿ ರೈತರ ಕೆಸಿಸಿ ಸಾಲ, ಕೃಷಿಸಾಲ, ಹೈನುಗಾರಿಕೆ, ರೇಷ್ಮೆ, ಮೀನುಗಾರಿಕೆ ಸಾಲಗಳ ಮರುಪಾವತಿಗೆ 12 ತಿಂಗಳ ನಿಷೇಧಾವಧಿ ಘೋಷಿಸಲಾಗಿದ್ದು, ಸಾಧಾರಣ ಬರದ ತಾಲೂಕುಗಳಲ್ಲಿ 36 ತಿಂಗಳು ಮತ್ತು ತೀವ್ರ ಬರದ ತಾಲೂಕುಗಳಲ್ಲಿ 60 ತಿಂಗಳು (5 ವರ್ಷ) ವರೆಗೆ ವಿಸ್ತರಿಸಲು ಬ್ಯಾಂಕುಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

**ಜಲಾಶಯಗಳಲ್ಲಿ 100 ಟಿಎಂಸಿ ನೀರು ಕೊರತೆ**

ಕಳೆದೆರಡು ವರ್ಷಕ್ಕೆ ಹೋಲಿಸಿದರೆ ಜಲಾಶಯಗಳಲ್ಲಿ 100 ಟಿಎಂಸಿ ನೀರು ಕಡಿಮೆ ಸಂಗ್ರಹವಾಗಿದೆ. ಅದರಲ್ಲೂ ಕಾವೇರಿ ಜಲಾನಯನ ವ್ಯಾಪ್ತಿಯಲ್ಲಿ ಶೇ.20ರಷ್ಟು ಮಾತ್ರ ನೀರು ಸಂಗ್ರಹವಾಗಿದೆ.

ರಾಜ್ಯದ ಪ್ರಮುಖ 22 ಜಲಾಶಯಗಳಲ್ಲಿ 357.54 ಟಿಎಂಸಿ ಮಾತ್ರ ನೀರಿದ್ದು, ಶೇ.66.78ರಷ್ಟು ಮಾತ್ರ ಭರ್ತಿಯಾಗಿವೆ. ಕಾವೇರಿ ಕೊಳ್ಳದ ಕೆಆರ್‌ಎಸ್ , ಕಬಿನಿ,ಹಾರಂಗಿ ಮತ್ತು ಹೇಮಾವತಿಯಲ್ಲಿ ಕೇವಲ 39.79 ಟಿಎಂಸಿ ನೀರು ಸಂಗ್ರಹವಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

# ಮತದಾರರ ಪಟ್ಟಿಗೆ ಅನರ್ಹರ ಸೇರ್ಪಡೆಗೆ ಎಸ್‌ಐಆರ್: ಕಪಿಲ್ ಸಿಬಲ್ ಅಸಮಾಧಾನ

**ನವದೆಹಲಿ, ಸೆ.20:** ಚುನಾವಣಾ ಆಯೋಗವು ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಶೀಲನೆ ಪ್ರಕ್ರಿಯೆಯು ಅರ್ಹ ಮತದಾರರನ್ನು ಕೈಬಿಟ್ಟು, ಅನರ್ಹರನ್ನು ಸೇರಿಸಿಕೊಳ್ಳುವ ಯತ್ನವಾಗಿದೆ ಎಂದು ರಾಜ್ಯಸಭಾ ಸದಸ್ಯ ಕಪಿಲ್ ಸಿಬಲ್ ತೀವ್ರವಾಗಿ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿಯನ್ನು ಅಧಿಕಾರಕ್ಕೇರಿಸುವುದೇ ಆಯೋಗದ ಗುರಿಯಾಗಿದ್ದರೆ, ಇನ್ನು ದೇಶದಲ್ಲಿ ಚುನಾವಣೆಗಳ ಅಗತ್ಯವೇನಿದೆ. ಎಸ್‌ಐಆರ್ ಪರಿಶೀಲನೆಯ ಅಂಗವಾಗಿ ಹೆಚ್ಚುವರಿ ದಾಖಲೆಗಳನ್ನು ಒದಗಿಸುವಂತೆ ಆಯೋಗವು ನೋಟಿಸ್ ಜಾರಿಸಿರುವುದಕ್ಕೆ ಸಿಬಲ್ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವತಃ ತಮಗೇ ಈ ಪರಿಸ್ಥಿತಿ ಎದುರಾಗಿರುವಾಗ ಇನ್ನು ಸಾಮಾನ್ಯ ಜನರ ಕಥೆ ಏನು ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಚುನಾವಣಾ ಆಯೋಗದ ಮುಖ್ಯಸ್ಥರ ಹುದ್ದೆಯಲ್ಲಿರುವ ಜ್ಞಾನೇಶ್ ಕುಮಾರ್ ಅವರ ನಿರ್ಧಾರಗಳನ್ನು ಪ್ರಶ್ನಿಸಿರುವ ಅವರು, ಕರಡುಪಟ್ಟಿಯಲ್ಲಿ ತಮ್ಮ ಹೆಸರಿದ್ದರೂ ನೋಟಿಸ್ ನೀಡಿರುವುದು ಆಶ್ಚರ್ಯ ತಂದಿದೆ ಎಂದಿದ್ದಾರೆ.

**ದಿಲ್ಲಿಯ ಎಸ್‌ಐಆರ್ ಪರಿಶೀಲನೆ: ನೋಟಿಸ್ ಪಡೆದ ಪ್ರಮುಖ ಗಣ್ಯರು**



ರಾಷ್ಟ್ರ ರಾಜಧಾನಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ಪರಿಶೀಲನಾ ಅಭಿಯಾನದಡಿ ಚುನಾವಣಾ ಆಯೋಗವು ನೋಟಿಸ್ ನೀಡಿರುವ ಲಕ್ಷಾಂತರ ಜನರ ಪೈಕಿ ದೇಶದ ಅನೇಕ ಪ್ರಮುಖ ವ್ಯಕ್ತಿಗಳು ಹಾಗೂ ಗಣ್ಯರು ಕೂಡ ಸೇರಿದ್ದಾರೆ.

ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿ ಅರುಣ್ ಮಿಶ್ರಾ, ಮಾಜಿ ಚುನಾವಣಾ ಆಯುಕ್ತ ಅರುಣ್ ಗೋಯಲ್, ಹಿಂದಿನ ವಿದೇಶಾಂಗ ಕಾರ್ಯದರ್ಶಿ ಸಲ್ಮಾನ್ ಹೈದರ್ ಹಾಗೂ ಮಾಜಿ ಕೇಂದ್ರ ಸಚಿವ ಸುಬ್ರಮಣಿಯನ್ ಸ್ವಾಮಿ ಅವರಿಗೂ ಹೆಚ್ಚುವರಿ ಸಾಕ್ಷ್ಯ ಒದಗಿಸುವಂತೆ ಸೂಚಿಸಲಾಗಿದೆ.

ಇದರೊಂದಿಗೆ ಹಿರಿಯ ವಕೀಲರಾದ ದುಷ್ಯಂತ್ ದವೆ, ಇಂದಿರಾ ಜೈಸಿಂಗ್, ಆನಂದ್ ಗ್ರೋವರ್, ಸುಪ್ರೀಂಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್, ಬಿ.ಎಸ್. ಗವಾಯಿ, ರಾಮಮಂದಿರ ನಿರ್ಮಾಣ ಸಮಿತಿ ಮುಖ್ಯಸ್ಥ ನೃಪೇಂದ್ರ ಮಿಶ್ರಾ, ಮಾಜಿ ಗೃಹ ಕಾರ್ಯದರ್ಶಿ ವಾಲ್ಮೀಕಿ ಪ್ರಸಾದ್, ಮಾಜಿ ಸಂಸದ ಪಿನಾಕಿ ಮಿಶ್ರಾ, ಲೋಕಸಭೆಯ ಮಾಜಿ ಪ್ರಧಾನ ಕಾರ್ಯದರ್ಶಿ ಪಿ.ಡಿ.ಟಿ. ಆಚಾರ್ಯ ಹಾಗೂ ನಗರಾಭಿವೃದ್ಧಿ ತಜ್ಞ ಕೆ.ಟಿ. ರವೀಂದ್ರನ್ ಅವರಿಗೂ ನೋಟಿಸ್ ತಲುಪಿದೆ.

2002ರ ಹಿಂದಿನ ಮತದಾರರ ಪಟ್ಟಿಯೊಂದಿಗೆ ಹೆಸರು ತಾಳೆಯಾಗದಿರುವುದು ಹಾಗೂ ವಯಸ್ಸಿನಲ್ಲಿ ವ್ಯತ್ಯಾಸವಿರುವ ಕಾರಣಗಳನ್ನು ಮುಂದಿಟ್ಟುಕೊಂಡು ಕಪಿಲ್ ಸಿಬಲ್ ದಂಪತಿ ಮಾತ್ರವಲ್ಲದೆ, ಹಿರಿಯ ರಾಜಕಾರಣಿ ಎಲ್.ಕೆ. ಅಡ್ವಾಣಿ, ಮಾಜಿ ಉಪರಾಷ್ಟ್ರಪತಿ ಜಗದೀಪ್ ಧನಕರ್, ಚುನಾವಣಾ ಆಯುಕ್ತ ಎಸ್.ಎಸ್. ಸಂಧು, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಹಾಗೂ ಮಾಜಿ ಸಿಎಂ ಅರವಿಂದ ಕೇಜ್ರಿವಾಲ್ ಅವರಿಗೂ ನೋಟಿಸ್ ಜಾರಿಯಾಗಿರುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

# ಕಾಂಗ್ರೆಸ್ ಸರ್ಕಾರ ಘೋಷಣೆಗಳಿಗಷ್ಟೇ ಸೀಮಿತ: ಅಶೋಕ್ ಟೀಕೆ

**ಬೆಂಗಳೂರು, ಸೆ, 20:** ರಾಜ್ಯದಲ್ಲಿ ತೀವ್ರ ಬರಗಾಲ ಎದುರಾಗಿದ್ದು, ರೈತರು ಹಾಗೂ ಗ್ರಾಮೀಣ ಜನತೆ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರ ಕೇವಲ ಘೋಷಣೆಗಳಲ್ಲೇ ಕಾಲ ಕಳೆಯುತ್ತಿದೆ. ಸೆ. 21ರಿಂದ ಆರಂಭವಾಗಲಿರುವ ವಿಶೇಷ ಅಧಿವೇಶನಕ್ಕೂ ಮುನ್ನವೇ ಸರ್ಕಾರ ತನ್ನ ಬದ್ಧತೆಯನ್ನು ಕಾರ್ಯರೂಪದಲ್ಲಿ ತೋರಿಸಬೇಕು ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೋಟೆ ಕೊಳ್ಳೆಹೊಡೆದು ಹೋದ ಮೇಲೆ ದಿಡ್ಡಿ ಬಾಗಿಲು ಹಾಕಿದಂತಾಗಿದೆ ಕಾಂಗ್ರೆಸ್ ಸರ್ಕಾರದ ಪರಿಸ್ಥಿತಿ ಎಂದು ವಾಗ್ದಾಳಿ ನಡೆಸಿದರು. ಬರಗಾಲ ಬಂದು ತಿಂಗಳುಗಳೇ ಕಳೆದಿವೆ. ರೈತರು ಬೆಳೆ ನಷ್ಟದಿಂದ ಸಂಕಷ್ಟದಲ್ಲಿದ್ದಾರೆ. ನಾವು ಪ್ರತಿ ಎಕರೆಗೆ 50,000 ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದೇವೆ. ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಕ್ಷೇತ್ರಗಳಿಗೆ ತಲಾ 10 ಕೋಟಿ ಬಿಡುಗಡೆ ಮಾಡಿ, ತುರ್ತು ಬೋರ್ವೆಲ್ ಸೇರಿದಂತೆ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದೇವೆ. ಆದರೆ ಸರ್ಕಾರ ಈವರೆಗೆ ಸಮರ್ಪಕ ಪರಿಹಾರ ಕ್ರಮಗಳನ್ನು ಕೈಗೊಂಡಿಲ್ಲ, ಎಂದು ಆರೋಪಿಸಿದರು. ಒಂದು ಕಡೆ ರಾಜ್ಯದ ವಿವಿಧ ಭಾಗಗಳಿಗೆ ತೆರಳಿ ಸಾವಿರಾರು ಕೋಟಿ ರೂ.ಗಳ ಯೋಜನೆಗಳನ್ನು ಘೋಷಿಸಲಾಗುತ್ತಿದೆ. ಮತ್ತೊಂದು ಕಡೆ ಬರಪೀಡಿತ ರೈತರಿಗೆ ತಕ್ಷಣದ ಪರಿಹಾರ ನೀಡಲು ಹಣವಿಲ್ಲ. ಇದು ಅಭಿವೃದ್ಧಿಯ ಸರ್ಕಾರವಲ್ಲ, ಘೋಷಣೆಗಳ ಸರ್ಕಾರ, ಎಂದು ಟೀಕಿಸಿದರು.

ರಾಜ್ಯ ಸರ್ಕಾರ ವಿಶೇಷ ಅಧಿವೇಶನ ಕರೆಯಲು ಮುಂದಾಗಿರುವುದನ್ನು ಉಲ್ಲೇಖಿಸಿದ ಅವರು, ಚರ್ಚೆ ಮಾಡುವುದು ಸ್ವಾಗತಾರ್ಹ. ಆದರೆ ಚರ್ಚೆಗೂ ಮುನ್ನ ರೈತರಿಗೆ ಮತ್ತು ಜನರಿಗೆ ಸರ್ಕಾರದ ಬಳಿ ಹಣವಿದೆ, ಸರ್ಕಾರ ಕೆಲಸ ಮಾಡುತ್ತಿದೆ ಎಂಬ ವಿಶ್ವಾಸ ಮೂಡಬೇಕು. ಕನಿಷ್ಠ ಕುಡಿಯುವ ನೀರಿಗಾಗಿ ತಲಾ 10 ಕೋಟಿ ಬಿಡುಗಡೆ ಮಾಡಿ, ಎಂದು ಒತ್ತಾಯಿಸಿದರು.

ಬರಗಾಲದ ಬಗ್ಗೆ ಸರ್ಕಾರದ ನಿಜವಾದ ಆರ್ಥಿಕ ಬದ್ಧತೆ ಏನು ಎಂಬುದು ಜನರಿಗೆ ತಿಳಿಯಬೇಕು. ರಾಜ್ಯದ ಹಣಕಾಸಿನ ಪರಿಸ್ಥಿತಿ, ವಿವಿಧ ಇಲಾಖೆಗಳು ಮತ್ತು ಸಂಸ್ಥೆಗಳಿಗೆ ಇರುವ ಬಾಕಿ, ಸರ್ಕಾರದ ಸಾಲದ ಹೊರೆ ಹಾಗೂ ಗ್ಯಾರಂಟಿಗಳ ಹಣಕಾಸಿನ ಪರಿಣಾಮ ಸೇರಿದಂತೆ ಸಂಪೂರ್ಣ ವಿವರಗಳನ್ನು ಒಳಗೊಂಡ ಶ್ವೇತಪತ್ರವನ್ನು ಸರ್ಕಾರ ಬಿಡುಗಡೆ ಮಾಡಬೇಕು, ಎಂದು ಆರ್. ಅಶೋಕ್ ಆಗ್ರಹಿಸಿದರು.

ಸರ್ಕಾರ ಕೊರತೆ ಬಜೆಟ್ ಮಂಡಿಸಿದೆ. ಖಜಾನೆಯ ಸ್ಥಿತಿ ಏನು, ಎಷ್ಟು ಬಾಕಿ ಇದೆ, ಯಾವ ಇಲಾಖೆಗೆ ಎಷ್ಟು ಹಣ ನೀಡಬೇಕಿದೆ ಎಂಬುದನ್ನು ಸರ್ಕಾರವೇ ಜನರ ಮುಂದೆ ಇಡಬೇಕು. ಕೇಂದ್ರ ಸರ್ಕಾರದ ನೆರವು ಕೇಳುವುದರಲ್ಲಿ ತಪ್ಪಿಲ್ಲ. ಆದರೆ ರಾಜ್ಯ ಸರ್ಕಾರ ಮೊದಲು ತನ್ನ ಸಾಮರ್ಥ್ಯಕ್ಕೆ ಅನುಗುಣವಾಗಿ ಪರಿಹಾರ ಬಿಡುಗಡೆ ಮಾಡಿ, ನಂತರ ಕೇಂದ್ರದಿಂದ ಹೆಚ್ಚುವರಿ ನೆರವು ಕೇಳಬೇಕು ಎಂದರು. ಕೇಂದ್ರಕ್ಕೆ ಸರ್ವಪಕ್ಷ ನಿಯೋಗ ಕರೆದೊಯ್ಯುವುದಾದರೆ, ನಾವು ರಾಜ್ಯದಿಂದ ಇಷ್ಟು ಹಣ ಬಿಡುಗಡೆ ಮಾಡಿದ್ದೇವೆ; NDRF ನಿಯಮಗಳ ಪ್ರಕಾರ ಕೇಂದ್ರದಿಂದ ಇಷ್ಟು ನೆರವು ಬೇಕು ಎಂದು ಕೇಳುವ ಸ್ಥಿತಿಯಲ್ಲಿ ಸರ್ಕಾರ ಇರಬೇಕು ಎಂದು ಹೇಳಿದರು.



**ರೈತರು, ಕುಡಿಯುವ ನೀರಿಗೆ ತಕ್ಷಣ ಹಣ ಬಿಡುಗಡೆ ಮಾಡಿ**

**ಕನಿಷ್ಠ 1 ವಾರ ಅಧಿವೇಶನ ನಡೆಸಲು ಒತ್ತಾಯ:** ಬರಗಾಲ ಮತ್ತು ಕಸ್ತೂರಿರಂಗನ್ ವರದಿಯಂತಹ ಮಹತ್ವದ ಎರಡು ವಿಚಾರಗಳನ್ನು ಕೇವಲ ಮೂರು ದಿನಗಳಲ್ಲಿ ಸಮಗ್ರವಾಗಿ ಚರ್ಚಿಸಲು ಸಾಧ್ಯವಿಲ್ಲ. ಆದ್ದರಿಂದ ಸೋಮವಾರ ನಡೆಯಲಿರುವ ಕಲಾಪ ಸಲಹಾ ಸಮಿತಿ ಸಭೆಯಲ್ಲಿ ಕನಿಷ್ಠ ಒಂದು ವಾರ ಅಧಿವೇಶನ ನಡೆಸಬೇಕು ಎಂದು ಬಿಜೆಪಿ ಒತ್ತಾಯಿಸಲಿದೆ, ಎಂದರು. ಬರ ಮತ್ತು ಕಸ್ತೂರಿರಂಗನ್ ಹೊರತಾಗಿ ಏಕಖಆ ನೇಮಕಾತಿ ಕುರಿತ ಆರೋಪಗಳು, ಬಿಡದಿ ಟೌನ್‌ಶಿಪ್, ನೈಸ್ ಟೋಲ್ ಸೇರಿದಂತೆ ರಾಜ್ಯದ ಹಲವು ಪ್ರಮುಖ ವಿಚಾರಗಳನ್ನೂ ಚರ್ಚಿಸಲು ಅವಕಾಶ ನೀಡಬೇಕು ಎಂದು ಆಗ್ರಹಿಸಿದರು.

**ಕೆಪಿಎಸ್‌ಸಿ ನೇಮಕಾತಿ ಪ್ರಕ್ರಿಯೆಯಲ್ಲಿನ ಹಗರಣ:** ಕೆಪಿಎಸ್‌ಸಿ ಅಭ್ಯರ್ಥಿಗಳು ತಮ್ಮನ್ನು ಭೇಟಿ ಮಾಡಿ ಪ್ರತಿಭಟನೆಗೆ ಅವಕಾಶ ನೀಡಲಾಗುತ್ತಿಲ್ಲ ಎಂದು ಅಹವಾಲು ಸಲ್ಲಿಸಿದ್ದಾರೆ ಎಂದು ಆರ್. ಅಶೋಕ್ ಹೇಳಿದರು. ಪ್ರತಿಭಟನೆ ಮಾಡಲು ಸಂವಿಧಾನಾತ್ಮಕ ಹಕ್ಕಿದೆ. KPSC ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾರೇ ತಪ್ಪು ಮಾಡಿದ್ದರೂ, ಅವರು ಯಾವ ಪಕ್ಷದವರೇ ಆಗಿರಲಿ, ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಅಭ್ಯರ್ಥಿಗಳ ಅಹವಾಲುಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು, ಎಂದರು.

ಕಾಂಗ್ರೆಸ್ ಶಾಸಕರ ಕ್ಷೇತ್ರಗಳಲ್ಲಿ ಬರ ಪರಿಹಾರ ಕಾಮಗಾರಿಗಳ ಕೊರತೆಯ ಕುರಿತು ಕೇಳಿಬರುತ್ತಿರುವ ಅಸಮಾಧಾನವನ್ನು ಉಲ್ಲೇಖಿಸಿದ ಅವರು, ಸರ್ಕಾರದ ವಿರುದ್ಧ ಸ್ವತಃ ಆಡಳಿತ ಪಕ್ಷದ ಶಾಸಕರೇ ಧ್ವನಿ ಎತ್ತುವ ಪರಿಸ್ಥಿತಿ ನಿರ್ಮಾಣವಾಗಿದೆ. ತಮ್ಮ ಕ್ಷೇತ್ರದ ಜನರ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಾಗದ ಸ್ಥಿತಿ ಶಾಸಕರಿಗೆ ಬಂದಿದ್ದರೆ, ಇದಕ್ಕೆ ಸರ್ಕಾರ ಉತ್ತರ ನೀಡಬೇಕು, ಎಂದರು.

ವಂದೇ ಮಾತರಂ ಕುರಿತು ಮಾತನಾಡಿದ ಆರ್. ಅಶೋಕ್, ದೇಶದ ಸ್ವಾತಂತ್ರ್ಯ ಹೋರಾಟದೊಂದಿಗೆ ಅವಿನಾಭಾವ ಸಂಬಂಧ ಹೊಂದಿರುವ ರಾಷ್ಟ್ರಗೀತೆಯ ಗೌರವದ ವಿಚಾರದಲ್ಲಿ ಕಾಂಗ್ರೆಸ್ ತನ್ನ ನಿಲುವನ್ನು ಸ್ಪಷ್ಟಪಡಿಸಬೇಕು. ಒಂದು ಕಾಲದಲ್ಲಿ ರಾಜಕೀಯ ಒತ್ತಡಗಳ ಹಿನ್ನೆಲೆಯಲ್ಲಿ ಹಾಡಿನ ಕೆಲವು ಭಾಗಗಳನ್ನು ಕೈಬಿಡಲಾಯಿತು. ಇಂದು ಅದೇ ವಿಷಯವನ್ನು ಮತ್ತೆ ಚರ್ಚೆಗೆ ತರುತ್ತಿರುವಾಗ ಕಾಂಗ್ರೆಸ್ ತನ್ನ ಐತಿಹಾಸಿಕ ನಿಲುವನ್ನು ಜನರಿಗೆ ವಿವರಿಸಬೇಕು, ಎಂದರು.

ಜನರ ಭಾವನೆಗಳೊಂದಿಗೆ ರಾಜಕಾರಣ ಮಾಡುವುದು ಯಾರು ಎಂಬುದನ್ನು ಜನರೇ ತೀರ್ಮಾನಿಸುತ್ತಾರೆ. ಆದರೆ ದೇಶದ ರಾಷ್ಟ್ರೀಯ ಸಂಕೇತಗಳು ಮತ್ತು ಸ್ವಾತಂತ್ರ್ಯ ಹೋರಾಟದ ಪರಂಪರೆಯ ವಿಚಾರದಲ್ಲಿ ರಾಜಕೀಯ ಲಾಭಕ್ಕಿಂತ ರಾಷ್ಟ್ರದ ಗೌರವ ಮುಖ್ಯ,? ಎಂದು ಹೇಳಿದರು.

ಅಂತಿಮವಾಗಿ, ಸರ್ಕಾರ ಮೊದಲು ರೈತರಿಗೆ ಹಣ ಬಿಡುಗಡೆ ಮಾಡಲಿ, ಕುಡಿಯುವ ನೀರಿಗೆ ಹಣ ಬಿಡುಗಡೆ ಮಾಡಲಿ. ನಂತರ ಅಧಿವೇಶನದಲ್ಲಿ ಚರ್ಚೆ ಮಾಡಲಿ. ಜನರ ಸಂಕಷ್ಟಕ್ಕೆ ಪರಿಹಾರ ನೀಡುವುದು ಘೋಷಣೆಗಿಂತ ಮುಖ್ಯ, ಎಂದು ಆರ್. ಅಶೋಕ್ ಹೇಳಿದರು.

### ಪಿಯುಸಿ ಪರೀಕ್ಷಾ ಶುಲ್ಕ ಶೇ.50ರಷ್ಟು ಹೆಚ್ಚಳ ಸಲ್ಲದು

ಪದವಿಪೂರ್ವ ಶಿಕ್ಷಣ ಇಲಾಖೆ ಪಿಯುಸಿ ಪರೀಕ್ಷಾ ಶುಲ್ಕವನ್ನು ಶೇಕಡ 50ರಷ್ಟು ಹೆಚ್ಚಳ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ಶುಲ್ಕದ ಹೊರ ಹೊರಿಸಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿಗಳ ಮೇಲೂ ಹೆಚ್ಚಿನ ತೆರಿಗೆ ಹೊರೆ ಹಾಕಿ ಬೊಕ್ಕಸ ತುಂಬಿಸಿಕೊಳ್ಳಲು ಹೊರಟಿರುವ ಕ್ರಮ ಸರಿಯಲ್ಲ ಎಂದಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯಕ್ಕೆ ಬೆಂಬಲ ನೀಡಬೇಕಾದ ರಾಜ್ಯ ಸರ್ಕಾರ, ಶುಲ್ಕದ ಹೊರೆ ಹೆಚ್ಚಿಸಿ ಶಿಕ್ಷಣವನ್ನೂ ದುಬಾರಿ ಮಾಡುತ್ತಿದೆ. ಇದು ಜನಪರ ಸರ್ಕಾರವಲ್ಲವೆನ್ನುವುದನ್ನು ಮತ್ತೊಮ್ಮೆ ನಿರೂಪಿಸಿದೆ ಎಂದು ತಿಳಿಸಿದ್ದಾರೆ.

# ದುರ್ಗಕ್ಕೆ ಹರಿದುಬಂದ ಭದ್ರಾ ಜಲ: ಸೆ.24ರಂದು ಸಿಎಂ ಡಿ.ಕೆ.ಶಿವಕುಮಾರ್ ಅವರಿಂದ ಗಂಗಾಪೂಜೆ

**ಕೋಟೆನಾಡಿನ ದಶಕಗಳ ಕನಸು ನನಸು, 6 ಟಿಎಂಸಿ ಪೈಕಿ 3 ಟಿಎಂಸಿ ಪೂರೈಕೆ : ಚಲುವರಾಯಸ್ವಾಮಿ**

**ಚಿತ್ರದುರ್ಗ:** ಬರಗಾಲದ ನಾಡು ಎಂದೇ ಹಣೆಪಟ್ಟಿ ಕಟ್ಟಿಕೊಂಡಿದ್ದ ಕೋಟೆನಾಡು ಚಿತ್ರದುರ್ಗದ ಜನತೆಯ ದಶಕಗಳ ಕನಸು ಕೊನೆಗೂ ನನಸಾಗಿದೆ. ಭದ್ರಾ ಮೇಲ್ದಂಡೆ ಯೋಜನೆ ಮೂಲಕ ಬಯಲುಸೀಮೆಗೆ ಜೀವಜಲ ಹರಿಸುವ ರಾಜ್ಯ ಸರ್ಕಾರದ ಸಂಕಲ್ಪ ಸಾಕಾರಗೊಂಡಿದೆ.

ಈ ಐತಿಹಾಸಿಕ ಸಾಧನೆಯ ಸಂಕೇತವಾಗಿ ಸೆ.24 ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಿತ್ರದುರ್ಗಕ್ಕೆ ಭೇಟಿ ನೀಡಿ ಭದ್ರಾಜಲಕ್ಕೆ ಗಂಗಾಪೂಜೆ ನೆರವೇರಿಸಲಿದ್ದಾರೆ. ದಾವಣಗೆರೆ ರಸ್ತೆಯಲ್ಲಿರುವ ಮಾದಾರ ಚನ್ನಯ್ಯ ಗುರುಪೀಠದ ಪಕ್ಕದ ಮೈದಾನದಲ್ಲಿ ನಡೆಯಲಿರುವ ಬೃಹತ್ ಕಾರ್ಯಕ್ರಮದ ಸಿದ್ಧತೆಯನ್ನು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಖುದ್ದು ಪರಿಶೀಲಿಸಿ ಮಾಹಿತಿ ಹಂಚಿಕೊಂಡರು. ದಶಕಗಳಿಂದ ಈ ಭಾಗದ ಜನತೆ ನೀರಿಗಾಗಿ ಚಾತಕ ಪಕ್ಷಿಗಳಂತೆ ಕಾಯುತ್ತಿದ್ದರು. ಎತ್ತಿನಹೊಳೆ ಯೋಜನೆಯಂತೆಯೇ ಭದ್ರಾ ನೀರು ಕೂಡ ಮರೀಚಿಕೆಯಾಗಬಹುದು ಎಂಬ ಅಪನಂಬಿಕೆ ಜನರಲ್ಲಿ ಮನೆಮಾಡಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಆ ಎಲ್ಲಾ ಅಪನಂಬಿಕೆಗಳನ್ನು ದೂರಮಾಡಿ ನುಡಿದಂತೆ ನಡೆದಿದೆ. ವರ್ಷದೊಳಗೆ ಎತ್ತಿನಹೊಳೆ ನೀರು ಚಿಕ್ಕಬಳ್ಳಾಪುರಕ್ಕೂ ಹರಿಯಲಿದೆ ಎಂದರು.ಪ್ರಸ್ತುತ ಈ ಬೃಹತ್ ಯೋಜನೆಯಡಿ ಒಟ್ಟು 6 ಟಿಎಂಸಿ ನೀರಿನ ಪೈಕಿ 3 ಟಿಎಂಸಿ ನೀರನ್ನು ಪ್ರಾಯೋಗಿಕವಾಗಿ ಹರಿಸಲಾಗಿದೆ. ನವೆಂಬರ್ ಒಳಗೆ ತುಂಗಾ ನದಿಯಿಂದ 17.5 ಟಿಎಂಸಿ ನೀರನ್ನು ಲಿಫ್ಟ್ ಮಾಡುವ ಮೂಲಕ ಯೋಜನೆಯನ್ನು ಪೂರ್ಣ ಪ್ರಮಾಣದಲ್ಲಿ ಯಶಸ್ವಿಗೊಳಿಸಲು ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ. ಇದಕ್ಕಾಗಿ ಅರಣ್ಯ ಇಲಾಖೆಯ ಅನುಮತಿ ಪಡೆದು ವಿದ್ಯುತ್ ಟವರ್ ಕಾಮಗಾರಿ ಚುರುಕುಗೊಳಿಸಲಾಗಿದೆ ಎಂದರು.



ಆದರೆ ಈ ಮಹತ್ವಾಕಾಂಕ್ಷಿ ಯೋಜನೆಗೆ ಕೇಂದ್ರ ಸರ್ಕಾರದ ಅಸಹಕಾರ ಎದ್ದು ಕಾಣುತ್ತಿದೆ. ಬೊಮ್ಮಾಯಿ ಸರ್ಕಾರದ ಅವಧಿಯಲ್ಲಿ ಘೋಷಣೆಯಾಗಿದ್ದ 5,300 ಕೋಟಿ ರೂ. ಅನುದಾನವನ್ನು ಕೇಂದ್ರ ಈವರೆಗೂ ಬಿಡುಗಡೆ ಮಾಡಿಲ್ಲ. ರಾಜ್ಯ ಸರ್ಕಾರವೇ ಈಗಾಗಲೇ 12 ಸಾವಿರ ಕೋಟಿ ರೂ. ಖರ್ಚು ಮಾಡಿದ್ದರೂ ಲೆಕ್ಕ ಕೇಳುವ ನೆಪದಲ್ಲಿ ಕೇಂದ್ರ ವಿಳಂಬ ಮಾಡುತ್ತಿರುವುದು ಅಸಮಂಜಸ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದಿಂದ ಆಯ್ಕೆಯಾದ ಬಿಜೆಪಿ ಸಂಸದರು ಕೇಂದ್ರ ನಾಯಕರ ಬಳಿ ಈ ಬಗ್ಗೆ ತುಟಿ ಬಿಚ್ಚುತ್ತಿಲ್ಲ, ಆದರೆ ಒಂದೇ ಒಂದು ಸ್ಥಾನ ಗೆಲ್ಲದ ತಮಿಳುನಾಡಿಗೆ ಕೇಂದ್ರ ಹೆಚ್ಚಿನ ಸಹಕಾರ ನೀಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.



ಸಕಲೇಶಪುರದ ಕೆಂಪೇಗೌಡ ವೃತ್ತದಲ್ಲಿರುವ ನಾಡಪ್ರಭು ಕೆಂಪೇಗೌಡರ ಪ್ರತಿಮೆಗೆ ಸಿಎಂ ಡಿ ಕೆ ಶಿವಕುಮಾರ್ ಅವರು ಭಾನುವಾರ ಪುಷ್ಪನಮನ ಸಲ್ಲಿಸಿದರು. ಸಚಿವ ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಕಾಂಗ್ರೆಸ್ ಮುಖಂಡರಾದ ಮುರಳಿ ಮೋಹನ್ ಇದ್ದರು.

# ಜಿಬಿಎ ವ್ಯಾಪ್ತಿ 30 ನಿಮಿಷಗಳಲ್ಲಿ ಕಟ್ಟಡ ನಕ್ಷೆ ಮಂಜೂರಾತಿ: ಕೃಷ್ಣ ಬೈರೇಗೌಡ

**ಬೆಂಗಳೂರು, ಸೆ.20:** ಕಟ್ಟಡ ನಕ್ಷೆ ಮಂಜೂರಾತಿಗಾಗಿ ಇನ್ನು ಮುಂದೆ ತಿಂಗಳುಗಟ್ಟಲೆ ಕಾಯಬೇಕಿಲ್ಲ. 50x80 ಅಡಿ ಅಥವಾ 4,000 ಚದರ ಅಡಿ ವಿಸ್ತೀರ್ಣದ ವಸತಿ ನಿವೇಶನಗಳಲ್ಲಿ ಗರಿಷ್ಠ ನಾಲ್ಕು ವಸತಿ ಘಟಕಗಳವರೆಗೆ ಕಟ್ಟಡ ನಿರ್ಮಿಸಲು ನಂಬಿಕೆ ನಕ್ಷೆ 2.0 ಮೂಲಕ ನಿಯಮಾನುಸಾರ ಸಲ್ಲಿಕೆಯಾಗುವ ನಕ್ಷೆಗಳಿಗೆ 30 ನಿಮಿಷಗಳಲ್ಲೇ ಸ್ವಯಂಚಾಲಿತ ಮಂಜೂರಾತಿ ಪಡೆಯಬಹುದಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಸಂಪೂರ್ಣ ಆನ್‌ಲೈನ್ ಹಾಗೂ ಸ್ವಯಂಚಾಲಿತ ಕಟ್ಟಡ ನಕ್ಷೆ ಮಂಜೂರಾತಿ ವ್ಯವಸ್ಥೆಯನ್ನು ಒಳಗೊಂಡ ನಂಬಿಕೆ ನಕ್ಷೆ 2.0 ತಂತ್ರಾಂಶವನ್ನು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಲೋಕಾರ್ಪಣೆ ಮಾಡಿದರು. ಈ ಹಿಂದೆ ಕಟ್ಟಡ ನಕ್ಷೆ ಮಂಜೂರಾತಿಗೆ 2ರಿಂದ 3 ತಿಂಗಳವರೆಗೆ ಸಮಯ ಬೇಕಾಗುತ್ತಿತ್ತು. ದಾಖಲೆಗಳ ಪರಿಶೀಲನೆ, ಕಚೇರಿಗಳಿಗೆ ಅಲೆದಾಟ ಸೇರಿದಂತೆ ವಿವಿಧ ಹಂತಗಳಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದರು. ಇದೀಗ ತಂತ್ರಜ್ಞಾನ ಬಳಕೆಯ ಮೂಲಕ ಈ ಪ್ರಕ್ರಿಯೆಯನ್ನು ಸರಳಗೊಳಿಸಲಾಗಿದೆ.




**ಇ–ಖಾತಾ ಸಂಖ್ಯೆ ಸಾಕು:** ಹೊಸ ವ್ಯವಸ್ಥೆಯಲ್ಲಿ ಕಟ್ಟಡ ನಕ್ಷೆ ಸಲ್ಲಿಸುವಾಗ ಖಾತಾ ಸೇರಿದಂತೆ ಹಲವು ದಾಖಲೆಗಳನ್ನು ಪ್ರತ್ಯೇಕವಾಗಿ ಅಪ್ಲೋಡ್ ಮಾಡುವ ಅಗತ್ಯವಿಲ್ಲ. ಅರ್ಹ ಆರ್ಕಿಟೆಕ್ಟ್ ಮೂಲಕ ಆನ್‌ಲೈನ್‌ನಲ್ಲಿ ನಕ್ಷೆ ಸಲ್ಲಿಸಿದ ಬಳಿಕ ಇ–ಖಾತಾ ಸಂಖ್ಯೆಯನ್ನು ನಮೂದಿಸಿದರೆ, ಆಸ್ತಿಯ ಮೂಲ ಮಾಲೀಕತ್ವದ ಮಾಹಿತಿಯನ್ನು ವ್ಯವಸ್ಥೆಯೇ ಸ್ವಯಂಚಾಲಿತವಾಗಿ ಪಡೆದುಕೊಳ್ಳಲಿದೆ. ಸಲ್ಲಿಕೆಯಾದ ಕಟ್ಟಡ ನಕ್ಷೆಯು ನಗರ ಯೋಜನಾ ನಿಯಮಗಳಿಗೆ ಅನುಗುಣವಾಗಿದ್ದರೆ, ಯಾವುದೇ ಮಾನವ ಹಸ್ತಕ್ಷೇಪವಿಲ್ಲದೆ 30 ನಿಮಿಷಗಳಲ್ಲಿ ಮಂಜೂರಾತಿ ದೊರೆಯಲಿದೆ.

**ಮಧ್ಯವರ್ತಿಗಳಿಗೆ ಕಡಿವಾಣ:** ಕಟ್ಟಡ ನಕ್ಷೆ ಮಂಜೂರಾತಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್ಲೈನ್ ಮತ್ತು ಸ್ವಯಂಚಾಲಿತಗೊಳಿಸಿರುವುದರಿಂದ ಮಧ್ಯವರ್ತಿಗಳ ಹಸ್ತಕ್ಷೇಪಕ್ಕೂ ಕಡಿವಾಣ ಬೀಳಲಿದೆ. ಸಾರ್ವಜನಿಕರ ಅಮಾಯಕತೆಯನ್ನು ದುರುಪಯೋಗಪಡಿಸಿಕೊಂಡು ವಂಚನೆ ಅಥವಾ ಶೋಷಣೆ ನಡೆಯದಂತೆ ಪಾರದರ್ಶಕ ವ್ಯವಸ್ಥೆ ರೂಪಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನಿರ್ದೇಶನದಂತೆ ಸಾರ್ವಜನಿಕರಿಗೆ ಸರಳ, ವೇಗದ ಹಾಗೂ ಪಾರದರ್ಶಕ ಸೇವೆ ಒದಗಿಸುವ ಉದ್ದೇಶದಿಂದ ನಂಬಿಕೆ ನಕ್ಷೆ 2.0 ರೂಪಿಸಲಾಗಿದೆ ಎಂದರು.

**ಮೊದಲ ಹಂತದಲ್ಲಿ ಪ್ರಾಯೋಗಿಕ ಜಾರಿ**

ಹೊಸ ವ್ಯವಸ್ಥೆಯನ್ನು ಮೊದಲ ಹಂತದಲ್ಲಿ ಆಯ್ದ ಪ್ರದೇಶಗಳಲ್ಲಿ ಪ್ರಾಯೋಗಿಕವಾಗಿ ಜಾರಿಗೊಳಿಸಲಾಗುತ್ತಿದೆ. ಇದರ ಕಾರ್ಯನಿರ್ವಹಣೆ ಹಾಗೂ ಫಲಿತಾಂಶಗಳನ್ನು ಪರಿಶೀಲಿಸಿದ ಬಳಿಕ GBA ವ್ಯಾಪ್ತಿಯ ಇತರ ಪ್ರದೇಶಗಳಿಗೂ ವಿಸ್ತರಿಸಲಾಗುವುದು.

ಮುಂದಿನ ಹಂತದಲ್ಲಿ ವಾಣಿಜ್ಯ ಕಟ್ಟಡಗಳು ಹಾಗೂ ದೊಡ್ಡ ವಿಸ್ತೀರ್ಣದ ಕಟ್ಟಡಗಳಿಗೂ ಇದೇ ಮಾದರಿಯಲ್ಲಿ ಸರಳೀಕೃತ ಹಾಗೂ ತಂತ್ರಜ್ಞಾನ ಆಧಾರಿತ ಮಂಜೂರಾತಿ ವ್ಯವಸ್ಥೆ ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

**ದುರುಪಯೋಗ ಮಾಡಿದರೆ ಕಠಿಣ ಕ್ರಮ:** ನಂಬಿಕೆ ನಕ್ಷೆ 2.0 ವ್ಯವಸ್ಥೆಯನ್ನು ಸಾರ್ವಜನಿಕರು ಮತ್ತು ಅರ್ಹ ಆರ್ಕಿಟೆಕ್ಟ್‌ಗಳ ಮೇಲಿನ ನಂಬಿಕೆಯ ಆಧಾರದ ಮೇಲೆ ಜಾರಿಗೊಳಿಸಲಾಗಿದೆ. ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಂಡಿರುವುದು ಕಂಡುಬಂದರೆ ಸಂಬಂಧಪಟ್ಟವರ ವಿರುದ್ಧ ಕಠಿಣ ಶಿಕ್ಷೆ ಹಾಗೂ ಕ್ರಮ ಕೈಗೊಳ್ಳಲಾಗುವುದು ಎಂದು ಕೃಷ್ಣ ಬೈರೇಗೌಡ ಎಚ್ಚರಿಕೆ ನೀಡಿದರು. ಇದೆ ವೇಳೆ ಉಃ೦ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್, ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್. ರಮೇಶ್, ಮುಖ್ಯ ನಗರ ಯೋಜಕ ಪಿ. ಸುನೀಲ್ ಕುಮಾರ್, ಅಪರ ಮುಖ್ಯ ನಗರ ಯೋಜಕ ಬಿ.ಎನ್. ಗಿರೀಶ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# 2035ರ ವೇಳೆಗೆ 20 ಶತಕೋಟಿ ಡಾಲರ್ ಕ್ವಾಂಟಂ ಆರ್ಥಿಕತೆ ನಿರ್ಮಿಸುವ ಬೃಹತ್ ಗುರಿ

**ಬೆಂಗಳೂರು, ಸೆ 20:** 2027ರಲ್ಲಿ ನಡೆಯಲಿರುವ ಎರಡನೇ ಕ್ವಾಂಟಂ ಇಂಡಿಯಾ ಬೆಂಗಳೂರು ಸಮಿಟ್ ಅನ್ನು ಜಾಗತಿಕ ಮಟ್ಟದ ಪ್ರಮುಖ ಕ್ವಾಂಟಂ ವೇದಿಕೆಯಾಗಿಸಲು ಕರ್ನಾಟಕ ಸರ್ಕಾರ ಉದ್ದೇಶಿಸಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ಹೇಳಿದರು.

> ಜಾಗತಿಕ ಕ್ವಾಂಟಂ ಹಬ್ ಆಗಲು ಕರ್ನಾಟಕ ಸಿದ್ಧ: ಕ್ವಾಂಟಂ ತಂತ್ರಜ್ಞಾನಗಳ ನಿರ್ಮಾಣ, ಸಂಶೋಧನೆ ಮತ್ತು ಉದ್ಯಮ ವಿಸ್ತರಣೆಗೆ ಸೂಕ್ತ ಪರಿಸರ ವ್ಯವಸ್ಥೆ ಕಲ್ಪಿಸಲು ಒತ್ತು.
> **ಡಾ.ಅಜಯ್ ಧರ್ಮಸಿಂಗ್ । ಸಚಿವ**

ಬೆಂಗಳೂರಿನಲ್ಲಿ ನಡೆದ ಕ್ಯೂ ಎನ್ ಯು ಲ್ಯಾಬ್ಸ್ ನ 10ನೇ ವಾರ್ಷಿಕೋತ್ಸವ ಹಾಗೂ ಕ್ಯೂ ಶೀಲ್ಡ್ 2.0 ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಂದಿನ ಸಮಾವೇಶದಲ್ಲಿ ಜಾಗತಿಕ ಸಂಶೋಧಕರು, ತಂತ್ರಜ್ಞಾನ ಕಂಪನಿಗಳು, ಸ್ಟಾರ್ಟ್ ಅಪ್‌ಗಳು, ಹೂಡಿಕೆದಾರರು ಮತ್ತು ನೀತಿನಿರ್ಧಾರಕರ ಹೆಚ್ಚಿನ ಪಾಲ್ಗೊಳ್ಳುವಿಕೆಗೆ ಒತ್ತು ನೀಡಲಾಗುವುದು ಎಂದರು.




2027ರ ಸಮಿಟ್ ಕೇವಲ ಸಮ್ಮೇಳನವಾಗಿರಬಾರದು. ಸಂಶೋಧನೆ, ಉದ್ಯಮ, ಸ್ಟಾರ್ಟ್‌ಅಪ್‌ಗಳು, ಹೂಡಿಕೆ ಮತ್ತು ಅಂತರರಾಷ್ಟ್ರೀಯ ಸಹಭಾಗಿತ್ವಗಳನ್ನು ಒಂದೇ ವೇದಿಕೆಯಲ್ಲಿ ಸಂಪರ್ಕಿಸುವ ಜಾಗತಿಕ ಕ್ವಾಂಟಂ ವೇದಿಕೆಯಾಗಬೇಕು, ಎಂದು ಡಾ.ಅಜಯ್ ಧರ್ಮಸಿಂಗ್ ಹೇಳಿದರು.

ರಾಜ್ಯದ ಪ್ರಸ್ತಾವಿತ ಕ್ವಾಂಟಂ ಸಿಟಿ ಸ್ಥಾಪನೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಕ್ಯೂ ಎನ್ ಯು ಲ್ಯಾಬ್ಸ್‌ಗೆ ಸಚಿವರು ಆಹ್ವಾನ ನೀಡಿದರು. ಕ್ವಾಂಟಂ ಸಂಶೋಧನೆ, ಹಾರ್ಡ್‌ವೇರ್, ಸ್ಟಾರ್ಟ್‌ಅಪ್‌ಗಳು, ಪ್ರತಿಭೆ, ಉದ್ಯಮ ಮತ್ತು ವಾಣಿಜ್ಯೀಕರಣವನ್ನು ಒಂದೇ ವ್ಯವಸ್ಥೆಯಲ್ಲಿ ಒಗ್ಗೂಡಿಸುವುದು ಕ್ವಾಂಟಂ ಸಿಟಿಯ ಉದ್ದೇಶವಾಗಿದೆ ಎಂದರು.

ಸಂಶೋಧನೆಯಿಂದ ನೈಜ ಬಳಕೆಯವರೆಗೆ ಸ್ವದೇಶಿ ಕ್ವಾಂಟಂ ತಂತ್ರಜ್ಞಾನವನ್ನು ಕೊಂಡೊಯ್ಯುವ ಸಾಮರ್ಥ್ಯವನ್ನು ಕ್ಯೂ ಎನ್ ಯು ಲ್ಯಾಬ್ಸ್ ತೋರಿಸಿದೆ. ಇಂತಹ ಸಂಸ್ಥೆಗಳು ಕರ್ನಾಟಕದ ಕ್ವಾಂಟಂ ಸಿಟಿ ನಿರ್ಮಾಣದಲ್ಲಿ ಪ್ರಮುಖ ಪಾಲುದಾರರಾಗಬೇಕು ಎಂದು ಹೇಳಿದರು. 2035ರ ವೇಳೆಗೆ 20 ಶತಕೋಟಿ ಡಾಲರ್ ಕ್ವಾಂಟಂ ಆರ್ಥಿಕತೆಯನ್ನು ನಿರ್ಮಿಸುವ ಗುರಿ ಹೊಂದಿರುವ ಕರ್ನಾಟಕ, ಮೂಲಸೌಕರ್ಯ, ಮಾನವ ಸಂಪನ್ಮೂಲ, ಸ್ಟಾರ್ಟ್‌ಅಪ್‌ಗಳು, ಸಂಶೋಧನೆ ಮತ್ತು ಜಾಗತಿಕ ಸಹಭಾಗಿತ್ವಕ್ಕೆ ಒತ್ತು ನೀಡುವ 1,000 ಕೋಟಿ ಕರ್ನಾಟಕ ಕ್ವಾಂಟಂ ಮಿಷನ್ ಮೂಲಕ ತನ್ನ ಕ್ವಾಂಟಂ ಪರಿಸರ ವ್ಯವಸ್ಥೆಯನ್ನು ವಿಸ್ತರಿಸುತ್ತಿದೆ. ಪೇಟೆಂಟ್‌ಗಳು, ಉತ್ಪನ್ನಗಳು, ಹೊಸ ಕಂಪನಿಗಳು, ನುರಿತ ಪ್ರತಿಭೆ, ಹೂಡಿಕೆ ಮತ್ತು ಜಾಗತಿಕ ಮಾರುಕಟ್ಟೆ ಅವಕಾಶಗಳು ಇವೇ ನಮ್ಮ ಕ್ವಾಂಟಂ ಪ್ರಯತ್ನಗಳ ನಿಜವಾದ ಫಲಿತಾಂಶವಾಗಬೇಕು. ಕ್ವಾಂಟಂ ಆಲೋಚನೆಗಳು ಹುಟ್ಟುವ, ತಂತ್ರಜ್ಞಾನಗಳು ನಿರ್ಮಾಣವಾಗುವ ಮತ್ತು ಕಂಪನಿಗಳು ಜಾಗತಿಕ ಮಟ್ಟಕ್ಕೆ ಬೆಳೆಯುವ ಕೇಂದ್ರವಾಗಿ ಕರ್ನಾಟಕ ಹೊರಹೊಮ್ಮಬೇಕು, ಎಂದು ಸಚಿವರು ಹೇಳಿದರು.

# ರೈತರ ರಕ್ಷಣೆಗಾಗಿ ಬೆಳೆಸಾಲ ಸಂಪೂರ್ಣ ಮನ್ನಾ ಮಾಡಲು ಕುರುಬೂರು ಶಾಂತಕುಮಾರ್ ಆಗ್ರಹ

**ಬೆಂಗಳೂರು ಸೆ. 20:** ಬರಗಾಲ ಪೀಡಿತ ಘೋಷಣೆಯಾಗಿರುವ ಕಾರಣ ರೈತರ ರಕ್ಷಣೆಗಾಗಿ ಬೆಳೆ ಸಾಲ ಸಂಪೂರ್ಣ ಮನ್ನಾ ಮಾಡಿ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಆಗ್ರಹಿಸಿದ್ದಾರೆ ಕೈಗಾರಿಕೆಗಳು ನಷ್ಟವಾದರೆ ಸಾಲಮನ್ನ ಮಾಡುವ ಸರ್ಕಾರಗಳಿಗೆ ರೈತರ ಸಾಲ ಮನ್ನಾಮಾಡಲು ಮುಜುಗರ ಯಾಕೆ ಎಂದವರು ಪತ್ರಿಕಾ ಪ್ರಕಟಣೆಯಲ್ಲಿ ಪ್ರಶ್ನಿಸಿದ್ದಾರೆ . ಬರ ಪೀಡಿತ ಪ್ರದೇಶದ ರೈತರಿಗೆ ಬೆಳೆ ನಷ್ಟ ಪರಿಹಾರ ಎಕರೆಗೆ 25000 ಕೂಡಲೇ ಬಿಡುಗಡೆ ಮಾಡಿ. ಸರ್ಕಾರದಲ್ಲಿ ಹಣ ಇಲ್ಲವಾದರೆ ಎಂಎಲ್‌ಎಗಳು ಮಂತ್ರಿಗಳು ನಿಮ್ಮ ಸಂಬಳಗಳನ್ನ ತೆಗೆದುಕೊಳ್ಳುವುದನ್ನು ಕೈಬಿಡಿ. ಎಂದು ಆಗ್ರಹಿಸಿದ್ದಾರೆ



ದನ ಕರುಗಳ ಮೇವಿಗಾಗಿ ಮೇವು ಬ್ಯಾಂಕ್ ತೆರೆಯಿರಿ ಮೇವು ಪೂರೈಕೆ ಮಾಡಿರಿ. ಏ ಐ ತಂತ್ರಜ್ಞಾನ ಮೇವು ಪೂರೈಸುವುದಿಲ್ಲ ಅದಕ್ಕೂ ರೈತರ ಶ್ರಮವೇ ಬೇಕು ರೈತರು ವಲಸೆ ಹೋಗುವುದನ್ನ ತಪ್ಪಿಸಲು ಕೂಡಲೇ ಎನ್ ಆರ್ ಇ ಜಿ ಕಾಮಗಾರಿ ಕೈಗೆತ್ತಿಕೊಂಡು ರೈತರ ನೆರವಿಗೆ ಬನ್ನಿ ಎಂದು ಒತ್ತಾಯಿಸಿದ್ದಾರೆ ಒಣಗುತ್ತಿರುವ ಬೆಳೆಗಳನ್ನು ರಕ್ಷಿಸಲು ಕೃಷಿ ಪಂಸೆಟ್ಟಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಿ ಕೂಡಲೇ ರಾಜ್ಯ ಸರ್ಕಾರ ಈ ಬಗ್ಗೆ ಗಮನ ಹರಿಸಿ ನಾಟಕವಾಡಬೇಡಿ. ಈಗ ಸಾಮಾಜಿಕ ಜಾಲತಾಣದ ಮೂಲಕ ಎಲ್ಲರ ನಡವಳಿಕೆ ಜಗಜ್ಜಾಯಿರಾಗುತ್ತದೆ ಎಂಬುದನ್ನು ತಿಳಿದುಕೊಳ್ಳಿ. ಸತ್ಯವಾದ ನೀತಿಯ ಮಾರ್ಗದ ನಡೆ ಅನುಸರಿಸಿ. ಇದು ರಾಜ್ಯ ಸರ್ಕಾರ ಹಾಗೂ ವಿರೋಧ ಪಕ್ಷಗಳಿಗೂ ಕಿವಿಮಾತು ಎಂದಿದ್ದಾರೆ.

# ವಿದ್ಯಾರ್ಥಿನಿಯರ ಹಾಸ್ಟೆಲ್ ಕೊರತೆ ನೀಗಿಸಿ: ಪ್ರಧಾನಿಗೆ ರಾಹುಲ್ ಒತ್ತಾಯ

**ನವದೆಹಲಿ,ಸೆ.20:** ದೇಶದಲ್ಲಿ ಅನೇಕ ವಿದ್ಯಾರ್ಥಿನಿಯರು ಹಾಸ್ಟೆಲ್ ಸೌಲಭ್ಯದ ಕೊರತೆಯಿಂದಾಗಿ ಶಿಕ್ಷಣವನ್ನು ಅರ್ಧದಲ್ಲಿಯೇ ಮೊಟಕುಗೊಳಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು, 'ಈ ಸಮಸ್ಯೆ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರಿಸಬೇಕು' ಎಂದು ಆಗ್ರಹಿಸಿದ್ದಾರೆ. ಇಂದೋರ್‌ನಲ್ಲಿ ಶನಿವಾರ ನಡೆದ 'ಛಾತ್ರೋಂ ಕಿ ಗೂಂಜ್' (ವಿದ್ಯಾರ್ಥಿಗಳ ಪ್ರತಿಧ್ವನಿ) ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯೊಬ್ಬರು ವ್ಯಕ್ತಪಡಿಸಿದ ಅಭಿಪ್ರಾಯಗಳನ್ನು ಉಲ್ಲೇಖಿಸಿ ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ. 'ಸರ್ಕಾರದ ಬಳಿ ದೀಪಗಳನ್ನು ಬೆಳಗಿಸಲು ಹಣವಿದೆ. ಆದರೆ ಹೆಚ್ಚಿನ ಹಾಸ್ಟೆಲ್‌ಗಳನ್ನು ನಿರ್ಮಿಸಲು ಏಕೆ ಹಣವಿಲ್ಲ ಎಂಬ ಪ್ರಶ್ನೆಯನ್ನು ಇಂದೋರ್‌ನಲ್ಲಿ ವಿದ್ಯಾರ್ಥಿನಿಯೊಬ್ಬರು ನನ್ನನ್ನು ಕೇಳಿದರು. ಅವರು ಓದಲು ಗ್ರಾಮದಿಂದ ನಗರಕ್ಕೆ ಬಂದ ವಿದ್ಯಾರ್ಥಿನಿ' ಎಂದು ರಾಹುಲ್ ಅವರು ಸಂವಾದವನ್ನು ನೆನಪಿಸಿಕೊಳ್ಳುತ್ತಾ ಹೇಳಿದ್ದಾರೆ.



'ಹಾಸ್ಟೆಲ್ ಇಲ್ಲದ ಕಾರಣ ಆ ವಿದ್ಯಾರ್ಥಿನಿ ಪಿ.ಜಿಯಲ್ಲಿ ಉಳಿಯಬೇಕಾಗಿದೆ. ಸುರಕ್ಷಿತವಾಗಿರಲು ಲಕ್ಷಾಂತರ ರೂಪಾಯಿ ವ್ಯಯಿಸಬೇಕಾಗಿದೆ. ಮಾಸಿಕ ಬಾಡಿಗೆ ಚಿಂತೆ ಮತ್ತು ವಸತಿ ಕಳೆದುಕೊಳ್ಳುವ ಭಯದ ನಡುವೆಯೇ ಅವರು ಓದಬೇಕಾಗಿದೆ' ಎಂದು ಅವರು ತಿಳಿಸಿದ್ದಾರೆ.

'ಮೋದಿಜೀ ಅವರೇ ಆ ವಿದ್ಯಾರ್ಥಿನಿಯ ಪ್ರಶ್ನೆಗೆ ನಿಮ್ಮ ಬಳಿ ಉತ್ತರವಿದೆಯೇ' ಎಂದು ಅವರು ಪ್ರಶ್ನಿಸಿದ್ದಾರೆ. ರಾಹುಲ್ ಅವರ ಪೋಸ್ಟ್ ಅನ್ನು ಟ್ಯಾಗ್ ಮಾಡಿರುವ ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ, 'ಪಿ.ಆರ್ ಕಾರ್ಯಕ್ರಮಗಳು, ವಿನ್ಯಾಸಗೊಳಿಸಿದ ಉಡುಪುಗಳು, ಐಷಾರಾಮಿ ಕಾರುಗಳು, ವಿಮಾನಗಳು... ಅಂದರೆ ಭಾರತದ ಯುವಜನರ ಶಿಕ್ಷಣವನ್ನು ಹೊರತುಪಡಿಸಿ ಉಳಿದೆಲ್ಲದಕ್ಕೂ ಮೋದಿಯವರ ಬಳಿ ಹಣವಿದೆ' ಎಂದು ವ್ಯಂಗ್ಯವಾಡಿದ್ದಾರೆ.

**'ಬಿಜೆಪಿ ಆರ್‌ಎಸ್‌ಎಸ್ ಶಿಕ್ಷಣ ವ್ಯವಸ್ಥೆಯನ್ನು ಭ್ರಷ್ಟಗೊಳಿಸಿವೆ':**

ನವದೆಹಲಿ: ಬಿಜೆಪಿ– ಆರ್‌ಎಸ್‌ಎಸ್ನವರು ಶಿಕ್ಷಣ ವ್ಯವಸ್ಥೆಯನ್ನು ಹಾಳುಗೆಡವಿದ್ದು ಭಷ್ಟಗೊಳಿಸಿದ್ದಾರೆ ಎಂದು ಕಾಂಗ್ರೆಸ್ ಭಾನುವಾರ ಆರೋಪಿಸಿದೆ. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪರವಾಗಿ ರಾಹುಲ್ ಗಾಂಧಿ ನಿಂತಿದ್ದಾರೆ ಎಂದು ಅದು ಪ್ರತಿಪಾದಿಸಿದೆ. ವಿದ್ಯಾರ್ಥಿಗಳನ್ನು ಕಾಡುತ್ತಿರುವ ದಮನ ಮಾಡುತ್ತಿರುವ 'ವ್ಯವಸ್ಥೆ'ಯ ರಹಸ್ಯವನ್ನು ರಾಹುಲ್ ಅವರು ಇಂದೋರ್ನಲ್ಲಿ ಬಹಿರಂಗಪಡಿಸಿದ್ದಾರೆ.

ಹಾಗಾದರೆ ಈ 'ವ್ಯವಸ್ಥೆ'ಯಲ್ಲಿ ಇರುವವರು ಯಾರು ಇಡೀ ದೇಶದ ಮೇಲೆ ಹಿಡಿತ ಸಾಧಿಸಿರುವ ಬಿಜೆಪಿ– ಆರ್‌ಎಸ್‌ಎಸ್. ಶಿಕ್ಷಣ ಆರ್ಥಿಕತೆ ರಾಜಕೀಯ ಮತ್ತು ಪ್ರತಿ ಸಂಸ್ಥೆಯ ಮೇಲೂ ಅವರ ಹಿಡಿತವಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂವಹನ) ಜೈರಾಮ್ ರಮೇಶ್ ' ಎಕ್ಸ್'ನಲ್ಲಿ ಆರೋಪಿಸಿದ್ದಾರೆ.

ವಿದ್ಯಾರ್ಥಿಗಳು ಪ್ರಶ್ನೆಗಳನ್ನು ಕೇಳುತ್ತಿದ್ದಾರೆ ಹೊಣೆಗಾರಿಕೆಗಾಗಿ ಒತ್ತಾಯಿಸುತ್ತಿದ್ದಾರೆ. ಹೀಗಾಗಿ ಈ 'ವ್ಯವಸ್ಥೆ' ವಿದ್ಯಾರ್ಥಿಗಳಿಗೆ ಹೆದರುತ್ತಿದೆ ಎಂದಿರುವ ಅವರು ಈಗ ರಾಹುಲ್ ಅವರು ವಿದ್ಯಾರ್ಥಿಗಳೊಂದಿಗೆ ನಿಂತಿರುವುದರಿಂದ ಅವರ ಭಯ ದೂರವಾಗಿದೆ ಎಂದು ತಿಳಿಸಿದ್ದಾರೆ.

# ಕಾಂಗ್ರೆಸ್‌ಗೆ ಕರ್ನಾಟಕವೇ ಎಟಿಎಂ, ಸಾಫ್ಟ್‌ವೇರ್ ಹೆಸರಲ್ಲಿ ನಾಗರಿಕರ ಜೇಬಿಗೆ ಕನ್ನ: ಎಚ್.ಡಿ. ಕುಮಾರಸ್ವಾಮಿ ಆಕ್ರೋಶ



ಬೆಂಗಳೂರು, ಸೆ.20: ಕಾಂಗ್ರೆಸ್ ಸರ್ಕಾರ ಸಾಫ್ಟ್ವೇರ್ ಹೆಸರಿನಲ್ಲಿ ಬೆಂಗಳೂರಿನ ನಾಗರಿಕರ ಜೇಬಿಗೆ ಕೈ ಹಾಕುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, 'ಕಾಂಗ್ರೆಸ್ ಪಕ್ಷಕ್ಕೆ ಕರ್ನಾಟಕ ಎಟಿಎಂ ಆಗಿದೆ ಎಂದು ಕಿಡಿಕಾರಿದ್ದಾರೆ.

'ಸುಲಿಗೆಯಲ್ಲಿ ಈ ಸರ್ಕಾರ 50 ವರ್ಷಗಳ ದಾಖಲೆ ಸರಿಗಟ್ಟಲಿದೆ. ಸೇವೆಗೆ ರೂ10,000 ವರೆಗೆ ಶುಲ್ಕ ವಿಧಿಸುವುದು ಪಿಕ್‌ಪಾಕೆಟ್ ಅಲ್ಲದೆ ಮತ್ತೇನು? ಎಂದು ಅವರು ಪ್ರಶ್ನಿಸಿದ್ದಾರೆ.

'ಗ್ರೇಟರ್ ಬೆಂಗಳೂರು ಪ್ರಾಧಿಕಾರ ಬಂದ ಮೇಲೆ ಬೆಂಗಳೂರು ಗ್ರೇಟ್ ಆಗುತ್ತದೆ. ನಾಡಪ್ರಭು ಕೆಂಪೇಗೌಡರು ಕಟ್ಟಿದ ಈ ಮಹಾನಗರದ ವ್ಯಾಪ್ತಿ ಹಿಗ್ಗಿಸಿದರೆ ಅಭಿವೃದ್ಧಿಗೆ ಅನುಕೂಲ. 50 ವರ್ಷಗಳಲ್ಲಿ ಯಾರೂ ಮಾಡದ ಕೆಲಸವನ್ನು ನಾವು ಮಾಡುತ್ತಿದ್ದೇವೆ' ಎಂದು ಹೇಳಿದ್ದನ್ನು ಉಲ್ಲೇಖಿಸಿರುವ ಕುಮಾರಸ್ವಾಮಿ, 'ನಿಮ್ಮ ಆಸ್ತಿ, ನಿಮ್ಮ ಹಕ್ಕು. ನಿಮ್ಮ ಮನೆ ಬಾಗಿಲಿಗೇ ದಾಖಲೆಗಳನ್ನು ತಲುಪಿಸುತ್ತೇವೆ. ಸುಳ್ಳು ಹೇಳುವುದಕ್ಕೆ ಸಂಕೋಚವಿಲ್ಲ, ಸುಲಿಗೆಗೆ ನಾಚಿಕೆಯೂ ಇಲ್ಲ' ಎಂದು ಟೀಕಿಸಿದ್ದಾರೆ. ?ಬೆಂಗಳೂರು ವ್ಯಾಪ್ತಿ ಹಿಗ್ಗಿಸುವುದು ಎಂದರೆ ಸುಲಿಗೆಗೆ ವ್ಯಾಪಕ ಅವಕಾಶಗಳನ್ನು ಸೃಷ್ಟಿಸಿಕೊಳ್ಳುವುದು. ರಾಜ್ಯ ಕಾಂಗ್ರೆಸ್ ಸರ್ಕಾರ ಅದನ್ನೇ ಮಾಡಿದೆ? ಎಂದು ಅವರು ಆರೋಪಿಸಿದ್ದಾರೆ.



ಬೆಂಗಳೂರಿನ ಹೊಸಕೆರೇಹಳ್ಳಿಯ ಸಪ್ತಗಿರಿ ಯುವಕರ ಬಳಗ ಹಾಗೂ ಎಜಿಎಸ್ ಬಡಾವಣೆಯ ಎಜಿಎಸ್ ಗಣೇಶ ಸಂಭ್ರಮ ವತಿಯಿಂದ ಆಯೋಜಿಸಿದ್ದ ಅದ್ದೂರಿ ಶ್ರೀ ಗಣೇಶೋತ್ಸವ ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ. ಎನ್. ಮಂಜುನಾಥ್ ಅವರು ಗಣೇಶನ ದರ್ಶನ ಪಡೆದು ಪೂಜೆ ಸಲ್ಲಿಸಿದರು. ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ಉತ್ತಮ ಆರೋಗ್ಯ ಕರುಣಿಸಲೆಂದು ಪ್ರಾರ್ಥಿಸಿದರು.

### ಟಿ. ನರಸೀಪುರ ಇನ್‌ಸ್ಪೆಕ್ಟರ್ ವೈರಲ್ ವಿಡಿಯೋ ಸಮರ್ಥಿಸಿಕೊಂಡ ಯತೀಂದ್ರ

# ಕೋಮುಕಿಚ್ಚು ಹಚ್ಚಿ ರಾಜಕೀಯ ಲಾಭ ಪಡೆಯಲು ಬಿಜೆಪಿ ಕಾದುಕುಳಿತಿದೆ: ಸಚಿವ ಯತೀಂದ್ರ ಆಕ್ರೋಶ



**ಬೆಂಗಳೂರು, ಸೆ.20**–ಸಚಿವ ಯತೀಂದ್ರ ಸಿದ್ದರಾಮಯ್ಯ ಮತ್ತೆ ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ದು, ರಾಜಕೀಯ ಲಾಭಕ್ಕಾಗಿ ಕೋಮು ಉದ್ವಿಗ್ನತೆಯನ್ನು ಬಳಸಿಕೊಳ್ಳಲು ಅವಕಾಶಕ್ಕಾಗಿ ಕಾಯುತ್ತಿರುವ ರಣಹದ್ದುಗಳಂತೆ ಬಿಜೆಪಿ ಸದಸ್ಯರು ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು.

ಗಣೇಶ ಪೂಜಾ ಸಮಿತಿಯ ಸದಸ್ಯರಿಗೆ ನಿಯಮಗಳನ್ನು ಪಾಲಿಸುವಂತೆ, ಇಲ್ಲದಿದ್ದರೆ ಕ್ರಮ ಕೈಗೊಳ್ಳುವುದಾಗಿ ಪೊಲೀಸ್ ಅಧಿಕಾರಿಯೊಬ್ಬರು ಎಚ್ಚರಿಕೆ ನೀಡಿದ್ದ ಘಟನೆಗೆ ಸಂಬಂಧಿಸಿ ಕಳೆದ ವಾರ ಟಿ. ನರಸೀಪುರದಲ್ಲಿ ಬಿಜೆಪಿ ನಾಯಕರು ನಡೆಸಿದ ಪ್ರತಿಭಟನೆ ಕುರಿತು ಅವರು ಮಾತನಾಡಿದರು.ಬಿಜೆಪಿ ಸದಸ್ಯರು ರಣಹದ್ದುಗಳಂತೆ. ರಾಜಕೀಯ ಲಾಭಕ್ಕಾಗಿ ಕೋಮು ಉದ್ವಿಗ್ನತೆಯನ್ನು ಬಳಸಿಕೊಳ್ಳಲು ಅವಕಾಶ ಸಿಗುವುದನ್ನೇ ಅವರು ಕಾಯುತ್ತಿರುತ್ತಾರೆ ಎಂದು ಟೀಕಿಸಿದರು.

ಟಿ.ನರಸೀಪುರ ಗಣೇಶ ಮೆರವಣಿಗೆಯ ಕುರಿತು ಇನ್ಸ್‌ಪೆಕ್ಟರ್ ವೈರಲ್ ವಿಡಿಯೋ ಸರಿಯಿದೆ. ಮಸೀದಿ ಮುಂದೆ, ಚರ್ಚ್‌ಗಳ ಮುಂದೆ ದೇವಸ್ಥಾನಗಳ ಮುಂದೆ ಪಟಾಕಿ ಹೊಡೆಯುವುದು ತಪ್ಪು. ಯಾರಾದರು ದೇವಸ್ಥಾನಗಳ ಮುಂದೆ ಬೇರೆಯವರು ಬಂದು ಪಟಾಕಿ ಹೊಡೆದರೆ ಸರಿಯೇ? ಸುಮ್ಮನೆ ಪಟಾಕಿ ಹೊಡೆಯುವುದು ಸರಿಯಲ್ಲ.ಕಳೆದ ಬಾರಿ ಅನುಮತಿ ಪಡೆಯದೇ ಆ ರಸ್ತೆಯಲ್ಲಿ ಹೋಗಿದ್ದಾರೆ. ಆಗ ಪೊಲೀಸ್ ಇರಲಿಲ್ಲ. ಈಗ ಹೆಚ್ಚು ಕಡಿಮೆ ಆದರೆ ಯಾರು ಹೊಣೆ. ಆದ್ದರಿಂದ ಅನುಮತಿ ಕೊಟ್ಟಿದ್ದಾರೆ, ಅನುಮತಿ ಪಡೆದು ಯಾವ ರಸ್ತೆಯಲ್ಲಿ ಬೇಕಾದರೂ ಮೆರವಣಿಗೆ ಹೋಗ ಬಹುದು. ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ ಅಷ್ಟೇ ಎಂದರು.

# ಪ್ರಜಾಪ್ರಭುತ್ವದಲ್ಲಿ ಪ್ರಧಾನಿಯನ್ನು ಟೀಕಿಸುವ ಹಕ್ಕು ಇದೆ

## ಶಾಸಕ ಸುರೇಶ್ ಕುಮಾರ್‌ಗೆ ಬಿ.ಕೆ. ಹರಿಪ್ರಸಾದ್ ತಿರುಗೇಟು

**ಬೆಂಗಳೂರು, ಸೆ.20**– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಟೀಕಿಸಿದ ವಿಚಾರವಾಗಿ ತಮ್ಮ ವಿರುದ್ಧ ಬಿಜೆಪಿ ಶಾಸಕ ಎಸ್. ಸುರೇಶ್ ಕುಮಾರ್ ಮಾಡಿರುವ ಟೀಕೆಗೆ ಕಾಂಗ್ರೆಸ್ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ತೀವ್ರ ತಿರುಗೇಟು ನೀಡಿದ್ದಾರೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಧಾನಿಯನ್ನು ಟೀಕಿಸುವ ಹಕ್ಕು ಪ್ರತಿಯೊಬ್ಬರಿಗೂ ಇದೆ ಎಂದು ಹೇಳಿರುವ ಅವರು, ಸುರೇಶ್ ಕುಮಾರ್ ವಿರುದ್ಧ ವೈಯಕ್ತಿಕ ಟೀಕೆಗಳೊಂದಿಗೆ ಹಲವು ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಹರಿಪ್ರಸಾದ್, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಧಾನಿ ಮೋದಿಯನ್ನು ಟೀಕಿಸುವುದು ಸಜ್ಜನ ಮುಖವಾಡದ ದುರ್ಜನ ಶಾಸಕ ಸುರೇಶ್ ಕುಮಾರ್ ಅವರಿಗೆ ಸಹಿಸಲಾಗುತ್ತಿಲ್ಲ ಎಂದು ಟೀಕಿಸಿದ್ದಾರೆ.

ಬಿಜೆಪಿ ನಾಯಕರು ಈ ಹಿಂದೆ ಯುಪಿಎ ಅಧ್ಯಕ್ಷೆ ಸೋನಿಯಾ ಗಾಂಧಿ ವಿರುದ್ಧ ಮಾಡಿದ್ದ ಅವಹೇಳನಕಾರಿ ಹೇಳಿಕೆಗಳು ಹಾಗೂ ವೈಯಕ್ತಿಕ ದಾಳಿಗಳನ್ನು ಮರೆಯಲು ಸಾಧ್ಯವಿಲ್ಲ ಎಂದು ಹೇಳಿರುವ ಅವರು, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ವಿರುದ್ಧದ ವೈಯಕ್ತಿಕ ದಾಳಿಗಳನ್ನೂ ಉಲ್ಲೇಖಿಸಿದ್ದಾರೆ.ಮೋದಿಯ ವಿರುದ್ಧ ಮಾತಾಡಿದ ತಕ್ಷಣ ಬಿ.ಕೆ. ಹರಿಪ್ರಸಾದ್ ಅವರದ್ದು ಹೊಲಸು ಬಾಯಿ ಎಂದು ಸುರೇಶ್ ಕುಮಾರ್ ಟೀಕಿಸುತ್ತಾರೆ.

ನಾನು ನನ್ನ ರಾಜಕೀಯ ಜೀವನದಲ್ಲಿ ಕೈ, ಬಾಯಿ ಹೊಲಸು ಮಾಡಿಕೊಂಡಿಲ್ಲ. ಆದರೆ, ಸುರೇಶ್ ಕುಮಾರ್ ಮಾತ್ರ ಹೊಲಸಲ್ಲೇ ಹೊರಳಾಡಿ ಸಜ್ಜನ ಎಂದು ಬೋರ್ಡ್ ಹಾಕಿಕೊಂಡಿದ್ದಾರೆಂದು ವಾಗ್ದಾಳಿ ನಡೆಸಿದ್ದಾರೆ.

ಸುರೇಶ್ ಕುಮಾರ್ ವಿರುದ್ಧ ಲೋಕಾಯುಕ್ತದಲ್ಲಿ ದಾಖಲಾಗಿದೆ ಎನ್ನಲಾದ ದೂರಿನ ಬಗ್ಗೆಯೂ ಹರಿಪ್ರಸಾದ್ ಪ್ರಸ್ತಾಪಿಸಿದ್ದಾರೆ.ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಅನುದಾನ




ಹಾಗೂ ಪಾಲಿಕೆ ವತಿಯಿಂದ ಕೈಗೊಳ್ಳಲಾದ ವಿವಿಧ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ನಿಯಮಬಾಹಿರವಾಗಿ ಬೇನಾಮಿ ಗುತ್ತಿಗೆದಾರರಿಗೆ ಲಾಭ ಮಾಡಿಕೊಟ್ಟು ರೂ.300 ಕೋಟಿ ಮೊತ್ತದ ಟೆಂಡರ್ ಅಕ್ರಮ ಎಸಗಿದ್ದಾರೆ ಎಂದು ಲೋಕಾಯುಕ್ತದಲ್ಲಿ ದೂರು ದಾಖಲಾಗಿದೆ ಎಂದು ಹೇಳಿದ್ದಾರೆ.

2020ರಲ್ಲಿ ರೂ.72.25 ಕೋಟಿ ಮೊತ್ತದ ರಸ್ತೆ ಮತ್ತು ಚರಂಡಿ ಕಾಮಗಾರಿಗಳ ಟೆಂಡರ್ನಲ್ಲಿ ಅತ್ಯಂತ ಕಡಿಮೆ ಬಿಡ್ ಸಲ್ಲಿಸಿದ್ದ ಅರ್ಹ ಗುತ್ತಿಗೆದಾರರನ್ನು ತಪ್ಪಿಸಲು ಶಾಸಕರು ಅಧಿಕಾರಿಗಳ ಮೇಲೆ ದೂರವಾಣಿ ಮೂಲಕ ಒತ್ತಡ ಹೇರಿದ್ದಾರೆ ಎಂಬ ಆರೋಪವನ್ನೂ ಹರಿಪ್ರಸಾದ್ ಮಾಡಿದ್ದಾರೆ.

ಪಾಲಿಕೆಯ ಟಿವಿಸಿಸಿ ಮುಖ್ಯ ಎಂಜಿನಿಯರ್ ಕಚೇರಿಯ ಟಿಪ್ಪಣಿಯಲ್ಲೇ ಶಾಸಕರ ಒತ್ತಡದ ಬಗ್ಗೆ ದಾಖಲಾಗಿದೆ ಎಂದು ಹೇಳಿದ್ದಾರೆ. ಇದು ಹೊಲಸು ರಾಜಕೀಯವೋ ಅಥವಾ ಲಂಚದ ಹಣದ ಆಸೆಗಾಗಿ ಮಾಡಿರುವ ಸಲೀಸು ರಾಜಕಾರಣವೋ ಎಂದು ಪ್ರಶ್ನಿಸಿದ್ದಾರೆ.

ಇದೇ ವೇಳೆ ಪ್ರಧಾನಿ ಮೋದಿ ವಿರುದ್ಧವೂ ಆರೋಪಗಳನ್ನು ಮಾಡಿರುವ ಹರಿಪ್ರಸಾದ್, ಬಿಜೆಪಿ ಹಾಗೂ ಅದರ ನಾಯಕರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.ಸಜ್ಜನ ಎಂಬ ಬೋರ್ಡ್ ಹಾಕಿಕೊಂಡ ಮಾತ್ರಕ್ಕೆ ಯಾವ ದುರ್ಜನರೂ ಸಜ್ಜನರಾಗುವುದಿಲ್ಲ. ಜನರ ಹಣ, ಜನರ ಹಕ್ಕು ಮತ್ತು ಪ್ರಜಾಪ್ರಭುತ್ವದ ಪ್ರಶ್ನೆ ಬಂದಾಗ ಮುಖವಾಡ ಕಳಚುತ್ತದೆ ಎಂದು ಹೇಳಿದ್ದಾರೆ.

# 35 ವರ್ಷ ದಾಟಿದ ಪ್ರತಿಯೊಬ್ಬರೂ ವಾರ್ಷಿಕ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅವಶ್ಯ: ಡಾ. ಸಿ.ಎನ್.ಮಂಜುನಾಥ್ ಸಲಹೆ



**ಬೆಂಗಳೂರು,ಸೆ.20:** ಇಂದು ಆನೇಕಲ್ ತಾಲ್ಲೂಕಿನ ಅತ್ತಿಬೆಲೆ ಹೋಬಳಿಯ ಬಿದರಗುಪ್ಪೆ ಗ್ರಾಮದ ಅರೇನೂರು ರಸ್ತೆಯಲ್ಲಿರುವ ಬಿ.ಆರ್. ಎಸ್. ಗ್ಲೋಬಲ್ ಸ್ಕೂಲ್‌ನಲ್ಲಿ, ಡಾ. ಗೋವಿಂದಪ್ಪ ಹಾಗೂ ಡಾ. ಮುನಿರೆಡ್ಡಿ ಅವರ ನೇತೃತ್ವದಲ್ಲಿ ಸಾಗರ್ ಆಸ್ಪತ್ರೆ ಹಾಗೂ ವಿವಿಧ ವೈದ್ಯಕೀಯ ತಂಡಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಬೃಹತ್ ಆರೋಗ್ಯ ತಪಾಸಣಾ ಶಿಬಿರದಲ್ಲಿ ಜನಪ್ರಿಯ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಪದ್ಮಶ್ರೀ ಡಾ. ಸಿ. ಎನ್. ಮಂಜುನಾಥ್ ಅವರು ಪಾಲ್ಗೊಂಡು, ಶಿಬಿರದ ಉದ್ದೇಶ ಹಾಗೂ ಆರೋಗ್ಯದ ಮಹತ್ವ, ರೋಗಗಳ ಆರಂಭಿಕ ಪತ್ತೆ, ಮುನ್ನೆಚ್ಚರಿಕೆ ಮತ್ತು ಆರೋಗ್ಯಕರ ಜೀವನಶೈಲಿಯ ಕುರಿತು ಮಹತ್ವದ ಸಂದೇಶ ನೀಡಿದರು.

ಸಮಾಜದ ಪ್ರತಿಯೊಬ್ಬರಿಗೂ ಗುಣಮಟ್ಟದ ಹಾಗೂ ಕೈಗೆಟುಕುವ ಆರೋಗ್ಯ ಸೇವೆ ದೊರೆಯಬೇಕು ಎಂಬ ಆಶಯದೊಂದಿಗೆ ಆಯೋಜಿಸಲಾಗಿರುವ ಇಂತಹ ಆರೋಗ್ಯ ಶಿಬಿರಗಳು ಜನಸಾಮಾನ್ಯರ ಆರೋಗ್ಯ ರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ವಿಶೇಷವಾಗಿ ರೋಗವನ್ನು ಗುಣಪಡಿಸುವುದಕ್ಕಿಂತ ರೋಗ ಬರುವ ಮುನ್ನವೇ ಮುನ್ನೆಚ್ಚರಿಕೆ ವಹಿಸುವುದು ಮತ್ತು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು ಅತ್ಯಂತ ಮುಖ್ಯ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಆನೇಕಲ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಮುಖಂಡ ಹುಲ್ಲಹಳ್ಳಿ ಶ್ರೀನಿವಾಸ್, ಡಾ. ಗೋವಿಂದಪ್ಪ, ಡಾ. ಮುನಿರೆಡ್ಡಿ, ಸಾಗರ್ ಆಸ್ಪತ್ರೆಯ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿ, ಸ್ಥಳೀಯ ಮುಖಂಡರು, ಗಣ್ಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# 16 ಜಿಲ್ಲೆಗಳಲ್ಲಿ ಮುಂದಿನ 5 ದಿನ ಧಾರಾಕಾರ ಮಳೆ



**ಬೆಂಗಳೂರು,ಸೆ.20:** ಬಂಗಾಳ ಕೊಲ್ಲಿ ಮತ್ತು ಉತ್ತರ ಅಂಡಮಾನ್ ಸಮುದ್ರ ಭಾಗದಲ್ಲಿ ತೀವ್ರ ವಾಯುಭಾರ ಕುಸಿತ ಉಂಟಾಗಿದೆ. ಪರಿಣಾಮ, ದಕ್ಷಿಣ ಭಾರತದಲ್ಲಿ ಭಾರೀ ಮಳೆಯಾಗಲಿದ್ದು, ರಾಜ್ಯದ 16 ಜಿಲ್ಲೆಗಳಲ್ಲಿ ಮುಂದಿನ 5 ದಿನ ಧಾರಾಕಾರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

ಉತ್ತರ ಅಂಡಮಾನ್ ಮತ್ತು ಬಂಗಾಳಕೊಲ್ಲಿಯಿಂದ ಚಂಡಮಾರುತ ಬೀಸುತ್ತಿದ್ದು, ಗಾಳಿ ಬೀಸುವ ವೇಗವೂ ಹೆಚ್ಚಾಗುತ್ತಿದೆ ಎಂದು ಇಲಾಖೆ ಹೇಳಿದೆ.

ಕರ್ನಾಟಕದ ಉತ್ತರ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಬೆಂಗಳೂರು ನಗರ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ರಾಮನಗರ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಕೆಲವೆಡೆ ಕಳೆದ ಮೂರುನ ದಿನಗಳಿಂದ ಮಳೆ ಯಾಗುತ್ತಿದೆ. ಶನಿವಾರ ರಾತ್ರಿ ಕೂಡ ಬೆಂಗಳೂರಿನ ಹಲವು ಭಾಗಗಳಲ್ಲಿ ಜೋರು ಮಳೆಯಾಗಿದೆ. ಭಾನುವಾರ ಬೆಳಿಗ್ಗೆಯಿಂದಲೂ ಮೋಡಕವಿದ ವಾತಾವರಣ ಮುಂದುವರೆದಿದೆ.

# ಪ್ರತಾಪ್‌ಸಿಂಹ ವಿರುದ್ಧ ಎಫ್.ಐ.ಆರ್



**ಬೆಂಗಳೂರು,ಸೆ.20:** ಟಿ ನರಸೀಪುರದಲ್ಲಿ ನಡೆದ ಗಣೇಶೋತ್ಸವ ಮೆರವಣಿಗೆ ವೇಳೆ ಪ್ರಚೋದನಕಾರಿ ಭಾಷಣ ಮಾಡಿದ ಮತ್ತು ಪೊಲೀಸ್ ಅಧಿಕಾರಿಗಳ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಮಾಜಿ ಸಂಸದ, ಬಿಜೆಪಿಗ ಪ್ರತಾಪ್‌ಸಿಂಹ ವಿರುದ್ಧ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಟಿ ನರಸೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್.ಐ.ಆರ್ ನಲ್ಲಿ ಪ್ರತಾಪ್ ಸಿಂಹ ಹಾಗೂ ಇತರರನ್ನು ಆರೋಪಿಗಳಾಗಿ ಹೆಸರಿಸಲಾಗಿದೆ.

ಗಣೇಶೋತ್ಸವದ ಮೆರವಣಿಗೆಯಲ್ಲಿ ಪ್ರತಾಪ್ ಸಿಂಹ ಹಾಗೂ ಇತರರು ಪ್ರಚೋದನಕಾರಿ ಭಾಷಣ ಮಾಡಿದ್ದಾರೆ. ಮಾತ್ರವಲ್ಲದೆ, ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತಂದಿದ್ದಾರೆ ಎಂದು ಆರೋಪಿಸಿ ಕಾಂಗ್ರೆಸ್ ಮುಖಂಡರ ನಿಯೋಗವು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ) ಮಲ್ಲಿಕಾರ್ಜುನ ಬಾಲದಂಡಿ ಅವರಿಗೆ ದೂರು ಸಲ್ಲಿಸಿತ್ತು. ಕ್ರಮಕ್ಕೆ ಪಟ್ಟು ಹಿಡಿದಿತ್ತು. ಇದಲ್ಲದೆ, ಪ್ರತಾಪ್ ಸಿಂಹ ಪ್ರಚೋದನಾಕಾರಿ ಭಾಷಣ ಮಾಡಿದಾಗ ಸ್ಥಳದಲ್ಲಿದ್ದ ಟಿ. ನರಸೀಪುರ ಠಾಣೆಯ ಪಿಎಸ್‌ಐ ಮಲ್ಲೇಶ್ ಅವರೂ ಕೂಡ ದೂರು ನೀಡಿದ್ದರು. ಪಿಎಸ್‌ಐ ಮಲ್ಲೇಶ್ ನೀಡಿದ ದೂರಿನ ಆಧಾರದ ಮೇಲೆ ಪ್ರತಾಪ್ ಸಿಂಹ ವಿರುದ್ಧ ಭಾರತೀಯ ನ್ಯಾಯ ಸಂಹಿತೆ (BNS) ಸೆಕ್ಷನ್ 132, 191, 194, 196(1)(a)(b), 299, 353(1)(b)(c) ಹಾಗೂ ಸೆಕ್ಷನ್ 190ರ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ.

ಎಫ್‌ಐಆರ್‌ನಲ್ಲಿ; ಸಾರ್ವಜನಿಕ ಸೇವಕರು ಮತ್ತು ಪೊಲೀಸರ ಅಧಿಕೃತ ಕರ್ತವ್ಯ ನಿರ್ವಹಣೆಗೆ ಅಡ್ಡಿ, ವಿವಿಧ ಸಮುದಾಯ ಮತ್ತು ಜಾತಿಗಳ ನಡುವೆ ದ್ವೇಷ–ವೈಷಮ್ಯ ಉತ್ತೇಜನ, ಧಾರ್ಮಿಕ ನಂಬಿಕೆಗಳಿಗೆ ಅವಮಾನ ಉಂಟುಮಾಡುವಂತಹ ಪ್ರಚೋದನಕಾರಿ ಭಾಷಣ ಹಾಗೂ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಗೆ ಧಕ್ಕೆ ತಂದ ಆರೋಪಗಳನ್ನು ಉಲ್ಲೇಖಿಸಲಾಗಿದೆ.

### ಬೆಂಗಳೂರಿಗೆ ಯೆಲ್ಲೋ ಅಲರ್ಟ್

**ಇಂದು ಭಾರಿ ಮಳೆ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಮುಂದುವರಿದಿದ್ದು, ನಗರದಲ್ಲಿ ಮಳೆ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.**

### ಬೆಂಗಳೂರಿನಲ್ಲಿ ನಕಲಿ ಔಷಧಿ ಜಾಲ ಬಯಲು:

# 4 ಪ್ರಮುಖ ಆಸ್ಪತ್ರೆಗಳ ಫಾರ್ಮಸಿ ಲೈಸೆನ್ಸ್ ರದ್ದು, 25ಕ್ಕೂ ಹೆಚ್ಚು ಆಸ್ಪತ್ರೆಗಳಿಗೆ SIT ನೋಟಿಸ್




**ಬೆಂಗಳೂರು,ಸೆ.20:** ರಾಜಧಾನಿ ಬೆಂಗಳೂರಿನಲ್ಲಿ ನಕಲಿ ಔಷಧಿಗಳನ್ನು ಪೂರೈಕೆ ಮಾಡಿಕೊಂಡಿದ್ದ ನಾಲ್ಕು ಪ್ರತಿಷ್ಠಿತ ಖಾಸಗಿ ಆಸ್ಪತ್ರೆಗಳ ಫಾರ್ಮಸಿ ಲೈಸೆನ್ಸ್ ಅನ್ನು ವಿಶೇಷ ತನಿಖಾ ತಂಡ(ಶಿಫಾರಸಿನ ಮೇರೆಗೆ ಔಷಧ ನಿಯಂತ್ರಣ ಇಲಾಖೆ ರದ್ದುಗೊಳಿಸಿದೆ.

ಅಲ್ಲದೆ, ನಕಲಿ ಔಷಧಿ ಪೂರೈಕೆಯಾಗಿರುವ ನಗರದ 25ಕ್ಕೂ ಹೆಚ್ಚು ಖಾಸಗಿ ಆಸ್ಪತ್ರೆಗಳಿಗೆ ಹಂತ–ಹಂತವಾಗಿ ನೋಟಿಸ್ ಜಾರಿಗೊಳಿಸಲು ಎಸ್‌ಐಟಿ ಮುಂದಾಗಿದೆ.ತನಿಖಾ ತಂಡಕ್ಕೆ ಲಭ್ಯವಾಗಿರುವ ಪ್ರಾಥಮಿಕ ಮಾಹಿತಿಯ ಪ್ರಕಾರ, ಬೆಂಗಳೂರಿನ ಅಂದಾಜು 70 ರಿಂದ 80 ಖಾಸಗಿ ಆಸ್ಪತ್ರೆಗಳು, ಕ್ಲಿನಿಕ್ಗಳು ಹಾಗೂ ಮೆಡಿಕಲ್ ಸ್ಟೋರ್‌ಗಳಿಗೆ ಈ ನಕಲಿ ಔಷಧಿಗಳು ಪೂರೈಕೆಯಾಗಿರುವ ಶಂಕೆ ವ್ಯಕ್ತವಾಗಿದೆ. ಲೈಸೆನ್ಸ್ ರದ್ದಾಗಿರುವ ನಾಲ್ಕು ಆಸ್ಪತ್ರೆಗಳ ಫಾರ್ಮಸಿಗಳಲ್ಲಿ ಔಷಧಿ ಮಾರಾಟ ಮಾಡದಂತೆ ಎಸ್‌ಐಟಿ ಅಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿ, ಅವುಗಳನ್ನು ಮುಚ್ಚಿಸಿದ್ದಾರೆ. ನಕಲಿ ಔಷಧಿ ಪೂರೈಕೆಗೊಂಡಿರುವ ಎಲ್ಲಾ ಆಸ್ಪತ್ರೆಗಳ ಆಡಳಿತ ಮಂಡಳಿ ಹಾಗೂ ಫಾರ್ಮಸಿ ಮುಖ್ಯಸ್ಥರಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ. ನಗರದ ಮಿನರ್ವ ಸರ್ಕಲ್ ಬಳಿ ಇರುವ 'ಕೃಪಾ ಹೆಲ್ತ್ ಕೇರ್' ಮೇಲೆ ಈ ಹಿಂದೆ ಎಸ್‌ಐಟಿ ದಾಳಿ ನಡೆಸಿ ನಕಲಿ ಔಷಧಿ ಜಾಲವನ್ನು ಬಯಲಿಗೆಳೆದಿತ್ತು. ಈ ಕೃಪಾ ಹೆಲ್ತ್ ಕೇರ್ನಿಂದಲೇ ಹಲವು ಪ್ರತಿಷ್ಠಿತ ಫಾರ್ಮಸಿಗಳಿಗೆ ನಕಲಿ ಔಷಧಿ ಸರಬರಾಜಾಗಿತ್ತು ಎಂಬುದು ತನಿಖೆಯಲ್ಲಿ ಸಾಬೀತಾಗಿದೆ.

ಬನಶಂಕರಿ 2ನೇ ಹಂತದಲ್ಲಿರುವ ಪ್ರತಿಷ್ಠಿತ ಆಸ್ಪತ್ರೆಯ ಫಾರ್ಮಸಿಯು ಕೃಪಾ ಹೆಲ್ತ್ ಕೇರ್‌ನಿಂದ ಹೆಚ್ಚಿನ ಪ್ರಮಾಣದಲ್ಲಿ ನಕಲಿ ಔಷಧಿಗಳನ್ನು ಪಡೆದುಕೊಂಡಿರುವುದು ದೃಢಪಟ್ಟಿದೆ. ಔಷಧ ಮತ್ತು ಸೌಂದರ್ಯವರ್ಧಕ ಕಾಯ್ದೆಯ ನಿಯಮಗಳ ಉಲ್ಲಂಘನೆಯಡಿ ಈ ಫಾರ್ಮಸಿಯ ಪರವಾನಗಿಯನ್ನು ಡ್ರಗ್ ಕಂಟ್ರೋಲ್ ಇಲಾಖೆ ರದ್ದುಪಡಿಸಿದೆ.

ತನಿಖೆಯಲ್ಲಿ ಅತಿ ಹೆಚ್ಚು ಪ್ರಮಾಣದಲ್ಲಿ ನಕಲಿ ಝುವಿಸೆಫ್ಟಾ ಪೂರೈಕೆ ಮಾಡಲಾಗಿದೆ. ಝುವಿಸೆಫ್ಟಾ ಗಂಭೀರ ಸೋಂಕುಗಳಿಗೆ ಬಳಸಲಾಗುವ ಪ್ರಮುಖ ಆಂಟಿಬಯೋಟಿಕ್ ಔಷಧಿ ಎಂಬುದು ಪತ್ತೆಯಾಗಿದೆ.2025 ರಿಂದ ಇಲ್ಲಿಯವರೆಗೆ, ಸತತ 8 ತಿಂಗಳುಗಳಿಂದ ಈ ನಕಲಿ ಆಂಟಿಬಯೋಟಿಕ್ ಅನ್ನು ಸದರಿ ಫಾರ್ಮಸಿಗಳಲ್ಲಿ ನಿರಂತರವಾಗಿ ಮಾರಾಟ ಮಾಡಲಾಗಿದೆ. ಈ ಅವಧಿಯಲ್ಲಿ ಐಸಿಯು ಮತ್ತು ಗಂಭೀರ ಆರೋಗ್ಯ ಸಮಸ್ಯೆಯಿಂದ ದಾಖಲಾಗಿದ್ದ ನೂರಾರು ರೋಗಿಗಳಿಗೆ ಇದೇ ನಕಲಿ ಔಷಧಿ ನೀಡಲಾಗಿದೆಯೇ ಎಂಬ ಭೀತಿ ಶುರುವಾಗಿದೆ. ಈ ಫಾರ್ಮಸಿಯಿಂದ ಇನ್ನಾವ ಆಸ್ಪತ್ರೆಗಳಿಗೆ, ಕ್ಲಿನಿಕ್‌ಗಳಿಗೆ ಹಾಗೂ ರೋಗಿಗಳಿಗೆ ಔಷಧ ವಿತರಣೆಯಾಗಿದೆ ಎಂಬ ಬಗ್ಗೆ ಎಸ್‌ಐಟಿ ತನಿಖೆ ತೀವ್ರಗೊಳಿಸಿದೆ.

### ಕಿಯೋಸ್ಕ್‌ನಲ್ಲಿ ಕೂತು ಮೊಬೈಲ್ ನೋಡ್ತಾರೆ ಪೊಲೀಸರು

# ಬೆಂಗಳೂರು ಟ್ರಾಫಿಕ್ ಸಮಸ್ಯೆಗೆ ಉದ್ಯಮಿ ಮೋಹನ್‌ದಾಸ್ ಪೈ ತೀವ್ರ ಆಕ್ರೋಶ



**ಬೆಂಗಳೂರು,ಸೆ.20:** ಸಿಲಿಕಾನ್ ಸಿಟಿಯಲ್ಲಿ ಟ್ರಾಫಿಕ್ ಜಾಮ್ ಕಿರಿಕಿರಿಗೆ ಉದ್ಯಮಿ ಮೋಹನ್ ದಾಸ್ ಪೈ ಬೇಸರ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಎಕ್ಸ್ ಪೋಸ್ಟ್ ಹಂಚಿಕೊಂಡಿರುವ ಅವರು, ಟ್ರಾಫಿಕ್ ಪೊಲೀಸರು ರಸ್ತೆಯಲ್ಲಿರಲ್ಲ. ಕಿಯೋಸ್ಕ್‌ನಲ್ಲಿ ಕೂತಿರುತ್ತಾರೆ. ಟ್ರಾಫಿಕ್ ಪೊಲೀಸರು ಬೆಂಗಳೂರಿನಲ್ಲಿ ಕೇವಲ ಟ್ರಾಫಿಕ್ ಕಿಯೋಸ್ಕ್‌ನಲ್ಲಿ ಕೂತು ಟ್ರಾಫಿಕ್ ಸಿಗ್ನಲ್ ಕಂಟ್ರೋಲ್ ಮಾಡುತ್ತಾ, ಮೊಬೈಲ್‌ನಲ್ಲಿ ವಿಡಿಯೋ ನೋಡುತ್ತಿರುತ್ತಾರೆ. ಅವರು ಕೆಲಸವನ್ನು ಸಂಪೂರ್ಣ ನಿರ್ವಹಿಸುತ್ತಿಲ್ಲ ಎಂದು ಉದ್ಯಮಿ ಕಿಡಿಕಾರಿದ್ದಾರೆ. ಮ್ಯಾನುವಲ್ ಕಂಟ್ರೋಲ್‌ನಿಂದ ಸಾಕಷ್ಟು ಸಮಸ್ಯೆಯಾಗುತ್ತಿದೆ. ಬೆಂಗಳೂರಿನಲ್ಲಿ ಟ್ರಾಫಿಕ್ ಸಿಗ್ನಲ್ಸ್ ಅನ್ನು ಆಟೋ ಮ್ಯಾಟಿಕ್ ಸಿಗ್ನಲ್ ಆನ್–ಆಫ್ ಆಗುವಂತೆ ನೋಡಿ. ಸಿಗ್ನಲ್ ಜಂಪ್, ರಾಂಗ್ ಸೈಡ್‌ನಿಂದ ವಾಹನ ಸವಾರರು ಬರುತ್ತಿದ್ದು, ಬೆಂಗಳೂರಿನಲ್ಲಿ ಟ್ರಾಫಿಕ್ ರೂಲ್ಸ್ ಕೇಳೋರೆ ಇಲ್ಲದಂತಾಗಿದೆ. ಮೊದಲು ಇದನ್ನು ಸರಿಪಡಿಸಿ ಎಂದು ಮನವಿ ಮಾಡಿದ್ದಾರೆ.ಪೋಸ್ಟ್ ಅನ್ನು ಪೊಲೀಸ್ ಆಯುಕ್ತರು, ಟ್ರಾಫಿಕ್ ಪೊಲೀಸ್ ಅಧಿಕಾರಿ, ಸಿಎಂ, ಗೃಹಸಚಿವರು, ಜಿಬಿಎ ಕಮಿಷನರ್‌ಗೆ ಟ್ಯಾಗ್ ಮಾಡಿದ್ದಾರೆ. ಟ್ರಾಫಿಕ್ ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಿದ್ದಾರೆ.

# ತುಳುನಾಡ ಜವನೆರ್ "ಅಷ್ಟೆಮಿದ ಐಸಿರಿ": ಬೈಕ್ ರ್ಯಾಲಿಗೆ ಶಾಸಕ ಕೆ. ಗೋಪಾಲಯ್ಯ ಚಾಲನೆ



**ಬೆಂಗಳೂರು,ಸೆ.20:**ತುಳುನಾಡ ಜವನೆರ್ ಸಂಘಟನೆಯ ವತಿಯಿಂದ ಯೋಜಿಸಲಾಗಿರುವ "ಅಷ್ಟೆಮಿದ ಐಸಿರಿ" ಕಾರ್ಯಕ್ರಮದ ಪೂರ್ವಭಾವಿಯಾಗಿ ಸೋಪ್ ಫ್ಯಾಕ್ಟರಿ ಸಮೀಪದ ರಾಣಿ ಅಬ್ಬಕ್ಕ ಸರ್ಕಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಭವ್ಯ ಬೈಕ್ ರ್ಯಾಲಿಗೆ ಸ್ಥಳೀಯ ಶಾಸಕ ಕೆ. ಗೋಪಾಲಯ್ಯ ಅವರು ಹಸಿರು ನಿಶಾನೆ ತೋರಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಶಾಸಕರು, "ವೀರರಾಣಿ ಅಬ್ಬಕ್ಕ ದೇವಿಯ ಧೈರ್ಯ ಮತ್ತು ಸಾಹಸ ಇಡೀ ದೇಶಕ್ಕೆ ಆದರ್ಶಪ್ರಾಯವಾದುದು. ತುಳುನಾಡಿನ ಸಂಸ್ಕೃತಿ, ಆಚಾರ–ವಿಚಾರಗಳು ಹಾಗೂ ಭಾಷೆಗೆ ಬೆಂಗಳೂರಿನಲ್ಲೂ ವಿಶೇಷ ಸ್ಥಾನಮಾನವಿದೆ. ನಾನು ಮೊದಲ ಬಾರಿಗೆ ಶಾಸಕನಾಗಿ ಆಯ್ಕೆಯಾದಾಗಲೇ ಬೆಳಗಾವಿ ಅಧಿವೇಶನದಲ್ಲಿ ತುಳು ಭಾಷೆಗೆ ಸೂಕ್ತ ಮಾನ್ಯತೆ ಸಿಗಬೇಕೆಂದು ಸದನದಲ್ಲಿ ದನಿ ಎತ್ತಿದ್ದೆ. ಕರಾವಳಿ ಭಾಗದ ಜನರು ಬೆಂಗಳೂರಿನ ಉದ್ಯಮ, ವ್ಯಾಪಾರ ಹಾಗೂ ಸಮಾಜದ ಸರ್ವತೋಮುಖ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡಿದ್ದಾರೆ," ಎಂದು ಪ್ರಶಂಸಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಎಸ್. ಹರೀಶ್, ಮಹಾನಗರ ಪಾಲಿಕೆ ಮಾಜಿ ಸದಸ್ಯ ರಾಜೇಂದ್ರ ಕುಮಾರ್ ಹಾಗೂ ತುಳುನಾಡಿನ ಮುಖಂಡರು, ಸಾರ್ವಜನಿಕರು ಮತ್ತು ನೂರಾರು ಯುವಕರು ಉಪಸ್ಥಿತರಿದ್ದು ರ್ಯಾಲಿಗೆ ಸಾಥ್ ನೀಡಿದರು.

# ಸೂರಜ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣ: ಸಿಐಡಿಯಿಂದ ಎರಡನೇ ಬಾರಿಗೆ 'ಬಿ' ರಿಪೋರ್ಟ್ ಸಲ್ಲಿಕೆ



**ಬೆಂಗಳೂರು,ಸೆ.20:** ಸೂರಜ್ ರೇವಣ್ಣ ವಿರುದ್ಧ ದಾಖಲಾಗಿದ್ದ ಅಸಹಜ ಲೈಂಗಿಕ ದೌರ್ಜನ್ಯ)ಪ್ರಕರಣ ಮತ್ತೆ 'ಬಿ' ರಿಪೋರ್ಟ್ ಹಂತ ತಲುಪಿದೆ. ನ್ಯಾಯಾಲಯದ ಆದೇಶದಂತೆ ಮರು ತನಿಖೆ ನಡೆಸಿದ ಸಿಐಡಿ ಅಧಿಕಾರಿಗಳು, ಆರೋಪವನ್ನು ಮುಂದುವರಿಸಲು ಅಗತ್ಯವಾದ ಸಾಕ್ಷ್ಯಾಧಾರಗಳು ಪತ್ತೆಯಾಗಿಲ್ಲ ಎಂದು ಹೇಳಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಎರಡನೇ ಬಾರಿಗೆ ಅಂತಿಮ ವರದಿ ಸಲ್ಲಿಸಿದ್ದಾರೆ.

ಈ ಪ್ರಕರಣದಲ್ಲಿ ಸಿಐಡಿ ಕೈಗೊಂಡಿದ್ದ ಮರು ತನಿಖೆ ಇದೀಗ ಪೂರ್ಣಗೊಂಡಿದ್ದು, ದೂರುದಾರರ ಆರೋಪವನ್ನು ದೃಢಪಡಿಸುವಂತಹ ನೇರ ಪುರಾವೆ, ಸಾಂದರ್ಭಿಕ ಸಾಕ್ಷ್ಯ ಅಥವಾ ಇತರೆ ದಾಖಲೆಗಳು ದೊರೆತಿಲ್ಲ ಎಂಬ ಅಂಶವನ್ನು ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದು ತಿಳಿದುಬಂದಿದೆ. ಪ್ರಕರಣದ ಮೂಲ ದೂರು 2024ರ ಜೂನ್ 22ರಂದು ದಾಖಲಾಗಿತ್ತು. ಹೊಳೆನರಸೀಪುರದ ಜೆಡಿಎಸ್ ಕಾರ್ಯಕರ್ತರೊಬ್ಬರು ಸೂರಜ್ ರೇವಣ್ಣ ವಿರುದ್ಧ ಅಸಹಜ ಲೈಂಗಿಕ ದೌರ್ಜನ್ಯದ ಆರೋಪ ಮಾಡಿ ಹೊಳೆನರಸೀಪುರ ಗ್ರಾಮಾಂತರ ಠಾಣೆಗೆ ದೂರು ನೀಡಿದ್ದರು. ಈ ದೂರಿನ ಆಧಾರದ ಮೇಲೆ ಸೂರಜ್ ರೇವಣ್ಣ ಮತ್ತು ಶಿವಕುಮಾರ್ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು.ದೂರು ದಾಖಲಾದ ಮರುದಿನವೇ ಸೂರಜ್ ರೇವಣ್ಣ ಅವರನ್ನು ಪೊಲೀಸರು ಬಂಧಿಸಿದ್ದರು. ನಂತರ ಅವರನ್ನು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಕಳುಹಿಸಲಾಗಿತ್ತು. ಕೆಲ ಕಾಲ ಜೈಲಿನಲ್ಲಿದ್ದ ಅವರು ಬಳಿಕ ನ್ಯಾಯಾಲಯದಿಂದ ಜಾಮೀನು ಪಡೆದು ಬಿಡುಗಡೆಯಾಗಿದ್ದರು.

ಪ್ರಕರಣದ ತನಿಖೆಗಾಗಿ ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿತ್ತು. ತನಿಖೆ ನಡೆಸಿದ ಎಸ್‌ಐಟಿ, ಆರೋಪಕ್ಕೆ ಪೂರಕವಾದ ಸಾಕ್ಷ್ಯಗಳ ಕೊರತೆಯನ್ನು ಉಲ್ಲೇಖಿಸಿ 2025ರ ಡಿಸೆಂಬರ್‌ನಲ್ಲಿ ಮೊದಲ ಬಾರಿಗೆ 'ಬಿ' ರಿಪೋರ್ಟ್ ಸಲ್ಲಿಸಿತ್ತು.ಆದರೆ ಈ ವರದಿಯನ್ನು ದೂರುದಾರರು ಪ್ರಶ್ನಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ ಮೊದಲ 'ಬಿ' ರಿಪೋರ್ಟ್ ಅನ್ನು ಒಪ್ಪದೆ, ಪ್ರಕರಣದ ಕುರಿತು ಮತ್ತಷ್ಟು ತನಿಖೆ ನಡೆಸುವಂತೆ ಸೂಚಿಸಿತ್ತು. ಇದರ ಬಳಿಕ ತನಿಖೆಯ ಹೊಣೆ ಸಿಐಡಿಗೆ ವಹಿಸಲಾಗಿದ್ದು, ಅಧಿಕಾರಿಗಳು ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಲಭ್ಯವಿದ್ದ ಸಾಕ್ಷ್ಯಗಳನ್ನು ಮತ್ತೊಮ್ಮೆ ಪರಿಶೀಲಿಸಿದ್ದಾರೆ.

ದೂರುದಾರರು ಐದು ಕೋಟಿ ರೂಪಾಯಿ ಹಣಕ್ಕಾಗಿ ಬ್ಲಾಕ್‌ಮೇಲ್ ಮಾಡಿದ್ದರು. ಹಣ ನೀಡದ ಕಾರಣ ಸೂರಜ್ ರೇವಣ್ಣ ವಿರುದ್ಧ ಲೈಂಗಿಕ ದೌರ್ಜನ್ಯದ ಆರೋಪ ಹೊರಿಸಲಾಗಿದೆ ಎಂದು ಅವರು ದೂರಿನಲ್ಲಿ ಆರೋಪಿಸಿದ್ದರು.

# ಕಲಬುರಗಿ: ಮನ್ನೋಳಿ ಗ್ರಾಮಪಂಚಾಯತ್‌ನಲ್ಲಿ ಪ್ರಜಾಸೇವೆ, ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ

**ಕಲಬುರಗಿ, ಸೆ. 20:** ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಂಡು ಹಿಡಿಯುವ ಮೂಲಕ ಸರಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಆಡಳಿತವೇ ಜನರ ಬಾಗಿಲಿಗೆ ತೆರಳಿ ಸಮಸ್ಯೆಗಳನ್ನು ಬಗೆಹರಿಸುವ 'ಪ್ರಜಾಸೇವೆ' ಅಭಿಯಾನ ಮೂಲಕ ಜನಸ್ನೇಹಿ ಹಾಗೂ ಪಾರದರ್ಶಕ ಆಡಳಿತ ನೀಡುವುದು ನಮ್ಮ ಆಶಯ ಎಂದು ಜಿಲ್ಲಾಧಿಕಾರಿ ಇಕ್ರಂ ಶರೀಫ್ ಹೇಳಿದರು.

ಜಿಲ್ಲೆಯ ಆಳಂದ ತಾಲೂಕಿನ ಮುನ್ನೊಳಿ ಗ್ರಾಮ ಪಂಚಾಯತ್ ಕಚೇರಿ ಆವರಣದಲ್ಲಿ ಹೋಬಳಿ ಮಟ್ಟದ ಪ್ರಜಾ ಸೇವೆ ಅಭಿಯಾನ ಕಾರ್ಯಕ್ರಮಕ್ಕೆ ಸಸಿಗೆ ನೀರೆರೆಯುವ ಮೂಲಕ ಚಾಲನೆ ನೀಡಿದ ಅವರು, ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹಾರ ಒದಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ 100 ದಿನಗಳ ಕಾರ್ಯಕ್ರಮದಲ್ಲಿ ಪ್ರಜಾಸೇವೆ ಹೊಸ ಇಲಾಖೆಯನ್ನು ಪ್ರಾರಂಭ ಮಾಡಿ, ಅದರ ಮೂಲಕ ಜನಸ್ನೇಹಿ ಆಡಳಿತವನ್ನು ನೀಡುವ ನಿಟ್ಟಿನಲ್ಲಿ ಒಂದು ಹೊಸ ತಂತ್ರಾಂಶವನ್ನು ಸಿದ್ಧಪಡಿಸಿದ್ದಾರೆ. ಪ್ರಜಾಸೇವೆ ಎನ್ನುವಂತದ್ದು ಹಿಂದೆ ಇದ್ದಂತಹ 'ಜನಸ್ಪಂದನ' ಹಾಗೂ 'ಜಿಲ್ಲಾಧಿಕಾರಿಗಳ ನಡೆ ಹಳ್ಳಿಯ ಕಡೆ' ಕಾರ್ಯಕ್ರಮಗಳ ಮುಂದುವರಿದ ಭಾಗವಾಗಿದೆ. ಆದರೆ ಈ ಹೊಸ ಪ್ರಜಾಸೇವೆಯಲ್ಲಿನ ನೂತನ ಅಂಶವೇನೆಂದರೆ, ತಂತ್ರಜ್ಞಾನದ ಬಳಕೆ. ಪ್ರತಿಯೊಂದು ಅರ್ಜಿಗೂ 'ಯುನಿಕ್ ಐಡೆಂಟಿಟಿ ಕೋಡ್' ನೀಡಿ ತಂತ್ರಾಂಶದಲ್ಲಿ ನಮೂದಿಸಲಾಗುತ್ತದೆ. ಅರ್ಜಿಗೆ ಪರಿಹಾರ ಸಿಕ್ಕಿದೆಯೇ ಇಲ್ಲವೇ ಎಂಬುದನ್ನು ಜಿಲ್ಲಾಮಟ್ಟ ಹಾಗೂ ರಾಜ್ಯ ಮಟ್ಟದಲ್ಲಿ ಮಾನ್ಯ ಮುಖ್ಯಮಂತ್ರಿಗಳ ಕಚೇರಿಯಿಂದಲೇ ಮೇಲ್ವಿಚಾರಣೆ ನಡೆಯುತ್ತದೆ ಎಂದು ತಿಳಿಸಿದರು.

**ಅಧಿಕಾರಿಗಳಿಗೆ ಕ್ಷೇತ್ರ ಭೇಟಿ ಸೂಚನೆ:** ಸಭೆಗೆ ಮಾತ್ರ ಸೀಮಿತವಾಗದೆ, ಎಲ್ಲಾ ಇಲಾಖೆಯ ಅಧಿಕಾರಿಗಳು ಸ್ಥಳೀಯ ಶಾಲೆಗಳು, ಆಸ್ಪತ್ರೆಗಳು, ಕೃಷಿ ಭೂಮಿ ಹಾಗೂ ಕುಡಿಯುವ ನೀರಿನ ಯೋಜನೆಗಳಿಗೆ



ನೇರವಾಗಿ ಭೇಟಿ ನೀಡಿ ಪರಿಶೀಲಿಸಬೇಕು. ರೈತರ ಮೇವಿನ ಅಭಾವ, ಜಮೀನು ಸರ್ವೇ ಹಾಗೂ ಆರೋಗ್ಯ ಸೇವೆಗಳಿಗೆ ಸಂಬಂಧಿಸಿದ ದೂರುಗಳಿಗೆ ಕಾಲಮಿತಿಯಲ್ಲಿ ಸ್ಪಂದಿಸುವಂತೆ ಹಾಗೂ ಅಧಿಕಾರಿಗಳು ಸೌಜನ್ಯದಿಂದ ನಡೆದುಕೊಂಡು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಗ್ರಾಮಸ್ಥರ ವಿವಿಧ ಕುಂದುಕೊರತೆಗಳ ಕುರಿತು ಮನವಿಗೆ ಸ್ಪಂದಿಸಿ ಅಹವಾಲುಗಳನ್ನು ಸ್ವೀಕರಿಸುವ ಮೂಲಕ ಸೂಕ್ತ ಪರಿಹಾರ ನೀಡಲಾಗುವುದು ಎಂದು ಭರವಸೆ ನೀಡಿದರು.

**11 ಮಳಿಗೆ ಸ್ಥಾಪನೆ:** ಪ್ರಜಾಸೇವೆ ಅಂಗವಾಗಿ ತಾಲೂಕಿನ ಪಂಚಾಯತಿವಾರು ಸಂಬಂಧಿಸಿದಂತೆ 11 ಮಳಿಗೆ ತೆರೆದು ಆನ್‌ಲೈನ್ ಮೂಲಕ ಸಾರ್ವಜನಿಕರ ಅರ್ಜಿಗಳು ಸ್ವೀಕರಿಸಲಾಯಿತು. ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಕಂದಾಯ, ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಲೀಡ್ ಬ್ಯಾಂಕ್, ಎಸ್.ಐ.ಆರ್, ವಿಬಿ-ಜಿ-ರಾಮ್ ಜಿ, ಸಮಾಜ ಕಲ್ಯಾಣ, ಅಲ್ಪಸಂಖ್ಯಾತ, ಹಿಂದುಳಿದ, ಆಹಾರ, ಜೆಸ್ಕಾಂ, ಯುವ ನಿಧಿ, ಸಹಕಾರ ಸೇರಿದಂತೆ ಪ್ರಮುಖ ಇಲಾಖೆಗಳ ಸ್ಟಾಲ್ ತೆರೆದು ಇಲಾಖೆ ಯೋಜನೆಗಳ ಕುರಿತು ಅರಿವು ಮೂಡಿಸುವ ಪ್ರಯತ್ನ ಮಾಡಲಾಯಿತು.

ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಎಸ್. ಸಂಕನೂರ ಅವರು ಮಾತನಾಡಿ, ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ತೋಡಿಕೊಳ್ಳಲು ತಾಲ್ಲೂಕು ಅಥವಾ ಜಿಲ್ಲಾ ಕೇಂದ್ರಗಳಿಗೆ ಅಲೆಯುವುದನ್ನು ತಪ್ಪಿಸಲು, ಜಿಲ್ಲಾ ಮಟ್ಟದ ಅಧಿಕಾರಿಗಳೇ ಸ್ವತಃ ಹಳ್ಳಿಗಳಿಗೆ ಭೇಟಿ ನೀಡುತ್ತಿದ್ದಾರೆ. ಆದಯಿರೆ ಅಧಿಕಾರಿಗಳು ಕೇವಲ ಕಾಟಾಚಾರಕ್ಕೆ ಸೀಮಿತವಾಗಿರದೆ, ಸಾರ್ವಜನಿಕರಿಗೆ ನೈಜ ಪರಿಹಾರ ತಲುಪಿಸುವ ನಿಟ್ಟಿನಲ್ಲಿ ಶ್ರಮಿಸಬೇಕೆಂದು ಹೇಳಿದರು.

ಒಟ್ಟು ಇಲ್ಲಿಯವರೆಗೆ 52 ಅರ್ಜಿಗಳು ಸ್ವೀಕೃತಗೊಂಡಿದ್ದವು. ಸಾರ್ವಜನಿಕರು ನೀಡಿದ ಅರ್ಜಿಗಳನ್ನು ಪರಿಶೀಲಿಸಿ, ತಕ್ಷಣವೇ ಬಗೆಹರಿಸಬಹುದಾದ ಸರಳ ಸಮಸ್ಯೆಗಳಿಗೆ ಇಂದೇ ಸ್ಥಳದಲ್ಲೇ ಪರಿಹಾರ ಒದಗಿಸಲು ಅಧಿಕಾರಿಗಳು ನಿರ್ಧರಿಸಿದ್ದಾರೆ.

ಹೆಚ್ಚಿನ ಸಮಯ ಹಾಗೂ ಕಾಲಾವಕಾಶ ಅಗತ್ಯವಿರುವ ಸಂಕೀರ್ಣ ಸಮಸ್ಯೆಗಳಿಗೆ, ಶೀಘ್ರದಲ್ಲೇ ಸೂಕ್ತ ಪರಿಹಾರ ನೀಡುವುದಾಗಿ ಭರವಸೆ ನೀಡಿದರು. ಈ ಸ್ಟಾಲ್‌ಗಳ ಮೂಲಕ ಸಾರ್ವಜನಿಕರಿಗೆ ಇಲಾಖಾವಾರು ಯೋಜನೆಗಳ ಮಾಹಿತಿ ಒದಗಿಸುವುದರ ಜತೆಗೆ, ಅರ್ಜಿಗಳನ್ನು ಸ್ವೀಕರಿಸಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಲಾಯಿತು

ಕಾರ್ಯಕ್ರಮದಲ್ಲಿ ಆಳಂದ ತಾಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶಿವಪುತ್ರಪ್ಪ ಪಾಟೀಲ್, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಕಲಬುರಗಿ ಉಪವಿಭಾಗದ ಸಹಾಯಕ ಅಯುಕ್ತೆ ಋತಿಕಾ ವರ್ಮಾ, ಸಾಮಾಜಿಯಿಕ ಉಪ ಸಂರಕ್ಷಣಾಧಿಕಾರಿ ಸಾಗರ ತಾವಡೆ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಶಂಕ್ರಮ್ಮ ಢವಳಗಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಸಂತೋಷ್ ಇನಾಂದಾರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಡಿ. ಎಚ್. ಓ. ಶರಣಬಸಪ್ಪ ಕ್ಯಾತನಾಳ, ಆಳಂದ ತಹಸೀಲ್ದಾರ ಅಣ್ಣಾರಾವ ಪಾಟೀಲ್, ಕಂದಾಯ ಇಲಾಖೆ ಅಧಿಕಾರಿಗಳು ಪೊಲೀಸ್ ಅಧಿಕಾರಿಗಳು ಸೇರಿದಂತೆ ಸಾರ್ವಜನಿಕರು ಗ್ರಾಮ ಪಂಚಾಯಿತಿಯ ಸದಸ್ಯರು ಭಾಗವಹಿಸಿದ್ದರು.



ಹಾವೇರಿ ಜಿಲ್ಲೆಯ ಶಿಗ್ಗಾವಿ ಪಟ್ಟಣದ ಸಂಗನಬಸವ ಕಲ್ಯಾಣ ಮಂಟಪದಲ್ಲಿ ಶಿವಾನಂದ ಮ್ಯಾಗೇರಿ ಅಭಿಮಾನಿ ಬಳಗದ ವತಿಯಿಂದ ಭಾರತೀಯ ಜನತಾ ಪಕ್ಷದ ಹಾವೇರಿಯ ಜಿಲ್ಲೆಯ ಉಪಾಧ್ಯಕ್ಷ ಶಿವಾನಂದ ಮ್ಯಾಗೇರಿ ಅವರ 54 ನೇ ಹುಟ್ಟುಹಬ್ಬದ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಭಾಗವಹಿಸಿ, ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಸಂಗನಬಸವ ಮಹಾಸ್ವಾಮೀಜಿ ವಿರಕ್ತಮಠ, ಶಿಗ್ಗಾವಿ, ರೇವಣಸಿದ್ದೇಶ್ವರ ಮಹಾಸ್ವಾಮೀಜಿ, ಅರಳೇಲೆ ಹಿರೇಮಠ, ಬಂಕಾಪುರ ಶ್ರೀಗಳು ಸಾನಿಧ್ಯ ವಹಿಸಿದ್ದರು. ಯುವ ಮುಖಂಡ ಭರತ ಬೊಮ್ಮಾಯಿ, ಬಿಜೆಪಿ ಶಿಗ್ಗಾವಿ ಮಂಡಲದ ಅಧ್ಯಕ್ಷ ವಿಶ್ವನಾಥ ಹರವಿ, ದೇವಣ್ಣ ಚಾಕಲಬ್ಬಿ, ಪ್ರಕಾಶ ದಾಸನೂರ, ಅರ್ಜುನ ಹಂಚಿನಮನಿ, ಶಿವಾನಂದ ಸೊಬರದ, ಎಂ.ಎಸ್ ಪಾಟೀಲ್, ಮಲ್ಲೇಶಪ್ಪ ಹರಿಜನ, ಸುರೇಶ ಕಮ್ಮಾರ, ನರಹರಿ ಕಟ್ಟಿ, ಬಸವರಾಜ ಸವೂರ ಮೊದಲಾದವರು ಹಾಜರಿದ್ದರು.

# ಬೀದರ್ ಕೋಟೆ, ಪಾಪನಾಶ ಕೆರೆಯಿಂದ ಆರ್ಥಿಕತೆಗೆ ದೊಡ್ಡಬಲ: ಈಶ್ವರ ಖಂಡ್ರೆ

**ಬೀದರ್, ಸೆ. 20:** ಪ್ರವಾಸೋದ್ಯಮ ಇಲಾಖೆಯ 'ಸ್ವದೇಶಿ ದರ್ಶನ್ 2.0' ಯೋಜನೆಯ 'ಚಾಲೆಂಜ್ ಬೇಸ್ಡ್ ಡೆಸ್ಟಿನೇಷನ್ ಡೆವಲಪ್‌ಮೆಂಟ್' ಅಡಿಯಲ್ಲಿ 25 ಕೋಟಿ ವೆಚ್ಚದಲ್ಲಿ ನಗರದ ಐತಿಹಾಸಿಕ ಕೋಟೆ ಹಾಗೂ ಪಾಪನಾಶ ಕೆರೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಇದರಿಂದ ಪ್ರವಾಸೋದ್ಯಮದ ಮೂಲಕ ಜಿಲ್ಲೆಯ ಆರ್ಥಿಕತೆಗೆ ದೊಡ್ಡ ಮಟ್ಟದ ಉತ್ತೇಜನ ಸಿಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ನಗರದ ಕೋಟೆ ಆವರಣದಲ್ಲಿ ಆಯೋಜಿಸಿದ್ದ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯ, ಪ್ರವಾಸೋದ್ಯಮ ಇಲಾಖೆ, ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ ಹಾಗೂ ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಹಯೋಗದಲ್ಲಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯ ಸ್ವದೇಶ ದರ್ಶನ 2.0 ಯೋಜನೆಯಡಿ ಬೀದರ್ ಕೋಟೆ ಮತ್ತು ಪಾಪನಾಶ ಕೆರೆ ಅಭಿವೃದ್ಧಿ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸಿ,

ಬೀದರ್ ಕೋಟೆ ಹಾಗೂ ಪಾಪನಾಶ ದೇವಾಲಯಗಳು ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವ ಹೊಂದಿವೆ. ಈ ಪಾರಂಪರಿಕ ತಾಣಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸುವುದೇ ಯೋಜನೆಯ ಮುಖ್ಯ ಉದ್ದೇಶವಾಗಿದೆ.




ಕೋಟೆ ಅಭಿವೃದ್ಧಿಯಿಂದ ಹೊರರಾಜ್ಯಗಳ ಪ್ರವಾಸಿಗರ ಸಂಖ್ಯೆ ಹೆಚ್ಚಾಗಲಿದ್ದು, ಸ್ಥಳೀಯ ಯುವಕರಿಗೆ ಪ್ರವಾಸಿ ಮಾರ್ಗದರ್ಶಿ (ಗೈಡ್) ತರಬೇತಿ ನೀಡಿ ಉದ್ಯೋಗ ಕಲ್ಪಿಸಲಾಗುವುದು. ಹೋಟೆಲ್, ಸಾರಿಗೆ ಹಾಗೂ ಸ್ಥಳೀಯ ವ್ಯಾಪಾರ-ವಹಿವಾಟು ವೃದ್ಧಿಸಿ ಜಿಲ್ಲೆ ಆರ್ಥಿಕವಾಗಿ ಸಬಲಗೊಳ್ಳಲಿದೆ ಎಂದರು.

ಸಂಸದ ಸಾಗರ್ ಖಂಡ್ರೆ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಪ್ರವಾಸಿ ತಾಣಗಳ ಮೂಲಸೌಕರ್ಯ ಮೇಲ್ದರ್ಜೆಗೇರಿಸಲು ಆದ್ಯತೆ ನೀಡಲಾಗುತ್ತಿದೆ. ಯೋಜನೆಯಡಿ ಕೋಟೆಯಲ್ಲಿ ಹಿರಿಯ ನಾಗರಿಕರಿಗೆ ಇವಿ ಬಗಿ ಶಟಲ್, ಹೆರಿಟೇಜ್ ವಾಕ್, ಪ್ರವಾಸಿ ಮಾಹಿತಿ ಕೇಂದ್ರ, ಆಕರ್ಷಕ ದೀಪಾಲಂಕಾರ, ಸೈಕಲ್ ಟ್ರ್ಯಾಕ್ ಹಾಗೂ ಫಾರೆಸ್ಟ್ ಟ್ರೇಲ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಅದೇ ರೀತಿ ಪಾಪನಾಶ ಕೆರೆ ಆವರಣದಲ್ಲಿ ಪ್ರವೇಶ ದ್ವಾರ, ಜಿಪ್‌ಲೈನ್, ರೋಪ್ ಕೋರ್ಸ್, ಬೋಟಿಂಗ್ ಜಟ್ಟಿ ಹಾಗೂ ಮಕ್ಕಳ ಆಟದ ಮೈದಾನ ನಿರ್ಮಿಸಲಾಗುವುದು. ಪ್ರವಾಸೋದ್ಯಮ ಉತ್ತೇಜನಕ್ಕಾಗಿ ವೆಬ್‌ಸೈಟ್ ಹಾಗೂ ಡಿಜಿಟಲ್ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಲಾಗುವುದು ಎಂದು ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ರಹೀಂ ಖಾನ್ ಮಾತನಾಡಿ, ಬೀದರ್ ಕೋಟೆ ಹಾಗೂ ಚೌಖಂಡಿಯಂತಹ ಸ್ಮಾರಕಗಳಿಗೆ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ಸಾಮರ್ಥ್ಯವಿದ್ದು, ಬಿಡುಗಡೆಯಾದ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಮಾತನಾಡಿ, ಬೀದರ್ ಕೋಟೆ ಹಾಗೂ ಚೌಖಂಡಿಯಂತಹ ಸ್ಮಾರಕಗಳಿಗೆ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ಸಾಮರ್ಥ್ಯವಿದ್ದು, ಬಿಡುಗಡೆಯಾದ ಅನುದಾನವನ್ನು ಪರಿಣಾಮಕಾರಿ ಯಾಗಿ ಬಳಸಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

### ನಾಡಿಗೆ ಬಣಜಿಗ ಸಮಾಜದ ಕೊಡುಗೆ ಸ್ಮರಣೀಯ

# ರೈತರಿಗೆ ಅಕ್ಷರಜ್ಞಾನ ನೀಡಿದ ಕೀರ್ತಿ ಬಣಜಿಗ ಸಮಾಜಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಪ್ರಶಂಸೆ

**ಹಾವೇರಿ(ಶಿಗ್ಗಾವಿ), ಸೆ.20–** ಹಿಂದಿನ ಕಾಲದಲ್ಲಿ ರೈತರಿಗೆ ಅಕ್ಷರ ಜ್ಞಾನ ಮತ್ತು ಲೆಕ್ಕಾಚಾರ ಬಹಳ ಕಡಿಮೆ ಇದ್ದಾಗ, ರೈತರಿಗೆ ಲೆಕ್ಕವನ್ನು ಹೇಳಿಕೊಟ್ಟು ಅಕ್ಷರ ಜ್ಞಾನವನ್ನು ನೀಡಿದ ಕೀರ್ತಿ ಬಣಜಿಗ ಸಮಾಜಕ್ಕೆ ಸಲ್ಲುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ.



ಇಂದು ಹಾವೇರಿ ಜಿಲ್ಲೆಯ ಶಿಗ್ಗಾಂವ ಪಟ್ಟಣದ ಶ್ರೀ ಹನುಮಂತಗೌಡ್ರ ಪಾಟೀಲ್ ಕಲ್ಯಾಣ ಮಂಟಪದಲ್ಲಿ ಶಿಗ್ಗಾಂವ ತಾಲೂಕ ಬಣಜಿಗ ಸಮಾಜದ ತೃತೀಯ ವರ್ಷದ ಸಮಾವೇಶ, ಯುವ ಘಟಕ ಹಾಗೂ ಮಹಿಳಾ ಘಟಕದ ಉದ್ಘಾಟನೆ ಸಮಾರಂಭದಲ್ಲಿ ಯುವ ಘಟಕವನ್ನು ಉದ್ಘಾಟಿಸಿ ಮಾತನಾಡಿದರು. ಸಮಾಜದಲ್ಲಿ ಟೊಪ್ಪಿ ಧರಿಸುವ ಸಂಪ್ರದಾಯದ ಹಿಂದಿನ ಅರ್ಥವನ್ನು ವಿವರಿಸಿದರು. ಸಮಾಜಕ್ಕೆ ಬಸವಣ್ಣನವರ ದೊಡ್ಡ ಆಶೀರ್ವಾದವಿದ್ದು, ಬಣಜಿಗರ ಸಮುದಾಯವು ಕರ್ನಾಟಕ ಮಾತ್ರವಲ್ಲದೆ ಮಹಾರಾಷ್ಟ್ರ ಹಾಗೂ ಆಂಧ್ರಪ್ರದೇಶ ಸೇರಿದಂತೆ ಎಲ್ಲೆಡೆ ದೊಡ್ಡ ಕೊಡುಗೆಯನ್ನು ನೀಡಿದೆ ಎಂದು ಬಣ್ಣಿಸಿದರು. ನಮ್ಮ ನಾಡಿಗೆ ಹಾಗೂ ದೇಶಕ್ಕೆ ದೊಡ್ಡ ಕೊಡುಗೆಯನ್ನು ನೀಡಿರುವ ಈ ಸಮಾಜದ ಬಗ್ಗೆ ಪ್ರತಿಯೊಬ್ಬರಿಗೂ ಸಂಪೂರ್ಣ ಮಾಹಿತಿ ಮತ್ತು ಅರಿವು ಇರಬೇಕು ಎಂದು ಅವರು ಅಭಿಪ್ರಾಯಪಟ್ಟರು.

**ಹೆಣ್ಣಮಕ್ಕಳ ನಾಯಕತ್ವಕ್ಕೆ ಒತ್ತು:** ಬದುಕನ್ನು ಅತ್ಯಂತ ಅರ್ಥಪೂರ್ಣ ವಾಗಿ ಹಾಗೂ ಪರೋಪಕಾರಿಯಾಗಿ ನಡೆಸಿಕೊಳ್ಳುವ ಕುರಿತು ಚಿಂತನೆ ನಡೆಸಬೇಕಿದೆ ಎಂದು ತಿಳಿಸಿದ ಬೊಮ್ಮಾಯಿ ಅವರು, ಸಂಸ್ಕಾರ ಮತ್ತು ಸಂಸ್ಕೃತಿ ಉಳಿದಿದ್ದರೆ ಅದು ತಾಯಂದಿರಿಂದ ಮಾತ್ರ ಸಾಧ್ಯ ಎಂದರು. ಶಿಗ್ಗಾವ್ ತಾಲೂಕಿನಲ್ಲಿ ಮುಂದಿನ ದಿನಗಳಲ್ಲಿ ಬಣಜಿಗರ ಸಮಾಜ ಹಾಗೂ ವೀರಶೈವ ಲಿಂಗಾಯತ ಸಮಾಜ ಸೇರಿದಂತೆ ಎಲ್ಲಾ ಸಮುದಾಯಗಳಿಗೆ ತಾಯಂದಿರೂ ಕೂಡ ನಾಯಕತ್ವವನ್ನು ನೀಡಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಸಮಾಜ ಕಟ್ಟುವ ಕೆಲಸದಲ್ಲಿ ಹೆಣ್ಣಮಕ್ಕಳು ಮುಂದೆ ಬರಬೇಕು, ಏಕೆಂದರೆ ಪ್ರಾಮಾಣಿಕತೆ ಮತ್ತು ಶ್ರದ್ಧೆ ತಾಯಂದಿರಲ್ಲಿ ಹೆಚ್ಚಿರುತ್ತದೆ ಎಂದು ನುಡಿದರು.

**ಸಂಘಟನೆ ಹಾಗೂ ಸಮುದಾಯದ ಅಭಿವೃದ್ಧಿಗೆ ಬೆಂಬಲ:** ಸಮಾಜದಲ್ಲಿ ಪ್ರತಿಭೆಯನ್ನು ಗುರುತಿಸಿ ಪುರಸ್ಕಾರ ನೀಡುವುದು ಅತ್ಯಂತ ಸಂತೋಷದಾಯಕ ಕೆಲಸ ಎಂದ ಅವರು, ಶಿಗ್ಗಾವಿ ತಾಲೂಕಿನ ಸಂಘಟನೆಗೆ ಹೆಚ್ಚಿನ ಒತ್ತು ನೀಡುವಂತೆ ತಿಳಿಸಿದರು. ಬಣಜಿಗ ಭವನಕ್ಕೆ ನಿವೇಶನ ಖರೀದಿಸಲು ಹಾಗೂ ಧನಸಹಾಯ ಮಾಡಲು ತಾವು ಯಾವಾಗಲೂ ಸಮಾಜದೊಂದಿಗೆ ಇರುವುದಾಗಿ ಭರವಸೆ ನೀಡಿದರು. ಸವಣೂರು ಭಾಗದವರಿಗೂ ಎಲ್ಲಾ ರೀತಿಯ ತನು, ಮನ, ಧನದ ಸಹಾಯ ಮಾಡುವುದಾಗಿ ಘೋಷಿಸಿದರು.

**ಸಮಾಜದ ಗೌರವ ಮತ್ತು ಮುಖ್ಯವಾಹಿನಿ:** ಸಮಾಜದ ಗೌರವವನ್ನು ನಾವೇ ಕಾಪಾಡಿಕೊಳ್ಳಬೇಕು ಮತ್ತು ಇತರ ಸಮಾಜಗಳ ಪ್ರೀತಿ-ವಿಶ್ವಾಸವನ್ನು ಗಳಿಸಬೇಕು ಎಂದು ಕಿವಿಮಾತು ಹೇಳಿದರು. ವೀರಶೈವ ಲಿಂಗಾಯತ ಸಮಾಜವು ಮುಖ್ಯವಾಹಿನಿಗೆ ಬಂದರೆ, ಅದರೊಂದಿಗೆ ಇಂತಹ ಎಲ್ಲಾ ಸಮಾಜಗಳು ಮುಖ್ಯವಾಹಿನಿಗೆ ಬಂದು ಬಸವಣ್ಣನ ನಾಡಿನಲ್ಲಿ ಬೆಳಕು ಮೂಡಲಿದೆ ಎಂದರು.

**ರೈತಪರ ಸೇವೆ**

ಬಣಜಿಗ ಸಮಾಜವು ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ ಸೇರಿದಂತೆ ದೇಶಾದ್ಯಂತ ದೊಡ್ಡ ಮಟ್ಟದ ಕೊಡುಗೆಯನ್ನು ನಮ್ಮ ನಾಡಿಗೆ ಹಾಗೂ ದೇಶಕ್ಕೆ ನೀಡಿದ ಒಂದು ದೊಡ್ಡ ಸಮಾಜವಾಗಿದೆ. ಒಕ್ಕಲುತನ ದಿಂದ ಹುಟ್ಟಿಬಂದ ಈ ವೀರಶೈವ ಲಿಂಗಾಯತ ಸಮಾಜವು ಪ್ರಥಮ ಬಾರಿಗೆ ಒಕ್ಕಲುತನದ ಉತ್ಪನ್ನಗಳನ್ನು ಮಾರುಕಟ್ಟೆಗೆ ತಂದು ಬೇರೆಯವರಿಗೆ ನೀಡುವ ಕಾಲವಿತ್ತು.

**ರೈತರಿಗೆ ಬೆಂಬಲ ಮತ್ತು ಮಾರುಕಟ್ಟೆ ವ್ಯವಸ್ಥೆ:** ಸ್ವಾತಂತ್ರ್ಯ ಬಂದ ನಂತರ ಈ ಸಮಾಜವು ಕರ್ನಾಟಕದಲ್ಲಿ ರೈತರಿಗೆ ಸಹಕಾರಿಯಾಗಿ, ಕೃಷಿ ಉತ್ಪನ್ನಗಳಿಗೆ ಸರಿಯಾದ ಮಾರುಕಟ್ಟೆ ಮತ್ತು ಬೆಲೆ ಸಿಗುವ ವ್ಯವಸ್ಥೆಯನ್ನು ಮಾಡುವ ಜವಾಬ್ದಾರಿಯನ್ನು ವಹಿಸಿಕೊಂಡಿತು. "ರೇಟ್, ವೇಟ್ ಅಂಡ್ ಮಾರ್ಕೆಟ್" ಎಂಬ ಪರಿಕಲ್ಪನೆಯನ್ನು ನಮ್ಮ ಕನ್ನಡ ನಾಡಿನ ರೈತರಿಗೆ ಈ ಸಮಾಜವು ಪರಿಚಯಿಸಿಕೊಟ್ಟಿದೆ ಎಂದು ಹೇಳಿದರು.

**ಮುಂದಿನ ದಿನಗಳ ಗುರಿ:**

ಇಂದಿನ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಕೇವಲ ಬಣಜಿಗ ಸಮಾಜ ಮಾತ್ರವಲ್ಲದೆ, ಎಲ್ಲಾ ಸಮುದಾಯಗಳಿಗೆ ಇಲ್ಲಿ ಬಂದಿರುವ ತಾಯಂದಿರು ಮತ್ತು ನಾಯಕರು ಮುಂಚೂಣಿಯಲ್ಲಿ ನಿಂತು ಮಾರ್ಗದರ್ಶನ ನೀಡಬೇಕು ಹಾಗೂ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು, ಹೊಸದಾಗಿ ರಚನೆಯಾಗಿರುವ ಯುವ ಮತ್ತು ಮಹಿಳಾ ಘಟಕಗಳು ನಿರಂತರವಾಗಿ ಯಶಸ್ವಿ ಕಾರ್ಯಕ್ರಮಗಳನ್ನು ನಡೆಸಲಿ ಎಂದು ಹಾರೈಸಿದರು.

ಈ ಸಂಧರ್ಭದಲ್ಲಿ ಶ್ರೀ ಮ.ನಿ.ಪ್ರ ಸಂಗನಬಸವ ಮಹಾಸ್ವಾಮಿಗಳು, ವಿರಕ್ತಮಠ ಶಿಗ್ಗಾಂವ, ಪೂಜ್ಯಶ್ರೀ ಬಸವೇಶ್ವರಿ ಮಾತಾಜಿಯವರು ಅತ್ತಿವೇರಿ ಶ್ರೀಗಳು ಸಾನಿಧ್ಯ ವಹಿಸಿದ್ದರು. ಯುವ ಮುಖಂಡರಾದ ಭರತ ಬೊಮ್ಮಾಯಿ, ಶಿಗ್ಗಾಂವ ತಾಲೂಕ ಬಣಜಿಗ ಸಮಾಜದ ಅಧ್ಯಕ್ಷರಾದ ಶಿಪುತ್ರಪ್ಪ ಜವಳಿ, ಗೌರವಾಧ್ಯಕ್ಷರಾದ ಬಸವರಾಜ ಹೆಸರೂರ, ಮುಖಂಡರುಗಳಾದ ಗದಿಗೆಪ್ಪ ಮಾಮ್ಲೆ ಪಟ್ಟಣಶೆಟ್ಟರ, ವಿರೇಶ ಸೊಬರದ, ದೊಡ್ಡಬಸಪ್ಪ ಅಂಕಲಕೋಟಿ ಸೇರಿದಂತೆ ಹಲವಾರು ಪ್ರಮುಖರು ಹಾಗೂ ಮುಖಂಡರು ಉಪಸ್ಥಿತರಿದ್ದರು.

### ಭದ್ರಾ ಮೇಲ್ದಂಡೆ ಯೋಜನೆ: ನವೆಂಬರ್ ಅಂತ್ಯಕ್ಕೆ

# 17.5 ಟಿಎಂಸಿ ನೀರು ಅಫ್ಟ್-12 ತಾಲೂಕುಗಳ 367 ಕೆರೆ ಭರ್ತಿ ಗುರಿ; ಚಲುವರಾಯಸ್ವಾಮಿ ಆಶ್ವಾಸನೆ

**ಚಿತ್ರದುರ್ಗ, ಸೆ.20–** ದಶಕಗಳಿಂದ ತೀವ್ರ ಬರಗಾಲದ ಬೇಗೆಯಲ್ಲಿ ಬೆಂದಿದ್ದ ಬಯಲುಸೀಮೆಯ ನೆಲದಲ್ಲಿ ಈಗ ಹೊಸ ಭರವಸೆಯ ಹಸಿರು ಚಿಗುರೊಡೆದಿದೆ. ಬಹುನಿರೀಕ್ಷಿತ ಭದ್ರಾ ಮೇಲ್ದಂಡೆ ಯೋಜನೆಯಡಿ ಅಗತ್ಯ ಅರಣ್ಯ ಇಲಾಖೆಯ ಅನುಮತಿ ಹಾಗೂ ವಿದ್ಯುತ್ ಟವರ್ ಎರೆಕ್ಷನ್ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ನವೆಂಬರ್ ಅಂತ್ಯದ ವೇಳೆಗೆ ಒಟ್ಟು 17.5 ಟಿಎಂಸಿ ನೀರನ್ನು ತುಂಗಾದಿಂದ ಭದ್ರಾಗೆ ಲಿಫ್ಟ್ ಮಾಡುವ ಮೂಲಕ ನಿಗದಿತ ಎಲ್ಲ ಕೆರೆಗಳಿಗೂ ನೀರು ಹರಿಸಲು ಸರ್ಕಾರ ಬದ್ಧವಾಗಿದೆ ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಆಶ್ವಾಸನೆ ನೀಡಿದರು.

ಹಿರಿಯೂರು ತಾಲೂಕಿನ ಐಮಂಗಲ ಸಮೀಪ ಚಿತ್ರದುರ್ಗ ಶಾಖಾ ಕಾಲುವೆಯಡಿ ಪ್ರಾಯೋಗಿಕ ವಾಗಿ ನೀರು ಹರಿದ ಕೆರೆಗಳನ್ನು ವೀಕ್ಷಿಸಿ, ಆದ್ರಾಳು ಬಳಿಯ 82ನೇ ಕಿಲೋಮೀಟರ್ ವ್ಯಾಪ್ತಿಯಲ್ಲಿ ಹರಿಯುತ್ತಿರುವ ಭದ್ರಾ ನದಿಯ ನೀರಿಗೆ ಬಾಗಿನ ಅರ್ಪಿಸಿ ಸಚಿವರು ಮಾತನಾಡಿದರು.

ಬರಪೀಡಿತ ಜಿಲ್ಲೆಗೆ ಶಾಶ್ವತ ಪರಿಹಾರ ಕಲ್ಪಿಸುವ ಸಂಕಲ್ಪ ವ್ಯಕ್ತಪಡಿಸಿದ ಅವರು, ಪ್ರಸ್ತುತ ಗುರುತ್ವಾಕರ್ಷಣೆಯ ಬಲದಿಂದ ನೀರು ಸರಾಗವಾಗಿ ಹರಿಯುವ ಮೊದಲ ಹಂತದ ಕೆರೆಗಳನ್ನು ಭರ್ತಿ ಮಾಡಲಾಗುತ್ತಿದ್ದು, ಉಳಿದ ಕೆರೆಗಳಿಗೂ ಕಾಲುವೆಗಳ ಮೂಲಕ ನೀರು ತಲುಪಿಸಲು ಇನ್ನೂ ಎರಡು ತಿಂಗಳ ಕಾಲಾವಕಾಶ ಅಗತ್ಯವಿದೆ ಎಂದು ಸ್ಪಷ್ಟಪಡಿಸಿದರು.

ಕಾಲುವೆಗಳನ್ನು ಒಡೆಯುವುದು ಅಥವಾ ಆತುರದಲ್ಲಿ ಸಂಘರ್ಷಕ್ಕಿಳಿಯು ವುದನ್ನು ಬಿಟ್ಟು ರೈತರು ತಾಳ್ಮೆಯಿಂದ ಸಹಕರಿಸಬೇಕು ಎಂದು ರೈತರಿಗೆ ಕೈಮುಗಿದು ಮನವಿ ಮಾಡಿದರು. ಎಸ್.ಎಂ.ಕೃಷ್ಣ ಅವರ ಕಾಲದಲ್ಲಿ ಭದ್ರಾ ಮೇಲ್ದಂಡೆ ಯೋಜನೆಯ ಮೂಲಕ ದಾವಣಗೆರೆವರೆಗೂ ಬರುತ್ತಿದ್ದ ನೀರು, ಇದೀಗ ಚಿತ್ರದುರ್ಗ, ತುಮಕೂರು ಜಿಲ್ಲೆಯ ಒಟ್ಟು 12 ತಾಲೂಕುಗಳಿಗೆ ಹರಿಯುತ್ತಿದೆ. ಇಲ್ಲಿನ ಜನರಿಗೆ ನೀರು ಹರಿಸುವ ಮೂಲಕ ಜನರ ಭಾವನೆಗಳಿಗೆ ಬೆಲೆ ಕೊಡುವ ಕೆಲಸವನ್ನು ಈಗ ಕಾಂಗ್ರೆಸ್ ಸರ್ಕಾರ ಸಾಕಾರಗೊಳಿಸಿದೆ ಎಂದರು.

ನೂರಕ್ಕೆ ನೂರರಷ್ಟು ಒಟ್ಟು 17.5 ಟಿಎಂಸಿ ನೀರನ್ನು ಲಿಫ್ಟ್ ಮಾಡುವ ಕೆಲಸವನ್ನು ನವೆಂಬರ್ ಒಳಗೆ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು. ಬಯಲುಸೀಮೆಯ ಜನರಿಗೆ ಜೀವನಾಡಿಯಾಗಿರುವ ಈ ಯೋಜನೆಯು ತುಂಗಾ ನದಿಯಿಂದ 17.5 ಟಿಎಂಸಿ ಹಾಗೂ ಭದ್ರಾದಿಂದ 12.5 ಟಿಎಂಸಿ ಸೇರಿದಂತೆ ಒಟ್ಟು 30 ಟಿಎಂಸಿ ನೀರನ್ನು ಎತ್ತುವ ಮಹತ್ವಾಕಾಂಕ್ಷೆಯನ್ನು ಹೊಂದಿದೆ. ಇದರಲ್ಲಿ 22 ಟಿಎಂಸಿ ನೀರನ್ನು ಸೂಕ್ಷ್ಮ ನೀರಾವರಿಗೆ ಹಾಗೂ 6 ಟಿಎಂಸಿ ನೀರನ್ನು ಕೆರೆ ತುಂಬಿಸಲು ನಿಗದಿಪಡಿಸಲಾಗಿದೆ.

ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಮತ್ತು ದಾವಣಗೆರೆ ಜಿಲ್ಲೆಗಳ 12 ತಾಲೂಕುಗಳ ವ್ಯಾಪ್ತಿಯಲ್ಲಿ 367 ಕೆರೆಗಳನ್ನು ತುಂಬಿಸಿ, 5 ಲಕ್ಷ ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರುಣಿಸುವ ಮೂಲಕ ಬರೋಬ್ಬರಿ 75 ಲಕ್ಷ



ಜನರಿಗೆ ಆಸರೆಯಾಗುವ ಗುರಿ ಹೊಂದಲಾಗಿದೆ.

ಪ್ರಸ್ತುತ 21,500 ಕೋಟಿ ರೂಪಾಯಿಗಳ ಪರಿಷ್ಕೃತ ಅಂದಾಜು ಮೊತ್ತದಲ್ಲಿ ಈಗಾಗಲೇ 12,250 ಕೋಟಿ ರೂಪಾಯಿ ವೆಚ್ಚವಾಗಿದ್ದು, ಚಿತ್ರದುರ್ಗ ಶಾಖಾ ಕಾಲುವೆಯ 135 ಕಿಲೋಮೀಟರ್ ಪೈಕಿ 114 ಕಿಲೋಮೀಟರ್ ಕಾಮಗಾರಿ ಮುಗಿದು ಪ್ರಾಯೋಗಿಕ ಪರೀಕ್ಷೆಯಡಿ 199 ಕೆರೆಗಳಿಗೆ ನೀರು ಹರಿಯುತ್ತಿದೆ. ಬಾಕಿ ಉಳಿದಿರುವ ಗೊಣೂರು ಅಕ್ವಾಡಕ್ಟ್ ಕಾಮಗಾರಿಯನ್ನು ಡಿಸೆಂಬರ್ ಅಂತ್ಯಕ್ಕೆ ಮುಗಿಸಿ ಜಗಳೂರು, ಮೊಳಕಾಲ್ಮುರು, ಚಳ್ಳಕೆರೆ ಮತ್ತು ಪಾವಗಡ ಭಾಗಕ್ಕೆ ನೀರು ವಿಸ್ತರಿಸಲಾಗುವುದು.

ತುಮಕೂರು ಕಾಲುವೆ ಕಾಮಗಾರಿಯನ್ನೂ ಚುರುಕುಗೊಳಿಸಿ, ಕೇಂದ್ರ ಸರ್ಕಾರ ಪ್ರಕಟಿಸಿ ಇನ್ನೂ ಬಿಡುಗಡೆ ಮಾಡದಿರುವ 5,300 ಕೋಟಿ ರೂಪಾಯಿ ಅನುದಾನದ ನಿರೀಕ್ಷೆಯ ನಡುವೆಯೂ, ರಾಜ್ಯ ಸರ್ಕಾರವು ಆದ್ಯತೆಯ ಮೇರೆಗೆ ಮಾರ್ಚ್ 2028ರ ವೇಳೆಗೆ ಇಡೀ ಯೋಜನೆಯನ್ನು ಸಂಪೂರ್ಣವಾಗಿ ಲೋಕಾರ್ಪಣೆಗೊಳಿಸುವ ದಿಟ್ಟ ಹೆಜ್ಜೆಯಿಟ್ಟಿದೆ.

# ಕಸ್ತೂರಿರಂಗನ್ ವರದಿ ವಿರೋಧಿಸಿ ಇಂದು ಶೃಂಗೇರಿ ಬಂದ್ ಕರೆ

**ಚಿಕ್ಕಮಗಳೂರು, ಸೆ.20–** ಕಸ್ತೂರಿರಂಗನ್ ವರದಿ ವಿರೋಧಿಸಿ ಸೋಮವಾರ ಶೃಂಗೇರಿ ಬಂದ್‌ಗೆ ರೈತ ಒಕ್ಕೂಟ ಹಾಗೂ ವಿವಿಧ ಸಂಘಟನೆಗಳು ಕರೆ ನೀಡಿವೆ. ಮಲೆನಾಡಿಗೆ ಸಿಎಂ ಡಿ.ಕೆ ಶಿವಕುಮಾರ್ ಬಂದು ಹೋದ ಬೆನ್ನಲ್ಲೇ ಶೃಂಗೇರಿ ಬಂದ್‌ಗೆ ಕರೆ ನೀಡಲಾಗಿದೆ.

ಬೆಳಗ್ಗೆ 6 ಗಂಟೆಯಿಂದ ಸಂಜೆ 6ರ ವರೆಗೆ ಬಂದ್ ಆಗಲಿದ್ದು, ತಾಲೂಕು ಸಂಪೂರ್ಣ ಸ್ಥಬ್ಧವಾಗಲಿದೆ. ವ್ಯಾಪಾರಸ್ಥರು ಸ್ವಯಂ ಪ್ರೇರಿತವಾಗಿ ಅಂಗಡಿ ಮುಂಗಟ್ಟು ಮುಚ್ಚಲು ನಿರ್ಧಾರಿಸಿದ್ದಾರೆ. ಪಟ್ಟಣದಲ್ಲಿ ವಿವಿಧ ಸಂಘಟನೆಗಳಿಂದ ಬೃಹತ್ ಪ್ರತಿಭಟನಾ




ಮೆರವಣಿಗೆ ನಡೆಯಲಿದೆ. ಕಳೆದೊಂದು ತಿಂಗಳಿಂದ ಮಲೆನಾಡಿನ ವಿವಿಧ ಭಾಗಗಳಲ್ಲಿ ಪ್ರತಿಭಟನೆ ನಡೆಯುತ್ತಿದ್ದು, ಈಗ ಪ್ರತಿಭಟನೆಯ ಕಾವು ಮತ್ತಷ್ಟು ಹೆಚ್ಚಾಗಿದೆ. ಕಸ್ತೂರಿ ರಂಗನ್ ವರದಿ ಯಿಂದ ಕಾಫಿನಾಡಿನ 137ಕ್ಕೂ ಹೆಚ್ಚು ಗ್ರಾಮಗಳು ಆತಂಕದಲ್ಲಿವೆ. ಸೆ.19 ರಂದು ಕಸ್ತೂರಿರಂಗನ್ ವರದಿ ಬಗ್ಗೆ ತೀರ್ಥಹಳ್ಳಿ ಹಾಗೂ ಚಿಕ್ಕಮಗಳೂರಿನ ರೈತರು ಹಾಗೂ ಸ್ಥಳೀಯ ಶಾಸಕರ ಜೊತೆ ಸಿಎಂ ಡಿ.ಕೆ ಶಿವಕುಮಾರ್ ಅವರು ಸಂವಾದ ನಡೆಸಿದ್ದರು.

### ಬಳ್ಳಾರಿಯಲ್ಲಿ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆ ಸುಸೂತ್ರ

# ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಭೇಟಿ, ಪರಿಶೀಲನೆ

**ಬಳ್ಳಾರಿ,ಸೆ.20.** ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಕೆ.ಎಸ್.ಆರ್.ಪಿ., ಕೆ.ಎಸ್.ಐ.ಎಸ್.ಎಫ್ ಹಾಗೂ ಐ.ಆರ್.ಬಿ ಕಾನ್‌ಸ್ಟೇಬಲ್ ಹುದ್ದೆಗಳ ನೇರ ನೇಮಕಾತಿಯ ಲಿಖಿತ ಪರೀಕ್ಷೆಯು ಭಾನುವಾರ ನಗರದಾದ್ಯಂತ ಶಾಂತಿಯುತವಾಗಿ ಹಾಗೂ ವ್ಯವಸ್ಥಿತವಾಗಿ ನೆರವೇರಿತು.

ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ನಗರದ ವಿವಿಧ 23 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು, ಒಟ್ಟು 14,059 ಅಭ್ಯರ್ಥಿಗಳು ಪರೀಕ್ಷೆ ಬರೆಯಲು ನೋಂದಾಯಿಸಿಕೊಂಡಿದ್ದರು. ಯಾವುದೇ ರೀತಿಯ ಅಕ್ರಮ ಅಥವಾ ಲೋಪದೋಷಗಳಿಗೆ ಆಸ್ಪದ ನೀಡದಂತೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಅತ್ಯಂತ ಬಿಗಿ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದವು.

ಪರೀಕ್ಷಾ ಪ್ರಕ್ರಿಯೆಯ ಪಾರದರ್ಶಕತೆ ಕಾಪಾಡುವ ನಿಟ್ಟಿನಲ್ಲಿ ಎಲ್ಲಾ 23 ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯನ್ನು 'ನಿರ್ಬಂಧಿತ ಪ್ರದೇಶ' ಎಂದು ಘೋಷಿಸಲಾಗಿತ್ತು. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಪರೀಕ್ಷಾ ಕೇಂದ್ರಗಳ ಸಮೀಪದ ಜೆರಾಕ್ಸ್ ಅಂಗಡಿಗಳು ಹಾಗೂ ಇಂಟರ್ನೆಟ್ ಕೆಫೆಗಳನ್ನು ಮುಚ್ಚುವಂತೆ ಜಿಲ್ಲಾಡಳಿತ ಪೂರ್ವಭಾವಿಯಾಗಿಯೇ ಕಟ್ಟುನಿಟ್ಟಿನ ಆದೇಶ ಹೊರಡಿಸಿತ್ತು. ಕೇಂದ್ರಗಳ ಪ್ರವೇಶ ದ್ವಾರದಲ್ಲಿ ಅಭ್ಯರ್ಥಿಗಳನ್ನು ತೀವ್ರ ತಪಾಸಣೆಗೆ (ಮೆಟಲ್ ಡಿಟೆಕ್ಟರ್ ಮೂಲಕ) ಒಳಪಡಿಸಿ, ನಂತರವೇ ಪರೀಕ್ಷಾ ಕೊಠಡಿಗೆ ಪ್ರವೇಶಿಸಲು ಅನುಮತಿಸಲಾಯಿತು.




ಕೇಂದ್ರಗಳಿಗೆ ಜಿಲ್ಲಾಧಿಕಾರಿ ಭೇಟಿ: ಪರೀಕ್ಷಾ

ಕಾರ್ಯ ಸುಸೂತ್ರವಾಗಿ ನಡೆಯುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ನಗರದ ಹಲವು ಪ್ರಮುಖ ಪರೀಕ್ಷಾ ಕೇಂದ್ರಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೊಠಡಿಗಳಲ್ಲಿನ ಆಸನ ವ್ಯವಸ್ಥೆ, ಸಿಸಿಟಿವಿ ಕಣ್ಗಾವಲು, ವಿದ್ಯುತ್ ಸಂಪರ್ಕ ಹಾಗೂ ಕುಡಿಯುವ ನೀರಿನ ಸೌಲಭ್ಯಗಳನ್ನು ಪರಿಶೀಲಿಸಿದ ಅವರು, ನಿಯೋಜಿತ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪರೀಕ್ಷಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದರು.

ಯಾವುದೇ ಅಹಿತಕರ ಘಟನೆಗಳು ವರದಿಯಾಗದೆ, ಜಿಲ್ಲಾಡಳಿತದ ಸಕಾಲಿಕ ಸಿದ್ಧತೆಯೊಂದಿಗೆ ಇಡೀ ಪ್ರಕ್ರಿಯೆ ಯಶಸ್ವಿಯಾಗಿ ಮುಕ್ತಾಯಗೊಂಡಿತು.

### ಮೀಸಲು ನಿಯಮ ಉಲ್ಲಂಘನೆ-5 ಸಾವಿರ ಶಿಕ್ಷಕರ ನೇಮಕ ರದ್ದು,

# ಅರ್ಹರನ್ನು ಪರಿಗಣಿಸಿ 3 ತಿಂಗಳಲ್ಲಿ ನೇಮಕ ಪಟ್ಟಿಗೆ ಹೈಕೋರ್ಟ್ ಸೂಚನೆ

**ಕಲಬುರಗಿ, ಸೆ. 20:** ಕಲ್ಯಾಣ ಕರ್ನಾಟಕ ಭಾಗದಲ್ಲಿ 2023ರಲ್ಲಿ ನಡೆದ ಆರರಿಂದ ಎಂಟನೇ ತರಗತಿಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (ಜಿಪಿಎಸ್‌ಟಿಆರ್) ನೇಮಕಾತಿ ಪಟ್ಟಿಯನ್ನು ಹೈಕೋರ್ಟ್‌ನ ಕಲಬುರಗಿ ಪೀಠ ರದ್ದು ಪಡಿಸಿ ಮಹತ್ವದ ಆದೇಶ ನೀಡಿದೆ. ಇದರೊಂದಿಗೆ ಈಗಾಗಲೇ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 15 ಸಾವಿರ ಶಿಕ್ಷಕರ ಮುಂದಿನ ಸೇವಾ ಸ್ಥಿತಿಗತಿ ಅತಂತ್ರಕ್ಕೆ ಸಿಲುಕಿಸಿದೆ. ಹೈದರಾಬಾದ್ ಕರ್ನಾಟಕ ಮತ್ತು ಹೈದರಾಬಾದ್ ಕರ್ನಾಟಕಯೇತರ ಅಭ್ಯರ್ಥಿಗಳ ಆಯ್ಕೆಗೆ ಸಂಬಂಧಿಸಿ ಈ ಹಿಂದೆ ಪ್ರಕಟವಾಗಿದ್ದ ತಾತ್ಕಾಲಿಕ ಹಾಗೂ ಅಂತಿಮ ಪಟ್ಟಿಗಳನ್ನು ರದ್ದುಪಡಿಸಿರುವ ಹೈಕೋರ್ಟ್, ನಿಯಮಾನುಸಾರ ಹೊಸದಾಗಿ ಪ್ರಕ್ರಿಯೆ ನಡೆಸಲು ನಿರ್ದೇಶಿಸಿದೆ.

ರಾಜ್ಯ ಸರಕಾರ 15 ಸಾವಿರ ಜಿಪಿಎಸ್‌ಟಿಆರ್ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಿತ್ತು. ನೇಮಕಾತಿಯಲ್ಲಿ ಸಂವಿಧಾನದ 371(ಜೆ) ಅಡಿಯಲ್ಲಿ ಕಲ್ಯಾಣ ಕರ್ನಾಟಕದ ಸ್ಥಳೀಯ ಅಭ್ಯರ್ಥಿಗಳಿಗೆ ಅನ್ವಯಿಸುವ ಮೀಸಲಾತಿ ಹಾಗೂ ಎಚ್‌ಕೆ, ನಾನ್–ಎಚ್‌ಕೆ ವೃಂದಗಳ ಹಂಚಿಕೆ ವಿಚಾರದಲ್ಲಿ ಗೊಂದಲ ಉಂಟಾಗಿತ್ತು. ಇದನ್ನು ಪ್ರಶ್ನಿಸಿ ಹಲವು ಅಭ್ಯರ್ಥಿಗಳು ನ್ಯಾಯಾಲಯದ ಮೊರೆ ಹೋಗಿದ್ದರು.

ಇದೀಗ 2023ರ ಫೆಬ್ರವರಿ ಮತ್ತು ಮಾರ್ಚ್‌ನಲ್ಲಿ ಪ್ರಕಟಿಸಿದ್ದ ತಾತ್ಕಾಲಿಕ ಹಾಗೂ ಅಂತಿಮ ಆಯ್ಕೆ ಪಟ್ಟಿಗಳನ್ನು

## ಆಯ್ಕೆ ಕುತೂಹಲ

**ಮುಂದಿನ ಹಂತದಲ್ಲಿ ಅಭ್ಯರ್ಥಿಗಳ ಆಯ್ಕೆ ಜತೆಗೆ ಹುದ್ದೆಗಳ ಸ್ಥಳವಾರು ಲಭ್ಯತೆ ಕೂಡ ಪ್ರಮುಖ ವಾಗಲಿದೆ. ನೇಮಕಾತಿಗೆ ಅರ್ಹತೆ ಪಡೆದವರಿಗೆ ಶಾಲೆಗಳ ಆಯ್ಕೆಯಲ್ಲಿ ಯಾವ ಮಾನದಂಡ ಅನು ಸರಿಸಲಾಗುತ್ತದೆ ಎಂಬುದರತ್ತ ಅಭ್ಯರ್ಥಿಗಳ ಗಮನ ನೆಟ್ಟಿದೆ. ವೃಂದವಾರು ಹುದ್ದೆಗಳ ವಿವರ, ಖಾಲಿ ಸ್ಥಾನಗಳ ಮಾಹಿತಿ ಹಾಗೂ ಅಭ್ಯರ್ಥಿಗಳಿಗೆ ಲಭ್ಯವಾಗುವ ಆಯ್ಕೆ ಅವಕಾಶಗಳನ್ನು ಮುಂಚಿತವಾಗಿ ಪ್ರಕಟಿಸಿದರೆ ಪ್ರಕ್ರಿಯೆಯಲ್ಲಿ ಸ್ಪಷ್ಟತೆ ಮೂಡಲಿದೆ. ಇಲಾಖೆಯು ಈ ಬಾರಿ ಸಂಪೂರ್ಣ ವ್ಯವಸ್ಥೆಯನ್ನು ಡಿಜಿಟಲ್, ಪಾರದರ್ಶಕ ವಾಗಿ ನಿರ್ವಹಿಸುವ ನಿರೀಕ್ಷೆಯಿದೆ.**




ಹೈಕೋರ್ಟ್ ರದ್ದುಗೊಳಿಸಿದೆ. ಜತೆಗೆ, 2023ರ ಫೆಬ್ರವರಿ 1ರಂದು ಡಿಪಿಎಆರ್ ಹೊರಡಿಸಿದ್ದ ಸುತ್ತೋಲೆ ಹಾಗೂ 2024ರ ಜನವರಿ 31ರ ಕೆಎಸ್‌ಎಟಿ ಆದೇಶವನ್ನೂ ರದ್ದುಪಡಿಸಿರು ವುದಾಗಿ ಆದೇಶದಲ್ಲಿ ತಿಳಿಸಲಾಗಿದೆ. 371(ಜೆ) ನಿಯಮಾವಳಿ ಮತ್ತು ಮೆರಿಟ್ ಮಾನದಂಡಗಳನ್ನು ಅನುಸರಿಸಿ ಅರ್ಹತೆಯ ಎಲ್ಲ ಅಭ್ಯರ್ಥಿಗಳನ್ನು ಪರಿಗಣಿಸುವಂತೆ ಶಿಕ್ಷಣ ಇಲಾಖೆಗೆ ಸೂಚಿಸಲಾಗಿದೆ. ಈ ಮೂಲಕ ಹಿಂದಿನ ಆಯ್ಕೆ ಪ್ರಕ್ರಿಯೆಯಲ್ಲಿದ್ದ ಗೊಂದಲಗಳನ್ನು ಸರಿಪಡಿಸಿ ಹೊಸ ಪಟ್ಟಿಯನ್ನು ಸಿದ್ಧಪಡಿಸಬೇಕಿದೆ.

## ಶಿಕ್ಷಕರ ಸ್ಥಿತಿ ಅತಂತ್ರ

**ಈಗಾಗಲೇ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಮುಂದಿನ ಸೇವಾ ಸ್ಥಿತಿಗತಿ ಕುರಿತು ಚರ್ಚೆ ಆರಂಭವಾಗಿದೆ. ಹಿಂದಿನ ಪ್ರಕ್ರಿಯೆಯ ಆಧಾರದಲ್ಲಿ ನೇಮಕಗೊಂಡವರ ವಿಚಾರದಲ್ಲಿ ಸರಕಾರ ಯಾವ ಕ್ರಮ ಅನುಸರಿಸಲಿದೆ ಎಂಬುದು ಮುಖ್ಯ ಪ್ರಶ್ನೆಯಾಗಿದೆ. ಹೊಸ ಪಟ್ಟಿಯ ನಂತರ ಉಂಟಾಗ ಬಹುದಾದ ಬದಲಾವಣೆಗಳ ಕುರಿತು ಇಲಾಖೆಯಿಂದ ಸ್ಪಷ್ಟ ಮಾರ್ಗಸೂಚಿ ಹೊರ ಬರುವ ನಿರೀಕ್ಷೆಯಿದೆ. ಇದರಿಂದ ಸಾವಿರಾರು ಕುಟುಂಬಗಳ ಭವಿಷ್ಯದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.**

ಆದೇಶದ ಪ್ರತಿ ಲಭಿಸಿದ ದಿನದಿಂದ ಮೂರು ತಿಂಗಳೊಳಗೆ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿ, ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವಂತೆ ನ್ಯಾಯಾಲಯ ಗಡುವು ವಿಧಿಸಿದೆ. ಹೀಗಾಗಿ ಶಿಕ್ಷಣ ಇಲಾಖೆ ನಿಗದಿತ ಅವಧಿಯಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕಾದ ಪರಿಸ್ಥಿತಿ ಎದುರಾಗಿದೆ. ಹೊಸ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳ ಅರ್ಹತೆ, ಮೀಸಲಾತಿ ವೃಂದ ಹಾಗೂ ಮೆರಿಟ್ ಕ್ರಮವನ್ನು ಯಾವ ರೀತಿಯಲ್ಲಿ ಅನ್ವಯಿಸ ಲಾಗುತ್ತದೆ ಎಂಬುದು ಪ್ರಮುಖವಾಗಲಿದೆ. ವಿಶೇಷವಾಗಿ ಎಚ್‌ಕೆ ಮತ್ತು ನಾನ್–ಎಚ್‌ಕೆ ಹುದ್ದೆಗಳ ಹಂಚಿಕೆಯನ್ನು ನಿಯಮಬದ್ಧವಾಗಿ ನಿರ್ವಹಿಸುವುದು ಇಲಾಖೆಯ ಮುಂದಿರುವ ಪ್ರಮುಖ ಹೊಣೆಗಾರಿಕೆಯಾಗಿದೆ.

## ಸ್ವಾವಲಂಬಿ ಬದುಕಿಗೆ ಪೂರಕ ಶಿಕ್ಷಣ ನೀಡಿ: ಪ್ರೊ.ವೀರಣ್ಣ ರಾಜೂರು

**ರಾಯಚೂರು, ಸೆ. 20:** ಉತ್ತಮ ಶಿಕ್ಷಕರ ಬೋಧನೆ ತರಗತಿ ಮುಗಿದೊಡನೆ ಮುಗಿಯುವುದಿಲ್ಲ. ಅದು ವಿದ್ಯಾರ್ಥಿಯ ಚಿಂತನೆಯೊಳಗೆ ಆಜೀವನ ಧ್ವನಿಸುತ್ತಿರುತ್ತದೆ. ಗುರುವಿನ ಮಾತು ಹಾಗೂ ಅವರು ತೋರಿದ ಸಣ್ಣ ದಾರಿಯೂ ವಿದ್ಯಾರ್ಥಿಯ ಬದುಕಿನ ದಿಸೆಯನ್ನೇ ಬದಲಿಸಬಹುದು ಎಂದು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ವೀರಣ್ಣ ರಾಜೂರು ಹೇಳಿದರು.

ಬೆಳೆಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಕೇವಲ ಅಕ್ಷರ ಕಲಿಸುವುದಲ್ಲದೆ ಉತ್ತಮ ಸಂಸ್ಕಾರ, ಸನ್ನಡತೆ, ಸತ್ಯ, ತಾಳ್ಮೆ ಮತ್ತು ಪ್ರೀತಿಯ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಬೇಕು. ಇಂದಿನ ವಿದ್ಯಾರ್ಥಿಗಳು ಸ್ವಾವಲಂಬಿ ಹಾಗೂ ಸ್ವಾಭಿಮಾನದ ಬದುಕು ನಡೆಸುವಂತಹ ಶಿಕ್ಷಣ ನೀಡುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿ ಸುರೇಶ ಪಿ.ಗೌಡರ, ವಿಶ್ವವಿದ್ಯಾಲಯದ



ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಶಿಕ್ಷಕ ಎಂದರೆ ಕೇವಲ ಪುಸ್ತಕದಲ್ಲಿರುವ ಜ್ಞಾನವನ್ನು ನೀಡುವ ವ್ಯಕ್ತಿಯಲ್ಲ. ಸಾಮಾನ್ಯ ವಿದ್ಯಾರ್ಥಿಯಲ್ಲಿರುವ ಅಸಾಮಾನ್ಯ ಸಾಮರ್ಥ್ಯವನ್ನು ಗುರುತಿಸಿ, ಅದನ್ನು

ಸಿಂಡಿಕೇಟ್ ಸದಸ್ಯೆ ಮೀನಾಕ್ಷಿ ಖಂಡಿಮಠ, ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಮಾತನಾಡಿದರು.

ವಿದ್ಯಾರ್ಥಿನಿ ವಾಣಿಶ್ರೀ ಪ್ರಾರ್ಥಿಸಿದರು. ಕನ್ನಡ ಅಧ್ಯಯನ ವಿಭಾಗದ ಉಪನ್ಯಾಸಕಿ ಶಿವಲೀಲಾ ಬಸನಗೌಡ ನಿರೂಪಿಸಿದರು. ವಾಣಿಜ್ಯಶಾಸ್ತ್ರ ವಿಭಾಗದ ಉಪನ್ಯಾಸಕಿ ಗೀತಾ ಗೋಪಾಲಕೃಷ್ಣ ಸ್ವಾಗತಿಸಿದರು.

## ಕಲ್ಯಾಣ ಕರ್ನಾಟಕವನ್ನು ಶೈಕ್ಷಣಿಕ ಕೇಂದ್ರವಾಗಿಸಿದ ಲಿಂ. ಡಾ.ಅಪ್ಪಾಜಿ: ಪ್ರೊ.ಚವ್ಹಾಣ



**ಕಲಬುರಗಿ, ಸೆ. 20:** ಕಲ್ಯಾಣ ಕರ್ನಾಟಕವನ್ನು ಶೈಕ್ಷಣಿಕ ಕೇಂದ್ರವನ್ನಾಗಿಸಿ ಈ ಭಾಗದ ವಿದ್ಯಾರ್ಥಿಗಳ ಬಾಳಿಗೆ ಸಂಜೀವಿನಿಯಾಗಿದ್ದವರು ಲಿಂಗೈಕ್ಯ ಮಹಾದಾಸೋಹಿ ಡಾ. ಶರಣಬಸವಪ್ಪ ಅಪ್ಪ ಅವರು ಎಂದು ಪ್ರಾಚಾರ್ಯ ಪ್ರೊ. ಬಿ.ಸಿ. ಚವ್ಹಾಣ ಹೇಳಿದರು.

ನಗರದ ಗೋದುತಾಯಿ ಬಿ.ಎಡ್.ಕಾಲೇಜಿನಲ್ಲಿ ಶರಣ ಬಸವೇಶ್ವರ ಮಹಾದಾಸೋಹದ ಎಂಟನೇ ಪೀಠಾಧಿಪತಿಗಳಾದ ಲಿಂ. ಡಾ. ಶರಣಬಸವಪ್ಪ ಅಪ್ಪ ಅವರ ಜೀವನ ದರ್ಶನ ಮಾಸಿಕ ಸರಣಿ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಅವರು, ಲಿಂ. ದೊಡ್ಡಪ್ಪ ಅಪ್ಪ ಅವರು ಹಚ್ಚಿದ ಶಿಕ್ಷಣವೆಂಬ ಸಸಿಯನ್ನು ಡಾ. ಅಪ್ಪ ಅವರು ಹೆಮ್ಮರವಾಗಿ ಬೆಳೆಸಿ ಈ ಭಾಗದ ವಿದ್ಯಾರ್ಥಿಗಳು ಜಗತ್ತಿನಾದ್ಯಂತ ಬೆಳಗುವಂತೆ ಮಾಡಿದ್ದಾರೆ. ಅನೇಕ ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ದಾಸೋಹಗೈದವರು. ವಿದ್ಯಾರ್ಥಿಗಳು ಉನ್ನತ ಹುದ್ದೆಗಳಲ್ಲಿ ಪಡೆಯಬೇಕು. ಹಿಂದುಳಿದ ಪಟ್ಟಿ ಅಳಿಸಬೇಕೆಂದು ಹಗಲಿರುಳು ಶ್ರಮಿಸಿದರು. ಪೂಜ್ಯರು ತೋರಿದ ದಾರಿಯಲ್ಲಿ ನಡೆದು ಜೀವನ ರೂಪಿಸಿಕೊಳ್ಳಬೇಕೆಂದು ವಿದ್ಯಾರ್ಥಿಯರಿಗೆ ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ನಿವೃತ್ತ ಪ್ರಾಚಾರ್ಯೆ ಡಾ. ಭುವನೇಶ್ವರಿ ಚಿಮಕೋಡ್ ಪೂಜ್ಯ ಡಾ.ಅಪ್ಪ ಅವರು ಅನ್ನ ಮತ್ತು ಅಕ್ಷರ ಎರಡಕ್ಕೂ ಸಮಾನ ವಾಗಿ ದಾಸೋಹಗೈದು ಸಮಾಜವನ್ನು ಉತ್ತುಂಗಕ್ಕೇರಿಸಿದ್ದಾರೆ. ಶಿಕ್ಷಣ, ಸಮಾಜ ಸೇವೆ, ಮಾನವೀಯತೆ, ದಾಸೋಹ ಹಾಗೂ ಸಾಮಾಜಿಕ ಜವಾಬ್ದಾರಿಯ ಮಹತ್ವವನ್ನು ತಿಳಿಸಿ, ವಿದ್ಯಾರ್ಥಿ ನಿಯರು ತಮ್ಮ ಜೀವನದಲ್ಲಿ ಈ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಪ್ರೇರೇಪಿಸಿದರು.

ಅಧ್ಯಕ್ಷತೆ ವಹಿಸಿದ್ದ ಶರಣ ಬಸವೇಶ್ವರ ದೇವಸ್ಥಾನ ಆವರಣದ ಶಾಲಾ–ಕಾಲೇಜುಗಳ ನಿರ್ದೇಶಕಿ ಡಾ. ನೀಲಾಂಬಿಕಾ ಪೋಲಿಸಪಾಟೀಲ್ ಅವರು ಮಾತನಾಡಿ, ಈ ಭಾಗಕ್ಕೆ ಪೂಜ್ಯರ ಕೊಡುಗೆಗಳು ಲೆಕ್ಕವಿಲ್ಲದಷ್ಟಿವೆ. ಅಕ್ಷರ ದಾಸೋಹದ ಮೂಲಕ ಅನೇಕರ ಬಾಳನ್ನು ಬೆಳಗಿಸಿದರು. ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೆ, ಸರಿಯಾದ ಮಾರ್ಗದಲ್ಲಿ ನಡೆಯಿರಿ ಎಂದು ಮಾರ್ಗದರ್ಶನ ಮಾಡಿದರು.



ಹಾಸನ ಜಿಲ್ಲೆಯ ಸಕಲೇಶಪುರಕ್ಕೆ ಭೇಟಿ ನೀಡಿದ ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಅದ್ದೂರಿಯಾಗಿ ಸ್ವಾಗತಿಸಿದರು.

### ಈಗಾಗಲೇ ಮುಂಗಾರು ಪೂರ್ಣಗೊಂಡಿದೆ

## ಬರ ಘೋಷಣೆಗೆ ಬೀದಿಗಿಳಿದ ಶಾಸಕ: ಇನ್ಯಾವಾಗ ಬರಗಾಲ ಘೋಷಣೆ ಮಾಡುವುದು?

**ಬೀದರ್, ಸೆ. 20:** ಔರಾದ್ ಹಾಗೂ ಕಮಲನಗರ ತಾಲ್ಲೂಕುಗಳನ್ನು ಕೂಡಲೇ ಬರಪೀಡಿತ ಪ್ರದೇಶಗಳೆಂದು ಘೋಷಿಸುವಂತೆ ಆಗ್ರಹಿಸಿ ಔರಾದ್ ಶಾಸಕ ಪ್ರಭು ಚವ್ಹಾಣ್ ನೇತೃತ್ವದಲ್ಲಿ ರೈತರು ಮತ್ತು ಗ್ರಾಮಸ್ಥರು ಬೀದಿಗಿಳಿದು, ಬೃಹತ್ ಪ್ರತಿಭಟನೆ ನಡೆಸಿದರು. ಸಾವಿರಾರು ರೈತರು, ಮಹಿಳಾ ರೈತರು ಹಾಗೂ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿ, ಈಗಾಗಲೇ ಮುಂಗಾರು ಹಮಗಾಮುಇ ಮುಗಿದು ಹಿಮಗಾರು ಆರಂಭವಾಗಿದೆ. ಮುಂಗಾರು ಸಂಪೂರ್ಣ ವಿಫಲವಾಗಿದ್ದರೂ ಇನ್ನೂ ಬರ ಘೋಷಣೆ ಮಾಡದ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಔರಾದ್ ಪಟ್ಟಣದ ಅಮರೇಶ್ವರ ದೇವಸ್ಥಾನದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಮೂಲಕ ಸಾಗಿ ಎಪಿಎಂಸಿ ಕ್ರಾಸ್‌ವರೆಗೆ ತಲುಪಿತು. ಬಳಿಕ ಪ್ರತಿಭಟನಾಕಾರರು ರಾಷ್ಟ್ರೀಯ ಹೆದ್ದಾರಿ 161ಂ ತಡೆದು ಬರ ಘೋಷಣೆಗೆ ಒತ್ತಾಯಿಸಿದರು.

ಮಳೆ ಕೊರತೆಯಿಂದ ರೈತರು



ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆನಷ್ಟದ ಹಿನ್ನೆಲೆಯಲ್ಲಿ ಔರಾದ್ ಹಾಗೂ ಕಮಲನಗರ ತಾಲ್ಲೂಕುಗಳನ್ನು ಕೂಡಲೇ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ಪ್ರತಿಭಟನಾ ಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರೈತರು ತಲೆ ಮೇಲೆ ಒಣಗಿದ ಸೋಯಾ ಕಾಂಡ ಹಿಡಿದು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.

ಒಂದು ವಾರದೊಳಗೆ ಸರ್ಕಾರ ಔರಾದ್ ಹಾಗೂ ಕಮಲನಗರ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸದಿದ್ದರೆ ಔರಾದ್‌ನಿಂದ ಬೀದರ್‌ವರೆಗೆ ಪಾದಯಾತ್ರೆ ನಡೆಸಿ ಮುಖ್ಯಮಂತ್ರಿಗಳ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಶಾಸಕ ಪ್ರಭು ಚವ್ಹಾಣ್ ಎಚ್ಚರಿಕೆ ನೀಡಿದರು.

ರೈತರ ಸಂಕಷ್ಟಕ್ಕೆ ಸರ್ಕಾರ ತಕ್ಷಣ ಸ್ಪಂದಿಸಬೇಕು, ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ ಕಲ್ಪಿಸಬೇಕು ಹಾಗೂ ಬರಪೀಡಿತ ಪ್ರದೇಶ ಘೋಷಣೆ ಮಾಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯ ಬಳಿಕ ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಸಾವಿರಾರು ರೈತರು ಹಾಗೂ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರಿಂದ ಔರಾದ್ ಪಟ್ಟಣದಲ್ಲಿ ಕೆಲಕಾಲ ಪ್ರತಿಭಟನೆಯ ವಾತಾವರಣ ನಿರ್ಮಾಣವಾಗಿತ್ತು.

### ಕಾರ್ಕಳ-ಮೂಡುಬಿದ್ರೆ ಹೆದ್ದಾರಿಯಲ್ಲಿ ಭೀಕರ ಅಪಘಾತ

## ಮಾಜಿ ಸಚಿವ ರಮಾನಾಥ್ ರೈ ಕಾರಿಗೆ ಬಸ್ ಡಿಕ್ಕಿ, ರೈಗೆ ಗಾಯ




**ಉಡುಪಿ, ಸೆ.20–** ಕಾರ್ಕಳ–ಮೂಡುಬಿದ್ರೆ ಹೆದ್ದಾರಿಯಲ್ಲಿ ಭೀಕರ ಅಪಘಾತ ಸಂಭವಿಸಿದ್ದು, ಮಾಜಿ ಸಚಿವ ರಮಾನಾಥ ರೈ ಪ್ರಯಾಣಿಸುತ್ತಿದ್ದ ಕಾರಿಗೆ ಬಸ್ ಡಿಕ್ಕಿ ಹೊಡೆದಿದೆ. ಸಾಣೂರು ಜಂಕ್ಷನ್‌ನಲ್ಲಿ ಸಂಭವಿಸಿದ ಭೀಕರ ಅಪಘಾತ ಸಂಭವಿಸಿದೆ. ಕಾರ್ಕಳದಿಂದ ಮೂಡುಬಿದ್ರೆ ಕಡೆಗೆ ಹೋಗುತ್ತಿದ್ದ ಬಸ್, ಕಾರಿಗೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ಮಾಜಿ ಸಚಿವ ರಮಾನಾಥ ರೈಗೆ ಗಾಯವಾಗಿದೆ. ಕಾರಿನಲ್ಲಿ ಸಿಲುಕಿದ್ದ ರಮಾನಾಥ ರೈ ಅವರನ್ನು ಹರಸಾಹಸ ಪಟ್ಟು ಸ್ಥಳೀಯರು ಹೊರ ಕರೆ ತಂದಿದ್ದಾರೆ. ಗಾಯಾಳುಗಳನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಸ್ ಹಾಗೂ ಕಾರಿನಲ್ಲಿದ್ದ ಹಲವರಿಗೆ ಗಾಯಗಳಾಗಿವೆ.ಇಂದು ರಾಮನಾಥ ರೈ ಅವರು ಪ್ರಯಾಣಿಸು ತ್ತಿದ್ದ ಇನ್ನೋವಾ ಕಾರು ಮಧ್ಯಾಹ್ನ 3:30ರ ಸುಮಾರಿಗೆ ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ಸಾಣೂರು ಜಂಕ್ಷನ್ ಬಳಿ ಅಪಘಾತಕ್ಕೆ ಒಳಗಾಯಿತು. ಬಸ್ ಡಿಕ್ಕಿ ಹೊಡೆದ ರಭಸಕ್ಕೆ ಕಾರಿನ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದೆ.

## ಅರಣ್ಯ ಅಪರಾಧ ಪತ್ತೆಗೆ ಬೆಲ್ಜಿಯಂ 'ಸ್ನಿಫರ್' ನಾಯಿಗಳು ಸಜ್ಜು: ಹುಲಿ ಸೆರೆಗೂ ಬರಲಿವೆ ನೆರವಿಗೆ

**ಚಾಮರಾಜನಗರ ಸೆ.20:** ಕಾಡುಗಳಲ್ಲಿ ಅಕ್ರಮ ಚಟುವಟಿಕೆಗಳ ಪತ್ತೆ ಮತ್ತು ತನಿಖೆ ನಡೆಸಲು ಸಹಕಾರಿಯಾಗುವ ನಿಟ್ಟಿನಲ್ಲಿ ಅರಣ್ಯ ಇಲಾಖೆಯು ಬೆಲ್ಜಿಯಂ ದೇಶದ ತಳಿಯಾದ 'ಸ್ನಿಫರ್ ನಾಯಿ'ಗಳಿಗೆ ತರಬೇತಿ ನೀಡಿದೆ. 10 ನಾಯಿಗಳನ್ನು ಕಾಡಿನ ಸೂಕ್ಷ್ಮತೆಗಳನ್ವಯ ತಯಾರಿ ಮಾಡಿದ್ದು, ಇವುಗಳನ್ನು ತಲಾ 2ರಂತೆ 5 ಹುಲಿ ಸಂರಕ್ಷಿತಾರಣ್ಯಗಳಿಗೆ ಹಸ್ತಾಂತರಿಸಿದೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತಾರಣ್ಯದ ಮೇಲುಕಾಮನಹಳ್ಳಿಯಲ್ಲಿ ಇವುಗಳ ತರಬೇತಿ ಪೂರ್ಣಗೊಂಡಿದ್ದು, ಈಗಾಗಲೇ ಸದ್ದಿಲ್ಲದೇ ಕಾರ್ಯಾರಂಭಿಸಿದೆ.

ಇವುಗಳು ಹುಲಿ ಸೆರೆಹಿಡಿಯಲೂ ಸಹ ಸಹಕಾರಿಯಾಗಲಿರುವುದು ಇಲ್ಲಿ ಗಮನಾರ್ಹ. ಈ ಹಿಂದೆ ಅರಣ್ಯ ಇಲಾಖೆಯು ಜರ್ಮನ್ ಶೆಫರ್ಡ್ ತಳಿಯ 'ರಾಣಾ' ಎಂಬ ನಾಯಿಯನ್ನು ಬಳಸುತ್ತಿತ್ತು. ಇದು ಮೃತಪಟ್ಟ ಬಳಿಕ ಮುಧೋಳ ತಳಿಯ ನಾಯಿಗಳನ್ನು ಬಳಸಿತ್ತು. ಈಗ ಬೆಲ್ಜಿಯಂ ದೇಶದ ನಾಯಿಗಳಿಗೆ ತರಬೇತಿ ನೀಡಿದೆ. ಸ್ನಿಫರ್ ಶ್ವಾನಗಳು ಅತಿ ವೇಗವಾಗಿ ಪತ್ತೆದಾರಿಕೆ ನಡೆಸಲಿದ್ದು, ವಾಸನೆ ಗ್ರಹಿಕೆಯಲ್ಲಿ ಬಹಳಷ್ಟು ದೂರ ವಾಸನೆಯನ್ನು ಈ ಶ್ವಾನಗಳು ಹುಡುಕಿಕೊಂಡು ಹೋಗಲಿದೆ.

ತೆಳುವಾದ ಉದ್ದನೆಯ ದೇಹದಿಂದ ಬೇರೆ ತಳಿಯ ಶ್ವಾನಗಳಿಗಿಂತ ಎರಡು ಪಟ್ಟು ಹೆಚ್ಚು ವೇಗವಾಗಿ ಓಡಲಿದೆ. ದಟ್ಟಾರಣ್ಯದಲ್ಲಿ ಹುಡುಕಾಟಕ್ಕೆ ಎತ್ತರಕ್ಕೆ ಜಿಗಿಯುವ ಸಾಮರ್ಥ್ಯವನ್ನು ಈ ನಾಯಿಗಳು ಹೊಂದಿವೆ.

ಹಾಗಾಗಿ, ಅರಣ್ಯ ಇಲಾಖೆ ಈ ಬೆಲ್ಜಿಯಂ ಶ್ವಾನಗಳಿಗೆ ವಿಶೇಷ



ತರಬೇತಿ ಕೊಟ್ಟು ಹುಲಿ ರಕ್ಷಿತಾರಣ್ಯಗಳಿಗೆ ನೀಡಿದೆ.ಇವುಗಳು ಹುಲಿಗಳ ವಾಸನೆ ಗ್ರಹಿಸಿ ಅವುಗಳ ಇರುವಿಕೆಯನ್ನು ಪತ್ತೆಹಚ್ಚುವ ಸಾಮರ್ಥ್ಯ ಹೊಂದಿದ್ದು, ಹುಲಿ ಸೆರೆ ಹಿಡಿಯಲು ಸಹಕಾರಿ ಯಾಗಲಿವೆ. ಹೀಗಾಗಿ 5 ಹುಲಿ ರಕ್ಷಿತಾರಣ್ಯಗಳಿಗೆ ಹಸ್ತಾಂತರಿಸಲಾಗಿದೆ.

## ಬೀದರ್‌ನಲ್ಲಿ ಅದ್ಧೂರಿ ಗಣೇಶ ವಿಸರ್ಜನೆ: ಡಿಜೆ ಸದ್ದಿಗೆ ಯುವಕರ ಕುಣಿತ, ಗಣ್ಯರ ಸಂಭ್ರಮ



**ಬೀದರ್, ಸೆ. 20:** ನಗರದಲ್ಲಿ ಏಳನೆ ದಿನದಂದು ಗಣೇಶ ವಿಸರ್ಜನೆ ಸಂಭ್ರಮ ಮನೆಮಾಡಿದ್ದು, ಗವಾನ್ ಚೌಕ್‌ನ ರಾಮಮಂದಿರದ ಗಣೇಶನಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೇರಿದಂತೆ ಗಣ್ಯರು ಪ್ರಥಮ ಪೂಜೆ ನೆರವೇರಿಸಿದರು. ಬಳಿಕ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ವಿಘ್ನೇಶ್ವರನಿಗೆ ಪೂಜೆ ಸಲ್ಲಿಸಿ ವಿಸರ್ಜನಾ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ರಹೀಮ್ ಖಾನ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಎಸ್‌ಪಿ ಪ್ರದೀಪ್ ಗುಂಟಿ, ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಪ್ರಮುಖ ರಸ್ತೆಗಳಲ್ಲಿ ಸಾಗಿದ ಗಣೇಶನ ಮೆರವಣಿಗೆಯಲ್ಲಿ ಸಾವಿರಾರು ಯುವಕರು ಡಿಜೆ ಸೌಂಡ್‌ಗೆ ಹೆಜ್ಜೆ ಹಾಕಿ ಸಂಭ್ರಮಿಸಿದರು.

ಚೌಬಾರಾ ಮೇಲಿಂದ ಗಣೇಶ ಮೂರ್ತಿಗಳಿಗೆ ಅದ್ಧೂರಿ ಸ್ವಾಗತ ನೀಡಲಾಯಿತು.

ನಗರದಲ್ಲಿ ಸುಮಾರು 200ಕ್ಕೂ ಹೆಚ್ಚು ಬೃಹತ್ ಸಾರ್ವಜನಿಕ ಗಣೇಶ ಮೂರ್ತಿಗಳನ್ನು ತೆರೆದ ಲಾರಿ ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಮೆರವಣಿಗೆಯಲ್ಲಿ ಸಾಗಿಸಲಾಯಿತು. ಭಕ್ತರಿಗೆ ವಿವಿಧೆಡೆ ಪ್ರಸಾದ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿತ್ತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಕಟ್ಟುನಿಟ್ಟಿನ ಭದ್ರತಾ ಕ್ರಮ ಕೈಗೊಂಡಿದ್ದರು. ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾ ಹಾಗೂ ಡ್ರೋನ್‌ಗಳ ಮೂಲಕ ನಿಗಾ ವಹಿಸಲಾಗಿತ್ತು.

ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ವಿಸರ್ಜನೆಗೆ ವಿಶೇಷ ಆದ್ಯತೆ ನೀಡಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಚೌಬಾರಾ ಸಮೀಪ ನಿರ್ಮಿಸಲಾಗಿದ್ದ ತೊಟ್ಟಿಯಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿಯ ವಿಸರ್ಜನೆಗೆ ಚಾಲನೆ ನೀಡಿದರು.

### ಬಳ್ಳಾರಿಯಲ್ಲಿ ಮಳೆಗಾಗಿ ನಮಾಝ್-ಎ-ಇಸ್ತಿಸ್ಕಾ ಆಯೋಜನೆ

## ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಹಸ್ರಾರು ಮುಸ್ಲಿಮ್ ಬಾಂಧವರು ಭಾಗಿ

**ಬಳ್ಳಾರಿ, ಸೆ 20.**ಮಳೆಯ ಕೊರತೆ ಹಾಗೂ ನೀರಿನ ಅಭಾವದ ಹಿನ್ನೆಲೆಯಲ್ಲಿ ಭಾನುವಾರ ಬೆಳಗ್ಗೆ ಈದ್ಗಾ ಖದೀಮ್ (ಸುನ್ನಿ) ಮೈದಾನದಲ್ಲಿ ಮಳೆಗಾಗಿ ನಮಾಝ್–ಎ–ಇಸ್ತಿಸ್ಕಾ ಆಯೋಜಿಸಲಾಯಿತು. ಈ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮುಸ್ಲಿಮರು ಭಾಗವಹಿಸಿ, ಅತ್ಯಂತ ವಿನಯ ಮತ್ತು ಭಕ್ತಿಭಾವದಿಂದ ಅಲ್ಲಾಹ್ ಸನ್ನಿಧಿಯಲ್ಲಿ ಉತ್ತಮ ಮಳೆಗಾಗಿ ಪ್ರಾರ್ಥಿಸಿದರು.

ಸರ ಖಾಝಿ ಸಾಹೇಬ್ ಬಳ್ಳಾರಿ, ಖಾಝಿ ಹಾಗೂ ಖತೀಬ್ ಜಾಮಿಯಾ ಮಸ್ಜಿದ್–ಈದ್ಗಾ ಸುನ್ನಿ ಟ್ರಸ್ಟಿ ಅವರು ನಮಾಝ್–ಎ–ಇಸ್ತಿಸ್ಕಾಗೆ ಇಮಾಮತ್ ವಹಿಸಿ ಎರಡು ರಕಅತ್ ನಮಾಝ್ ನೆರವೇರಿಸಿದರು. ನಮಾಝ್ ನಂತರ ಖಾಝಿ ಸಾಹೇಬ್ ಅವರು ಖುತ್ಬಾ–ಎ–ಇಸ್ತಿಸ್ಕಾ ನೀಡಿದರು. ಇದರಲ್ಲಿ ಮಳೆಯ ಮಹತ್ವ, ಅಲ್ಲಾಹ್ ತಆಲಾ ನೀಡಿರುವ ಅನುಗ್ರಹಗಳಿಗೆ ಕೃತಜ್ಞತೆ ಸಲ್ಲಿಸುವುದು, ತೌಬಾ–ಇಸ್ತಿಗ್‌ಫಾರ್



ಮಾಡುವುದು ಹಾಗೂ ಅಲ್ಲಾಹ್‌ನ ಕಡೆಗೆ ಮರಳುವಂತೆ ಜನರಿಗೆ ಕರೆ ನೀಡಲಾಯಿತು.

ತಮ್ಮ ಭಾಷಣದಲ್ಲಿ ಖಾಝಿ ಸಾಹೇಬ್ ಅವರು, ನೀರು ಅಲ್ಲಾಹ್ ನೀಡಿರುವ ಅತ್ಯಂತ ಅಮೂಲ್ಯವಾದ ಅನುಗ್ರಹವಾಗಿದ್ದು, ಅದರ ಅವಶ್ಯಕತೆ ಕೇವಲ ಮನುಷ್ಯರಿಗೆ ಮಾತ್ರವಲ್ಲ; ಪ್ರಾಣಿ–ಪಕ್ಷಿಗಳು, ಜಾನುವಾರುಗಳು, ಬೆಳೆಗಳು, ಮರಗಳು ಮತ್ತು ಸಮಸ್ತ ಜೀವಜಾಲಕ್ಕೂ ಇದೆ ಎಂದು ಹೇಳಿದರು. ಆದ್ದರಿಂದ ಮಳೆಯಿಗಾಗಿ ಮಾಡುವ ಪ್ರಾರ್ಥನೆ ನಮ್ಮ ಸ್ವಂತ ಅಗತ್ಯಗಳಿಗಾಗಿ ಮಾತ್ರವಲ್ಲದೆ ಸಂಪೂರ್ಣ ಮಾನವಕುಲ ಹಾಗೂ ಸಕಲ ಜೀವಿಗಳಿಗಾಗಿ ಇರಬೇಕು ಎಂದು ತಿಳಿಸಿದರು.

ಅಲ್ಲಾ ಹ್‌ಎಲ್ಲರಿಗೂ ಪ್ರಯೋಜನ ವಾಗುವ ಕರುಣೆಯ ಮಳೆಯನ್ನು ಸುರಿಸಲಿ; ಬಡವರು ಮತ್ತು ಅಗತ್ಯವಿರುವವರ ಸಂಕಷ್ಟಗಳು ದೂರವಾಗಲಿ; ರೈತರ ಹೊಲಗಳು ಹಸಿರಾಗಲಿ; ಪ್ರಾಣಿ–ಪಕ್ಷಿಗಳಿಗೆ ನೀರು ದೊರೆಯಲಿ; ಮರ–ಗಿಡಗಳು ಸಮೃದ್ಧವಾಗಿ ಬೆಳೆಯಲಿ ಮತ್ತು ಸಮಸ್ತ ಸೃಷ್ಟಿಯು ಅಲ್ಲಾಹ್‌ನ ಈ ಕರುಣೆಯಿಂದ ಪ್ರಯೋಜನ ಪಡೆಯಲಿ ಎಂದು ಪ್ರಾರ್ಥಿಸಲಾಯಿತು. ಖಾಝಿ ಸಾಹೇಬ್ ಅವರ ರಹ್ಮತ್‌ಭರಿತ ಹಾಗೂ ಭಾವುಕ ದುಆದಿಂದ ಸಂಪೂರ್ಣ ವಾತಾವರಣವು ಅತ್ಯಂತ ಭಾವನಾತ್ಮಕವಾಗಿ ಮಾರ್ಪಟ್ಟಿತು. ಅನೇಕ ಭಕ್ತರ ಕಣ್ಣುಗಳಿಂದ ಕಣ್ಣೀರು ಧಾರೆಯಾಗಿ ಹರಿಯಿತು.

## ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿ ಕೊಳ್ಳಿ: ಡಿ.ಸಿ ನಾಗೇಂದ್ರಪ್ರಸಾದ್ ಕೆ.




**ಬಳ್ಳಾರಿ,ಸೆ.20–**18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಯುವಕ–ಯುವತಿಯರು ಹಾಗೂ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು, ಮತದಾರರ ಗುರುತಿನ ಚೀಟಿ ಪಡೆದು ಪ್ರಜಾಪ್ರಭುತ್ವದ ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸ 'ಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಹೇಳಿದರು.

ಮತದಾರರ ಪಟ್ಟಿಯಲ್ಲಿ ಅರ್ಹ ವ್ಯಕ್ತಿಗಳ ಹೆಸರು ಕೈಬಿಟ್ಟಿದ್ದರೆ, ಕೂಡಲೇ ಸಂಬಂಧಪಟ್ಟ ಚುನಾವಣಾ ಅಧಿಕಾರಿಗಳ ಗಮನಕ್ಕೆ ತಂದು ಹೆಸರು ನೋಂದಾಯಿಸಿಕೊಳ್ಳಬೇಕು. 18 ವರ್ಷ ಮೇಲ್ಪಟ್ಟ ಅರ್ಹ ಯುವಕರು ಅಕ್ಟೋಬರ್ 1ರಿಂದ ಮತದಾರರ ಪಟ್ಟಿಗೆ ಹೆಸರು ಸೇರಿಸಲು ನೋಂದಣಿ ಮಾಡಿಕೊಳ್ಳಬಹುದು ಎಂದರು.

ಮ್ಯಾರಥಾನ್‌ನಲ್ಲಿ ಯುವಕರು, ವಿವಿಧ ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡಿರುವುದು ಸಂತಸದ ಸಂಗತಿ. ಇಂತಹ ಜಾಗೃತಿ ಕಾರ್ಯಕ್ರಮಗಳು ಮತದಾನದ ಮಹತ್ವವನ್ನು ಜನರಿಗೆ ತಲುಪಿಸುವಲ್ಲಿ ಸಹಕಾರಿಯಾಗಲಿವೆ ಎಂದು ಹೇಳಿದರು.

ಯುವಜನರಲ್ಲಿ ಮತದಾನದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಮ್ಯಾರಥಾನ್ ಆಯೋಜಿಸಲಾಗಿದೆ. ಅರ್ಹ ಯುವಕರು ಅಕ್ಟೋಬರ್ 1ರಿಂದ ತಮ್ಮ ಸಮೀಪದ ಬೂತ್ ಮಟ್ಟದ ಅಧಿಕಾರಿಗಳ ಮೂಲಕ ಫಾರ್ಮ್–6 ಸಲ್ಲಿಸಿ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು.

# ಸೇವೆಯೇ ಸಂಘಟನೆಯ ಗುರುತು: ವಿಶ್ವ ಸ್ವಚ್ಛತಾ ದಿನದಂದು ಕಾಂಗ್ರೆಸ್ ಸೇವಾದಳದಿಂದ ದೇಶಾದ್ಯಂತ ಕಡಲತೀರದ ಸ್ವಚ್ಛತಾ ಅಭಿಯಾನ




**ನವದೆಹಲಿ,ಸೆ.20:** ವಿಶ್ವ ಸ್ವಚ್ಛತಾ ದಿನದ ಅಂಗವಾಗಿ, ಕಾಂಗ್ರೆಸ್ ಸೇವಾದಳವು ದೇಶದ ವಿವಿಧ ರಾಜ್ಯಗಳಲ್ಲಿ ಕಡಲತೀರದ ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಂಡು ಸೇವೆ, ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಯ ಸಂದೇಶವನ್ನು ಪಸರಿಸಿತು. ಒಡಿಶಾ, ಗುಜರಾತ್, ಗೋವಾ ಮತ್ತು ಕರ್ನಾಟಕದಲ್ಲಿ, ಸೇವಾ ದಳದ ಕಾರ್ಯಕರ್ತರು ಕಡಲತೀರಗಳು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಯಂಪ್ರೇರಿತ ಸ್ವಚ್ಛತಾ ಕಾರ್ಯಗಳನ್ನು ಕೈಗೊಂಡರು; ಅವರು ಕಸ ಮತ್ತು ಪ್ಲಾಸ್ಟಿಕ್ ತ್ಯಾಜ್ಯವನ್ನು ವಿಲೇವಾರಿ ಮಾಡುವುದರ ಜೊತೆಗೆ ಸ್ವಚ್ಛತೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಕಾಂಗ್ರೆಸ್ ಸೇವಾದಳದ ಮುಖ್ಯ ಸಂಘಟಕ ಶ್ರೀನಿವಾಸ್ ಬಿ.ವಿ. ಅವರು, "ಸ್ವಚ್ಛತೆಯು ಕೇವಲ ಛಾಯಾಚಿತ್ರಗಳು ಅಥವಾ ಅಭಿಯಾನಗಳಿಗೆ ಸೀಮಿತವಾದ ವಿಷಯವಲ್ಲ; ಇದು ನಮ್ಮ ಸಾಮಾಜಿಕ ಮೌಲ್ಯಗಳು ಮತ್ತು ಸಾಮೂಹಿಕ ಜವಾಬ್ದಾರಿಯ ಭಾಗವಾಗಿದೆ. ಅಗತ್ಯವಿರುವವರ ಬೆಂಬಲಕ್ಕೆ ನಿಲ್ಲುವುದು ಮಾತ್ರವಲ್ಲದೆ, ನಮ್ಮ ಸಮಾಜ ಮತ್ತು ಪರಿಸರದ ಬಗ್ಗೆ ಜವಾಬ್ದಾರಿಯನ್ನು ಹೊರುವುದೇ ಸೇವೆ ಎಂದು ಕಾಂಗ್ರೆಸ್ ಸೇವಾ ದಳ ನಂಬುತ್ತದೆ. ಮಹಾತ್ಮ ಗಾಂಧೀಜಿಯವರು ಶ್ರಮ ಮತ್ತು ಸ್ವಚ್ಛತೆಯನ್ನು ಸಾರ್ವಜನಿಕ ಸೇವೆಯೊಂದಿಗೆ ಬೆಸೆದಿದ್ದರು; ಆ ದೃಷ್ಟಿಕೋನವನ್ನು ವಾಸ್ತವದಲ್ಲಿ ಮುಂದುವರಿಸಲು ಸೇವಾ ದಳ ಬದ್ಧವಾಗಿದೆ. ದೇಶಾದ್ಯಂತ ನಮ್ಮ ಕಾರ್ಯಕರ್ತರು ಸೇವೆ ಮತ್ತು ಸಾಮಾಜಿಕ ಜವಾಬ್ದಾರಿಯಲ್ಲಿ ಸಕ್ರಿಯವಾಗಿ ಕೊಡುಗೆ ನೀಡುವಂತೆ ಮಾಡುವುದು ನಮ್ಮ ಸಂಕಲ್ಪವಾಗಿದೆ," ಎಂದು ಹೇಳಿದರು.

ಒಡಿಶಾದ ಗಂಜಾಂ ಜಿಲ್ಲೆಯ ಗೋಪಾಲ್ಪುರದಲ್ಲಿ, ಸೇವಾದಳದ ಕಾರ್ಯಕರ್ತರು ಕಡಲತೀರದಲ್ಲಿ ಸ್ವಚ್ಛತಾ ಅಭಿಯಾನ ನಡೆಸಿ, ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಿದರು ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛಗೊಳಿಸಿದರು. ಸಾರ್ವಜನಿಕ ಸ್ಥಳಗಳು ಮತ್ತು ಕಡಲತೀರಗಳನ್ನು ಸ್ವಚ್ಛವಾಗಿಡಲು ಸಹಕರಿಸುವಂತೆ ಕಾರ್ಯಕರ್ತರು ಸ್ಥಳೀಯ ನಿವಾಸಿಗಳಲ್ಲಿ ಮನವಿ ಮಾಡಿದರು.

ಗುಜರಾತ್‌ನ ಸೂರತ್‌ನಲ್ಲಿ, ಕಾಂಗ್ರೆಸ್ ಸೇವಾದಳದ ಕಾರ್ಯಕರ್ತರು ಸ್ವಯಂಪ್ರೇರಿತ ಶ್ರಮದ ಮೂಲಕ ಕಡಲತೀರದಲ್ಲಿ ಸ್ವಚ್ಛತಾ ಅಭಿಯಾನವನ್ನು ಕೈಗೊಂಡರು. ಅವರು ತ್ಯಾಜ್ಯವನ್ನು ಸಂಗ್ರಹಿಸಿದರು ಮತ್ತು ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿದರು.

ಗೋವಾದಲ್ಲಿ, ಸೇವಾದಳದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಕಡಲತೀರಗಳಲ್ಲಿ ವಿಶೇಷ ಸ್ವಚ್ಛತಾ ಅಭಿಯಾನವನ್ನು ನಡೆಸಿದರು. ಅವರು ಪ್ಲಾಸ್ಟಿಕ್ ಮತ್ತು ಇತರ ತ್ಯಾಜ್ಯವನ್ನು ಸಂಗ್ರಹಿಸಿದರು ಹಾಗೂ ಕಡಲತೀರಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛವಾಗಿಡುವಂತೆ ಜನರಿಗೆ ಮನವಿ ಮಾಡಿದರು.

ಕರ್ನಾಟಕದ ಕಾರವಾರದಲ್ಲಿ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸೇವಾದಳದ ಕಾರ್ಯಕರ್ತರು ರವೀಂದ್ರನಾಥ ಟ್ಯಾಗೋರ್ ಕಡಲತೀರದಲ್ಲಿ ಸ್ವಚ್ಛತಾ ಅಭಿಯಾನವನ್ನು ನಡೆಸಿದರು. ಮಹಾತ್ಮ ಗಾಂಧಿಯವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮ ಆರಂಭವಾಯಿತು, ನಂತರ ಕಡಲತೀರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಯಿತು.

ಈ ಉಪಕ್ರಮಗಳ ಮೂಲಕ, ಸ್ವಚ್ಛತೆ, ಸ್ವಯಂಪ್ರೇರಿತ ಶ್ರಮ ಮತ್ತು ಸಾಮೂಹಿಕ ಜವಾಬ್ದಾರಿಯ ಕುರಿತಾದ ಮಹಾತ್ಮ ಗಾಂಧೀಜಿಯವರ ಸಂದೇಶವನ್ನು ಮುಂದುವರಿಸುವ ತನ್ನ ಬದ್ಧತೆಯನ್ನು ಕಾಂಗ್ರೆಸ್ ಸೇವಾದಳ ಪುನರುಚ್ಚರಿಸಿತು.

ಸ್ವಚ್ಛತೆಯು ಕೇವಲ ಒಂದು ದಿನಕ್ಕೆ ಅಥವಾ ಯಾವುದಾದರೂ ಒಂದು ಸಂಘಟನೆಗೆ ಸೀಮಿತವಾದ ಜವಾಬ್ದಾರಿಯಲ್ಲ, ಬದಲಾಗಿ ಪ್ರತಿಯೊಬ್ಬ ನಾಗರಿಕ ಮತ್ತು ಸಾಮಾಜಿಕ ಸಂಘಟನೆಯ ಹಂಚಿಕೆಯ ಜವಾಬ್ದಾರಿಯಾಗಿದೆ ಎಂದು ಕಾಂಗ್ರೆಸ್ ಸೇವಾ ದಳ ತಿಳಿಸಿತು. ಈ ಮನೋಭಾವದೊಂದಿಗೆ, ಸೇವಾ ದಳವು ದೇಶಾದ್ಯಂತ ಸೇವೆ, ಪರಿಹಾರ ಕಾರ್ಯಗಳು, ಸ್ವಚ್ಛತೆ ಮತ್ತು ಸಾರ್ವಜನಿಕ ಕಲ್ಯಾಣಕ್ಕೆ ಸಂಬಂಧಿಸಿದ ಉಪಕ್ರಮಗಳನ್ನು ಕೈಗೊಳ್ಳುವುದನ್ನು ಮುಂದುವರಿಸಿದೆ.

ಸೇವಾದಳದ ಸಂದೇಶವು ಸ್ಪಷ್ಟವಾಗಿದೆ ಸೇವೆಯು ಕೇವಲ ಒಂದುದಿನದ ಕಾರ್ಯಕ್ರಮವಲ್ಲ, ಬದಲಾಗಿ ಅದು ನಿರಂತರ ಬದ್ಧತೆ ಮತ್ತು ಸಮಾಜದ ಕಲ್ಯಾಣಕ್ಕಾಗಿ ಶ್ರಮಿಸುವ ಒಂದು ಕಾರ್ಯಶೈಲಿಯಾಗಿದೆ.

# ಪಂಜಾಬ್ ಪೊಲೀಸ್ ಅಧಿಕಾರಿ ಹತ್ಯೆ ಪ್ರಕರಣ ಎನ್‌ಕೌಂಟರ್‌ನಲ್ಲಿ ಆರೋಪಿ ಸಾವು




**ಚಂಡೀಗಢ,ಸೆ.20:** ಪಂಜಾಬ್ ಪೊಲೀಸ್ ಸಹಾಯಕ ಸಬ್‌ಇನ್ಸ್‌ಪೆಕ್ಟರ್ ಹತ್ಯೆ ಪ್ರಕರಣದಲ್ಲಿ ಆರೋಪಿಯಾಗಿದ್ದ ಇಬ್ಬರಲ್ಲಿ ಓರ್ವ ಪೊಲೀಸ್ ಎನ್‌ಕೌಂಟರ್‌ನಲ್ಲಿ ಮೃತಪಟ್ಟಿದ್ದಾನೆ. ಮೃತ ಆರೋಪಿಯನ್ನು ಅಮೃತಸರದ ಮುಲ್ಚಕ್ ನಿವಾಸಿ ದೀಪಕ್ ಸಿಂಗ್ ಎಂದು ಗುರುತಿಸಲಾಗಿದೆ.

ಶುಕ್ರವಾರ ಹಿರಿಯ ಪೊಲೀಸ್ ಅಧಿಕಾರಿ ಹರ್ಜಿತ್ ಸಿಂಗ್ ಹಾಗೂ ಅವರ ಸಹಾಯಕನನ್ನು ಹಿಂಬಾಲಿಸಿ ಗುಂಡಿಕ್ಕಿ ಹತ್ಯೆ ಮಾಡಿದ್ದ ಆರೋಪ ದೀಪಕ್ ಸಿಂಗ್ ಸೇರಿದಂತೆ ಇಬ್ಬರ ಮೇಲಿತ್ತು. ಆರೋಪಿಗಳನ್ನು ಪತ್ತೆಹಚ್ಚಲು ಪೊಲೀಸರು ಸಿಸಿಟಿವಿ ದೃಶ್ಯಗಳು, ತಾಂತ್ರಿಕ ಮಾಹಿತಿ, ಟವರ್–ಡಂಪ್ ವಿಶ್ಲೇಷಣೆ, ಸ್ಥಳೀಯ ಗುಪ್ತಚರ ಮಾಹಿತಿ ಹಾಗೂ ಮಾನವ ಮೂಲಗಳ ನೆರವು ಪಡೆದಿದ್ದರು.

ಈ ಮಾಹಿತಿ ಆಧರಿಸಿ ಪೊಲೀಸರು ಆರೋಪಿಗಳ ಚಲನವಲನ ಪತ್ತೆಹಚ್ಚಿದ್ದರು. ರಾತ್ರಿ ಸುಮಾರು 9:45ರ ವೇಳೆಗೆ ಪೊಲೀಸ್ ಚೆಕ್‌ಪೋಸ್ಟ್ ಬಳಿ ಸ್ಕೂಟರ್‌ನಲ್ಲಿ ಬಂದಿದ್ದ ಇಬ್ಬರು ಶಂಕಿತರನ್ನು ಪೊಲೀಸರು ನಿಲ್ಲಿಸಲು ಸೂಚಿಸಿದ್ದರು. ಈ ವೇಳೆ ಆರೋಪಿಗಳು ಪೊಲೀಸರತ್ತ ನಾಲ್ಕು ಸುತ್ತು ಗುಂಡು ಹಾರಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಳಿಕ ಪೊಲೀಸರು ಆತ್ಮರಕ್ಷಣೆಗಾಗಿ ಪ್ರತಿದಾಳಿ ನಡೆಸಿದ್ದಾರೆ.

ಪೊಲೀಸರ ಗುಂಡಿನ ದಾಳಿಯಲ್ಲಿ ದೀಪಕ್ ಸಿಂಗ್‌ಗೆ ಗುಂಡೇಟು ತಗುಲಿದ್ದು, ಗಾಯಗೊಂಡ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಆತ ಮೃತಪಟ್ಟಿದ್ದಾನೆ ಎಂದು ವೈದ್ಯರು ಘೋಷಿಸಿದ್ದಾರೆ. ಇನ್ನೊಬ್ಬ ಆರೋಪಿ ಸ್ಥಳದಿಂದ ಪರಾರಿಯಾಗಿದ್ದು, ಆತನಿಗಾಗಿ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ಎನ್‌ಕೌಂಟರ್ ಬಳಿಕ ಆರೋಪಿಯಿಂದ ಎ.30 ಬೋರ್ ಪಿಸ್ತೂಲ್, ಎಂಟು ಜೀವಂತ ಗುಂಡುಗಳು, ಮೊಬೈಲ್ ಫೋನ್ ಹಾಗೂ ಕೃತ್ಯಕ್ಕೆ ಬಳಸಲಾಗಿದೆ ಎನ್ನಲಾದ ಹೋಂಡಾ ಆಕ್ಟಿವಾ ಸ್ಕೂಟರ್ ವಶಪಡಿಸಿಕೊಳ್ಳಲಾಗಿದೆ. ಇದೇ ವೇಳೆ ಪ್ರಕರಣದಲ್ಲಿ ಪಾಕಿಸ್ತಾನ ಮೂಲದ ಉಗ್ರ ಸಂಪರ್ಕವಿದೆಯೇ ಎಂಬ ಬಗ್ಗೆಯೂ ತನಿಖೆ ನಡೆಯುತ್ತಿದೆ. ತನಿಖೆಯ ವೇಳೆ ಹೊರಬಂದ ಮಾಹಿತಿಯ ಪ್ರಕಾರ, ಪಾಕಿಸ್ತಾನ ಮೂಲದ ಓರ್ವ ಉಗ್ರ ಆರೋಪಿಗಳಿಗೆ ದಾಳಿ ನಡೆಸಲು ಹಣದ ಆಮಿಷ ನೀಡಿದ್ದಾನೆ ಎನ್ನಲಾಗಿದೆ.

ತರಣ್ ತಾರಣ್ ಜಿಲ್ಲೆಯ ನಿವಾಸಿಯಾಗಿದ್ದ ಹರ್ಜಿತ್ ಸಿಂಗ್ ಅವರು ಪೊಲೀಸ್ ಕಂಟ್ರೋಲ್ ರೂಮ್ ಕರ್ತವ್ಯದಲ್ಲಿದ್ದರು. ಶುಕ್ರವಾರ ಮಧ್ಯರಾತ್ರಿ ವೇಳೆಗೆ ಭಗ್ತನ್ವಾಲಾ ಧಾನ್ಯ ಮಾರುಕಟ್ಟೆ ಬಳಿ ಬೈಕ್‌ನಲ್ಲಿ ಬಂದಿದ್ದ ಇಬ್ಬರು ದುಷ್ಕರ್ಮಿಗಳು ಹರ್ಜಿತ್ ಸಿಂಗ್ ಅವರಿಗೆ ಅತ್ಯಂತ ಸಮೀಪದಿಂದ ಗುಂಡು ಹೊಡೆದಿದ್ದರು.

ಪಂಜಾಬ್ ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ಅವರು ಶುಕ್ರವಾರ ಬೆಳಗ್ಗೆ ಸ್ಥಳ ಪರಿಶೀಲನೆ ನಡೆಸಿದ ಬಳಿಕ ಘಟನೆ ಕುರಿತು ಮಾಹಿತಿ ನೀಡಿದ್ದರು. ಹರ್ಜಿತ್ ಸಿಂಗ್ ಅವರ ಕುತ್ತಿಗೆಯ ಹಿಂಭಾಗಕ್ಕೆ ಸ್ವಲ್ಪ ಕೆಳಭಾಗದಲ್ಲಿ ಹಿಂದಿನಿಂದ ಬಂದ ಒಂದೇ ಒಂದು ಗುಂಡು ತಗುಲಿತ್ತು ಎಂದು ಗೌರವ್ ಯಾದವ್ ತಿಳಿಸಿದ್ದರು.

ಘಟನಾ ಸ್ಥಳದಲ್ಲಿ .30 ಬೋರ್ ಪಿಸ್ತೂಲ್‌ನ ಖಾಲಿ ಕಾರ್ಟ್ರಿಡ್ಜ್ ಕೂಡ ಪತ್ತೆಯಾಗಿತ್ತು. ಪ್ರಕರಣದ ತನಿಖೆ ಮುಂದುವರಿದಿದ್ದು, ಪರಾರಿಯಾಗಿರುವ ಮತ್ತೊಬ್ಬ ಆರೋಪಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ.

# ಸೌದಿ ಅರೇಬಿಯಾ ಮೇಲಿನ ಹೌತಿ ದಾಳಿಗೆ ಕತಾರ್ ತೀವ್ರ ಖಂಡನೆ

**ದೋಹಾ, ಸ.20:** ಬಿಶ್, ತೈಫ್, ಫರಾಸನ್ ಮತ್ತು ಯಾನ್ಬುವಿನಾದ್ಯಂತ ನಾಗರಿಕರು ಮತ್ತು ಪ್ರಮುಖ ನಾಗರಿಕ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ರಿಯಾದ್ ಮೇಲೆ ಹೌತಿಗಳು ನಡೆಸಿದ ಬ್ಯಾಲಿಸ್ಟಿಕ್ ಕ್ಷಿಪಣಿ ದಾಳಿಯನ್ನು ಕತಾರ್ ವಿದೇಶಾಂಗ ಸಚಿವಾಲಯ ತೀವ್ರವಾಗಿ ಖಂಡಿಸಿದೆ.

ಅಧಿಕೃತ ಹೇಳಿಕೆಯೊಳಗೆ, ಸಚಿವಾಲಯವು ಈ ದಾಳಿಗಳನ್ನು ಸೌದಿ ಅರೇಬಿಯಾದ ಸಾರ್ವಭೌಮತ್ವದ "ಸ್ಪಷ್ಟ ಉಲ್ಲಂಘನೆ" ಎಂದು ನಿರೂಪಿಸಿದೆ, ಜೊತೆಗೆ ಅಂತರರಾಷ್ಟ್ರೀಯ ಕಾನೂನಿನ ಸ್ಪಷ್ಟ ಉಲ್ಲಂಘನೆಯಾಗಿದೆ, ಆದರೆ ರಾಷ್ಟ್ರೀಯ ಭದ್ರತೆ ಮತ್ತು ಹಿತಾಸಕ್ತಿಗಳನ್ನು ಕಾಪಾಡಲು ಕೈಗೊಂಡ ಪ್ರತಿಯೊಂದು ಕಾನೂನುಬದ್ಧ ಕ್ರಮಕ್ಕೂ ಅದರ ಬೆಂಬಲದೊಂದಿಗೆ ಸಾಮ್ರಾಜ್ಯದೊಂದಿಗೆ ತನ್ನ "ಸಂಪೂರ್ಣ ಒಗ್ಗಟ್ಟನ್ನು" ವ್ಯಕ್ತಪಡಿಸುತ್ತದೆ. "ನಾಗರಿಕರು ಮತ್ತು ನಾಗರಿಕ ಆಸ್ತಿಗಳ ಮೇಲಿನ ದಾಳಿಗಳನ್ನು ಕತಾರ್ ರಾಜ್ಯವು ತೀವ್ರವಾಗಿ ತಿರಸ್ಕರಿಸುತ್ತದೆ ಎಂದು ಸಚಿವಾಲಯ ಒತ್ತಿಹೇಳಿದೆ, ಈ ಬೇಜವಾಬ್ದಾರಿ ಕ್ರಮಗಳನ್ನು ತಕ್ಷಣವೇ ನಿಲ್ಲಿಸುವ ಮಹತ್ವವನ್ನು ಒತ್ತಿಹೇಳುತ್ತದೆ" ಎಂದು ಅದು ಹೇಳಿದೆ.

ಈ ಬೆಳವಣಿಗೆಗಳ ನಡುವೆ, ಹೆಚ್ಚಿದ ಪ್ರಾದೇಶಿಕ ಉದ್ವಿಗ್ನತೆಯಿಂದಾಗಿ ಪಶ್ಚಿಮ ಏಷ್ಯಾಕ್ಕೆ ಮತ್ತು ಅದರ ಮೂಲಕ ಪ್ರಯಾಣವನ್ನು ಮರುಪರಿಶೀಲಿಸುವಂತೆ ಅಮೆರಿಕವು ಅಮೆರಿಕನ್ನರನ್ನು ಒತ್ತಾಯಿಸಿತು, ಯೆಮೆನ್ನ ಹೌತಿ ಹೋರಾಟಗಾರರು ಸೌದಿ ಅರೇಬಿಯಾ ಕಡೆಗೆ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ಪ್ರಾರಂಭಿಸಿದಂತೆ ಸಂಭವನೀಯ ತ್ವರಿತ ಏರಿಕೆ, ವಿಮಾನ ಅಡಚಣೆಗಳು ಮತ್ತು ಯುಎಸ್ ಹಿತಾಸಕ್ತಿಗಳನ್ನು ಗುರಿಯಾಗಿಸಿಕೊಂಡು ದಾಳಿಗಳ ಬಗ್ಗೆ ಎಚ್ಚರಿಕೆ ನೀಡಿತು.

# ನ್ಯೂಯಾರ್ಕ್‌ಗೆ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಭೇಟಿ



**ಟೆಹ್ರಾನ್, ಸೆ.20:** ಮಧ್ಯಪ್ರಾಚ್ಯದಲ್ಲಿ ತೀವ್ರ ಉದ್ವಿಗ್ನತೆ ಮತ್ತು ರಾಜತಾಂತ್ರಿಕ ಬಿಕ್ಕಟ್ಟು ಮುಂದುವರಿದಿರುವ ಬೆನ್ನಲ್ಲೇ, ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಅಮೆರಿಕದ ನ್ಯೂಯಾರ್ಕ್‌ನಲ್ಲಿ ನಡೆಯಲಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 81ನೇ ಅಧಿವೇಶನದಲ್ಲಿ ಪಾಲ್ಗೊಳ್ಳಲು ಸಜ್ಜಾಗಿದ್ದಾರೆ. ಇರಾನ್ ಮತ್ತು ಅಮೆರಿಕದ ನಡುವೆ ತೀವ್ರ ಸಂಘರ್ಷ ಹಾಗೂ ರಾಜತಾಂತ್ರಿಕ ಭಿನ್ನಾಭಿಪ್ರಾಯಗಳಿದ್ದರೂ, ವಿಶ್ವಸಂಸ್ಥೆಯ ಆತಿಥೇಯ ದೇಶವಾಗಿರುವ ಕಾರಣಕ್ಕೆ ಅಮೆರಿಕದ ಡೊನಾಲ್ಡ್ ಟ್ರಂಪ್ ಸರ್ಕಾರ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಹಾಗೂ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಸೇರಿದಂತೆ ಪ್ರಮುಖ ನಿಯೋಗಕ್ಕೆ ವೀಸಾ ಮಂಜೂರು ಮಾಡಿದೆ.

ವಿಶ್ವಸಂಸ್ಥೆಯ ಸಭೆಯಲ್ಲಿ ಸೆಪ್ಟೆಂಬರ್ 23ರಂದು (ಬುಧವಾರ) ಮಸೂದ್ ಪೆಜೆಶ್ಕಿಯಾನ್ ಮಾತನಾಡಲಿದ್ದಾರೆ. ಈ ಭಾಷಣದಲ್ಲಿ ಅವರು ಇರಾನ್ ಮೇಲಿನ ಅಮೆರಿಕ–ಇಸ್ರೇಲ್ ಮಿಲಿಟರಿ ಕ್ರಮಗಳು, ಪ್ರದೇಶದಲ್ಲಿನ ಯುದ್ಧ ಪರಿಸ್ಥಿತಿ, ಅಣ್ವಸ್ತ್ರ ನೀತಿ ಹಾಗೂ ಅಮೆರಿಕದ ಆರ್ಥಿಕ ನಿರ್ಬಂಧಗಳ ಬಗ್ಗೆ ತಮ್ಮ ದೇಶದ ನಿಲುವನ್ನು ಜಾಗತಿಕ ವೇದಿಕೆಯಲ್ಲಿ ಮಂಡಿಸಲಿದ್ದಾರೆ.

**ಕಟ್ಟುನಿಟ್ಟಿನ ಪ್ರಯಾಣ ನಿರ್ಬಂಧ:**

ಇರಾನ್ ನಿಯೋಗಕ್ಕೆ ಅಮೆರಿಕ ವೀಸಾ ನೀಡಿದ್ದರೂ, ಅವರಿಗೆ ನ್ಯೂಯಾರ್ಕ್‌ನಲ್ಲಿನ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯ ಸುತ್ತಮುತ್ತ ಮಾತ್ರ ಪ್ರಯಾಣಿಸಲು ಕಟ್ಟುನಿಟ್ಟಿನ ನಿಯಮಗಳನ್ನು ವಿಧಿಸಲಾಗಿದೆ. ಈ ಬಾರಿ ಇರಾನ್ ನಿಯೋಗವು ಎಂದಿಗಿಂತಲೂ ಚಿಕ್ಕದಾಗಿದ್ದು, ಇರಾನ್ ಅಧ್ಯಕ್ಷರ ಮಾಧ್ಯಮ ತಂಡಕ್ಕೂ ಅಮೆರಿಕ ವೀಸಾ ನಿರಾಕರಿಸಿದೆ.

**ಇಸ್ರೇಲ್–ಇರಾನ್–ಅಮೆರಿಕ ಮುಖಾಮುಖಿ:**

ಈ ಪ್ರವಾಸದ ವೇಳೆ, ಇರಾನ್ ಅಧ್ಯಕ್ಷ ಪೆಜೆಶ್ಕಿಯಾನ್ ಅವರು ವಿಶ್ವಸಂಸ್ಥೆಯ ಮಹಾಸಭೆಯ ಹಿನ್ನೆಲೆಯಲ್ಲಿ ಹಲವು ದೇಶಗಳ ಪ್ರಮುಖ ನಾಯಕರೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದಾರೆ. ಈ ಮಹಾಸಭೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಕೂಡ ಭಾಗವಹಿಸುತ್ತಿದ್ದು, ಇರಾನ್ ಅಧ್ಯಕ್ಷ ಪೆಜೆಶ್ಕಿಯಾನ್ ಅವರ ಈ ಭೇಟಿಯು ಜಾಗತಿಕವಾಗಿ ತೀವ್ರ ಕುತೂಹಲ ಮೂಡಿಸಿದೆ. ಯುದ್ಧವನ್ನು ಕೊನೆಗೊಳಿಸಲು ಅಮೆರಿಕ ಮತ್ತು ಇರಾನ್ ನಡುವೆ ಮಾತುಕತೆಗಳು ನಡೆದಿದ್ದರೂ, ಯಾವುದೇ ಅಂತಿಮ ನಿರ್ಧಾರವಾಗಿಲ್ಲ. ಹಾರ್ಮುಜ್ ಜಲಸಂಧಿಯನ್ನು ತನ್ನ ನಿಯಂತ್ರಣದಲ್ಲೇ ಇರಿಸಿಕೊಳ್ಳಲು ಇರಾನ್ ಪಟ್ಟು ಹಿಡಿದಿದ್ದರೆ, ಅಮೆರಿಕವು ಜಲಸಂಧಿಯಲ್ಲಿ ಎಲ್ಲಾ ಹಡಗುಗಳ ಮುಕ್ತ ಸಂಚಾರವನ್ನು ಬಯಸುತ್ತಿದೆ.

**ಅಮೆರಿಕಕ್ಕೆ ಇರಾನ್ ಷರತ್ತು:**

ಹಾರ್ಮುಜ್ ಜಲಸಂಧಿಯನ್ನು ಮರುಪರಿಶೀಲಿಸಲು ಇರಾನ್ ಅಮೆರಿಕಕ್ಕೆ ತಮ್ಮ ಷರತ್ತುಗಳನ್ನು ಸ್ಪಷ್ಟವಾಗಿ ರವಾನಿಸಿದೆ. ಎಲ್ಲಾ ರಂಗಗಳಲ್ಲೂ ಸಶಸ್ತ್ರ ದಾಳಿಗಳನ್ನು ತಕ್ಷಣವೇ ನಿಲ್ಲಿಸಬೇಕು, ಇರಾನ್ನ ಮುಟ್ಟುಗೋಲು ಹಾಕಿಕೊಳ್ಳಲಾದ ಹಣವನ್ನು ಬಿಡುಗಡೆ ಮಾಡಬೇಕು, ನೌಕಾ ದಿಗ್ಬಂಧನವನ್ನು ಸಂಪೂರ್ಣವಾಗಿ ತೆರವುಗೊಳಿಸಬೇಕು ಎಂಬ ಷರತ್ತುಗಳನ್ನು ಒಪ್ಪಿಕೊಳ್ಳುವವರೆಗೆ ಮತ್ತು ಅಮೆರಿಕ ತನ್ನ ಭರವಸೆಗಳನ್ನು ಈಡೇರಿಸುವವರೆಗೆ ಹಾರ್ಮುಜ್ ಜಲಸಂಧಿಯನ್ನು ತೆರೆಯುವುದು ಅಸಾಧ್ಯ ಎಂದು ಇರಾನ್ ಸ್ಪಷ್ಟಪಡಿಸಿದೆ.

# ಷರತ್ತು ಈಡೇರುವವರೆಗೆ ಹಾರ್ಮುಜ್ ತೆರೆಯುವುದಿಲ್ಲ: ಅಮೆರಿಕಕ್ಕೆ ಸಂದೇಶ




**ಟೆಹರಾನ್,ಸೆ.20:** ತಮ್ಮ ಷರತ್ತುಗಳು ಈಡೇರುವವರೆಗೆ ಮತ್ತು ಅಮೆರಿಕಾದ ಬದ್ಧತೆಗಳು ಜಾರಿಯಾಗುವವರೆಗೆ ಹಾರ್ಮುಜ್ ಜಲಸಂಧಿಯನ್ನು ಇರಾನ್ ತೆರೆಯುವುದಿಲ್ಲ ಎಂದು ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಾಘರ್ ಘಾಲಿಬಾಫ್ ಭಾನುವಾರ ತಿಳಿಸಿರುವುದಾಗಿ 'ಫಾರ್ಸ್' ಸುದ್ದಿ ಸಂಸ್ಥೆ ವರದಿ ಮಾಡಿದೆ. ಇರಾನ್ ಹೋರಾಟ ಮತ್ತು ಮಾತುಕತೆ ಎರಡನ್ನೂ ಮಾಡಬೇಕಾಗಿದೆ. ಮಧ್ಯವರ್ತಿಗಳ ಮೂಲಕ ತಮ್ಮ ಷರತ್ತುಗಳನ್ನು ಎದುರಾಳಿಗೆ ಸ್ಪಷ್ಟವಾಗಿ ವಿವರಿಸಲಾಗಿದೆ. ಈ ಷರತ್ತುಗಳನ್ನು ಪೂರೈಸುವವರೆಗೆ, ಇರಾನ್ ಜನರ ಕಾನೂನುಬದ್ಧ ಹಕ್ಕುಗಳನ್ನು ಗುರುತಿಸುವವರೆಗೆ ಮತ್ತು ಅಮೆರಿಕನ್ನರು ತಮ್ಮ ಬದ್ಧತೆಗಳನ್ನು ಈಡೇರಿಸುವವರೆಗೆ ಹಾರ್ಮುಝ್ ಜಲಸಂಧಿಯನ್ನು ತೆರೆಯಲು ಯಾವುದೇ ಅವಕಾಶವಿರುವುದಿಲ್ಲ ಎಂದು ಘಾಲಿಬಾಫ್ ಹೇಳಿರುವುದಾಗಿ ವರದಿಯಾಗಿದೆ. ಈ ಮಧ್ಯೆ, ಇರಾನ್ ನ ಪ್ರಸ್ತುತ ಯೋಜನೆಯು ಗಲ್ಫ್‌ನಿಂದ ಒಮಾನ್ ಕೊಲ್ಲಿ ಮತ್ತು ಅರೇಬಿಯನ್ ಸಮುದ್ರದವರೆಗೆ ವಿಸ್ತರಿಸಿರುವ ಅಮೆರಿಕದ ನೌಕಾಪಡೆಯ ಮೇಲೆ ಕೇಂದ್ರೀಕೃತವಾಗಿದೆ. ಇರಾನ್ ಇತ್ತೀಚೆಗೆ ನೌಕಾ–ವಿರೋಧಿ ಕ್ಷಿಪಣಿಯ ಪರೀಕ್ಷಾರ್ಥ ಪ್ರಯೋಗವನ್ನು ಯಶಸ್ವಿಯಾಗಿ ನಡೆಸಿದೆ ಎಂದು ಇರಾನ್‌ನ ರಾಷ್ಟ್ರೀಯ ಭದ್ರತಾ ಮಂಡಳಿಯ ಕಾರ್ಯದರ್ಶಿ ಮೊಹ್ಸೆನ್ ರೆಜಾಯಿ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಇರಾನ್ ನೀಡುವ ಉತ್ತರವು ವ್ಯಾಪಕವಾಗಿರಬಹುದು. ಈ ಪ್ರದೇಶದಲ್ಲಿರುವ ಅಮೆರಿಕದ ನೆಲೆಗಳು ಹಾಗೂ ಸ್ಥಳೀಯವಾಗಿ ಕಾರ್ಯಾಚರಿಸುತ್ತಿರುವ ಅಮೆರಿಕದ ವಾಣಿಜ್ಯ ಹಿತಾಸಕ್ತಿಗಳು ಮತ್ತು ಕಂಪನಿಗಳನ್ನು ಗುರಿಯಾಗಿಸಿಕೊಳ್ಳಬಹುದು ಎಂದು ರೆಜಾಯಿ ಎಚ್ಚರಿಸಿದ್ದಾರೆ.

# ಮಿಲಿಟರಿ ಹಸ್ತಕ್ಷೇಪ ನಡೆಸಿದರೆ ತೀವ್ರ ಪ್ರತಿಕ್ರಮ ಪಾಕಿಸ್ತಾನ, ತುರ್ಕಿಯೆಗೆ ಹೌತಿಗಳ ಎಚ್ಚರಿಕೆ



**ಸನಾ, ಸೆ. 20:** ಸೌದಿ ಅರೇಬಿಯಾದ ಬೆಂಬಲಕ್ಕೆ ಪಡೆಗಳನ್ನು ನಿಯೋಜಿಸದಂತೆ ಅಥವಾ ಮಿಲಿಟರಿ ಹಸ್ತಕ್ಷೇಪ ಮಾಡದಂತೆ ಯಮನ್ನ ಹೌತಿ ಗುಂಪು ಪಾಕಿಸ್ತಾನ ಮತ್ತು ತುರ್ಕಿಯೆ ವಿರುದ್ಧ ಸ್ಪಷ್ಟ ಮಿಲಿಟರಿ ಬೆದರಿಕೆಯನ್ನು ಒಡ್ಡಿದೆ.

ಸೌದಿ ಅರೇಬಿಯಾ, ಪಾಕಿಸ್ತಾನ ಮತ್ತು ತುರ್ಕಿಯೆ ನಡುವೆ ಆಗಸ್ಟ್‌ನಲ್ಲಿ ಸಹಿ ಮಾಡಲಾದ ತ್ರಿಪಕ್ಷೀಯ ಜಂಟಿ ಭದ್ರತಾ ಒಪ್ಪಂದವಾದ 'ಮಕ್ಕಾ ಜಂಟಿ ರಕ್ಷಣಾ ಒಪ್ಪಂದ'ವನ್ನು ಸಕ್ರಿಯಗೊಳಿಸುವ ಸಂಭಾವ್ಯತೆಯ ಕುರಿತು ಪಾಕಿಸ್ತಾನಿ ರಕ್ಷಣಾ ಅಧಿಕಾರಿಗಳ ಸಾರ್ವಜನಿಕ ಹೇಳಿಕೆಗಳ ಬೆನ್ನಲ್ಲೇ ಈ ಎಚ್ಚರಿಕೆ ಬಂದಿದೆ.

ಇಸ್ಲಾಮಾಬಾದ್ ಅಥವಾ ಅಂಕಾರಾದಿಂದ ಯಾವುದೇ ನೇರ ಮಿಲಿಟರಿ ಹಸ್ತಕ್ಷೇಪ ನಡೆದರೆ, ಅದು ಎರಡೂ ದೇಶಗಳ ವಿರುದ್ಧ ತೀವ್ರ ಮತ್ತು ತಕ್ಷಣದ ಮಿಲಿಟರಿ ಪ್ರತೀಕಾರಕ್ಕೆ ಕಾರಣವಾಗುತ್ತದೆ ಎಂದು ಹೌತಿಗಳ ಹಿರಿಯ ಅಧಿಕಾರಿಯೊಬ್ಬರು ರವಿವಾರ ಎಚ್ಚರಿಕೆ ನೀಡಿರುವುದಾಗಿ ವರದಿಯಾಗಿದೆ.

'ಸೌದಿ ನೇತೃತ್ವದ ಮಿಲಿಟರಿ ಕಾರ್ಯಾಚರಣೆಗಳು ಮತ್ತು ಆರ್ಥಿಕ ದಿಗ್ಬಂಧನಗಳ ವಿರುದ್ಧ ನಾವು ರಕ್ಷಣಾತ್ಮಕ ಪ್ರತಿಕ್ರಮ ನಡೆಸಿದ್ದೇವೆ. ಆದರೂ, ಪಾಕಿಸ್ತಾನ ಅಥವಾ ತುರ್ಕಿಯೆ ಪಡೆಗಳು ಸೌದಿಯ ಜೊತೆಗೆ ದಾಳಿಗೆ ಕೈಜೋಡಿಸಿದರೆ, ನಾವು 'ಕಬ್ಬಿಣದ ಮುಷ್ಟಿ'ಯಿಂದ ಪ್ರತಿದಾಳಿ ನಡೆಸುತ್ತೇವೆ. ಸಂಘರ್ಷಕ್ಕೆ ಧುಮುಕುವ ಯಾವುದೇ ವಿದೇಶಿ ಶಕ್ತಿಯನ್ನು ಶಿಕ್ಷೆಗೆ ಒಳಪಡಿಸುತ್ತೇವೆ. ನಾವು ಯಾವುದೇ ದೇಶದ ವಿರುದ್ಧ ಶತ್ರುತ್ವದ ಉದ್ದೇಶವನ್ನು ಹೊಂದಿಲ್ಲ. ಸೌದಿ ಒಕ್ಕೂಟಕ್ಕೆ ಮಿಲಿಟರಿ ಪ್ರಾತಿನಿಧಿಕ ಪಡೆಗಳಾಗಿ ಕಾರ್ಯನಿರ್ವಹಿಸುವ ಬದಲು ಎರಡೂ ಶಕ್ತಿಗಳು ತಟಸ್ಥ ನಿಲುವು ತಳೆಯುವುದು ಒಳಿತು' ಎಂದು ಅವರು ಹೇಳಿದ್ದಾರೆ.

# ಬಿಹಾರದ ಬೊಕ್ಕಸ ಖಾಲಿ, ಮೋದಿ ಹುಟ್ಟುಹಬ್ಬಕ್ಕೆ ಕೋಟ್ಯಂತರ ರೂ. ಖರ್ಚು



**ಪಟನಾ,ಸೆ.20:** ಬಿಹಾರದ ಬೊಕ್ಕಸ ಬರಿದಾಗಿದ್ದು, ಮೋದಿ ಹುಟ್ಟುಹಬ್ಬಕ್ಕೆ ಕೋಟಿ ಕೋಟಿ ಖರ್ಚು ಮಾಡಲಾಗಿದೆ ಎಂದು ಆರ್‌ಜೆಡಿಯ ರಾಷ್ಟ್ರೀಯ ಕಾರ್ಯಾಧ್ಯಕ್ಷ ತೇಜಸ್ವಿ ಯಾದವ್ ದೂರಿದ್ದಾರೆ.

ಬೊಕ್ಕಸ ಖಾಲಿಯಾಗಿದ್ದರೂ ಸೆಪ್ಟೆಂಬರ್ 17ರಂದು ಪ್ರಧಾನಿ ನರೇಂದ್ರ ಮೋದಿ ಹುಟ್ಟುಹಬ್ಬಕ್ಕೆ ಸರ್ಕಾರವು ಕೋಟ್ಯಂತರ ರೂ. ಖರ್ಚುಮಾಡಿ, ಹಲವು ಕಾರ್ಯಕ್ರಮಗಳನ್ನು ಆಯೋಜಿಸಿತ್ತು ಎಂದಿದ್ದಾರೆ. ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ನಿರ್ವಹಣೆ ಕುರಿತಂತೆ ಸರ್ಕಾರವನ್ನು ಪ್ರಶ್ನಿಸಿದ ಅವರು, ರಾಷ್ಟ್ರೀಯ ವಿಪತ್ತು ಎಂದು ಏಕೆ ಘೋಷಿಸಲಿಲ್ಲ ಎಂದು ಕೇಳಿದ್ದಾರೆ. ರಾಜ್ಯದಲ್ಲಿ ಬರ ಮತ್ತು ಪ್ರವಾಹದಿಂದ ತತ್ತರಿಸಿರುವ ಪ್ರತಿ ಕುಟುಂಬಕ್ಕೆ ಕೂಡಲೇ ತಲಾ 15,000 ಪರಿಹಾರ ನೀಡುವಂತೆ ಅವರು ಒತ್ತಾಯಿಸಿದ್ದಾರೆ. 'ಒಂದೆಡೆ ಪ್ರವಾಹದಲ್ಲಿ ಸಿಲುಕಿ ಜನ ಸಾಯುತ್ತಿದ್ದರೆ, ಮತ್ತೊಂದೆಡೆ, ರೈತರು ತೀವ್ರ ಬರ ಪರಿಸ್ಥಿತಿ ಎದುರಿಸುತ್ತಿದ್ದಾರೆ.

ಆದರೆ, ಸೂಕ್ಷ್ಮತೆ ಇಲ್ಲದ ಸರ್ಕಾರ ಅವರ ನೋವಿಗೆ ಸ್ಪಂದಿಸುತ್ತಿಲ್ಲ. ಬಿಹಾರದ ಪ್ರವಾಹ ಪರಿಸ್ಥಿತಿಯನ್ನು ರಾಷ್ಟ್ರೀಯ ವಿಪತ್ತು ಎಂದು ಏಕೆ ಘೋಷಿಸಲಿಲ್ಲ ಈ ಕೂಡಲೇ ರಾಷ್ಟ್ರೀಯ ವಿಪತ್ತು ಎಂದು ಘೋಷಿಸಬೇಕು' ಎಂದು ಅವರು ಒತ್ತಾಯಿಸಿದ್ದಾರೆ.

# ಡ್ರಗ್ಸ್ ಕೇಸಲ್ಲಿ ಪಂಜಾಬ್ ಟ್ರಕ್ ಚಾಲಕನಿಗೆ ಸೌದಿಯಲ್ಲಿ ಮರಣದಂಡನೆ: ಬಿಡುಗಡೆಗೆ ಕುಟುಂಬಸ್ಥರ ಮನವಿ



**ರಿಯಾದ್,ಸೆ.20:** ಮಾದಕವಸ್ತು ಕಳ್ಳಸಾಗಣಿಕೆ ಕೇಸ್ನಲ್ಲಿ ಸಿಕ್ಕಿಬಿದ್ದಿದ್ದ ಪಂಜಾಬ್ ಮೂಲದ ಟ್ರಕ್ ಚಾಲಕನಿಗೆ ಸೌದಿ ಅರೇಬಿಯಾದಲ್ಲಿ ಮರಣದಂಡನೆ ವಿಧಿಸಿ ಕೋರ್ಟ್ ಆದೇಶಿಸಿದೆ. ಆತನ ಬಿಡುಗಡೆಗೆ ನೆರವಾಗುವಂತೆ ಕುಟುಂಬಸ್ಥರು ಪಂಜಾಬ್ ಸರ್ಕಾರ ಮತ್ತು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಪಠಾನ್ ಕೋಟ್ ಜಿಲ್ಲೆಯ ಸುಜನ್ಪುರದ ನಿವಾಸಿ ಬಲ್ಜಿಂದರ್ ಸಿಂಗ್ ಮರಣದಂಡನೆ ಶಿಕ್ಷೆಗೆ ಗುರಿಯಾದ ಟ್ರಕ್ ಚಾಲಕ. ಮೂರು ವರ್ಷಗಳ ಹಿಂದೆ ದುಬೈ ಸೌದಿ ಅರೇಬಿಯಾ ಗಡಿಯ ಮೂಲಕ ಸಾಗುವಾಗ ವಾಹನ ತಪಾಸಣೆ ವೇಳೆ, ಟ್ರಕ್‌ನಲ್ಲಿದ್ದ ಔಷಧದ ಪಾಕೆಟ್‌ನಲ್ಲಿ ಮಾದಕವಸ್ತುಗಳು ಪತ್ತೆಯಾಗಿದ್ದವು. ಬಳಿಕ ಆತನನ್ನು ಬಂಧಿಸಲಾಗಿತ್ತು. ಈ ಪ್ರಕರಣದ ವಿಚಾರಣೆ ನಡೆಸಿದ ಅಲ್ಲಿನ ನ್ಯಾಯಾಲಯ ಮಾದಕವಸ್ತು ಕಳ್ಳಸಾಗಣೆ ಪ್ರಕರಣದಲ್ಲಿ ಬಲ್ಜಿಂದರ್ ತಪ್ಪಿತಸ್ಥನೆಂದು ಘೋಷಿಸಿ ಮರಣದಂಡನೆ ವಿಧಿಸಿದೆ. ಬಲ್ಜಿಂದರ್ ದುಬೈನಲ್ಲಿ 10 ವರ್ಷಗಳ ಕಾಲ ಟ್ರಕ್ ಚಾಲಕರಾಗಿ ಕೆಲಸ ಮಾಡುತ್ತಿದ್ದ. ಆಗಾಗ ಸೌದಿ ಅರೇಬಿಯಾಗೆ ಸರಕುಗಳನ್ನು ಸಾಗಿಸುತ್ತಿದ್ದ. ಹೀಗೆ ಒಂದು ದಿನ ದುಬೈನಲ್ಲಿ ಆತನೊಂದಿಗೆ ಕೆಲಸ ಮಾಡುತ್ತಿದ್ದ ವ್ಯಕ್ತಿಯೊಬ್ಬ, ಸೌದಿಅರೇಬಿಯಾದಲ್ಲಿರುವ ವಯಸ್ಸಾದ ರೋಗಿಯೊಬ್ಬನಿಗೆ ಔಷಧದ ಪ್ಯಾಕೆಟ್ ಒಂದನ್ನು ಕೊಂಡೊಯ್ಯುವಂತೆ ಮನವಿ ಮಾಡಿದ್ದ.

ಆ ಪಾಕೆಟ್‌ನಲ್ಲಿ ಏನಿದೆ ಎಂದು ತಿಳಿಯದೆಯೇ ಬಲ್ಜಿಂದರ್ ಅದಕ್ಕೆ ಒಪ್ಪಿಕೊಂಡಿದ್ದ. ಗಡಿಯಲ್ಲಿ ಟ್ರಕ್ ತಪಾಸಣೆ ನಡೆಸಿದಾಗ, ಅಧಿಕಾರಿಗಳು ಪಾಕೆಟ್‌ನೊಳಗೆ ಮಾದಕವಸ್ತುಗಳನ್ನು ಪತ್ತೆಹಚ್ಚಿ ಆತನನ್ನು ಬಂಧಿಸಿದ್ದರು ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಬಲ್ಜಿಂದರ್‌ಗೆ ವಿಧಿಸಲಾದ ಗಲ್ಲು ಶಿಕ್ಷೆಯನ್ನು ತಡೆಯಲು ಮತ್ತು ಆತನನ್ನು ಬಿಡುಗಡೆಗೊಳಿಸಲು ತುರ್ತು ಕಾನೂನು ಹಾಗೂ ರಾಜತಾಂತ್ರಿಕ ಮಧ್ಯಪ್ರವೇಶಕ್ಕಾಗಿ ಆತನ ಕುಟುಂಬ ಕೋರಿದೆ.

# ಎಂಪಿಎಸ್‌ಸಿ ಅಧ್ಯಕ್ಷರ ರಾಜೀನಾಮೆಗೆ ಸಿಜೆಪಿಯ ಅಭಿಜೀತ್ ದೀಪ್ಕೆ ಆಗ್ರಹ

**ಮುಂಬೈ,ಸೆ.20:** 'ಕಾಕ್ರೋಚ್ ಜನತಾ ಪಾರ್ಟಿ'ಯ ಸ್ಥಾಪಕ ಅಭಿಜೀತ್ ದೀಪ್ಕೆ ಭಾನುವಾರ ಮಹಾರಾಷ್ಟ್ರ ಲೋಕಸೇವಾ ಆಯೋಗದಲ್ಲಿ ಸುಧಾರಣೆಗಳನ್ನು ತರುವಂತೆ ಹಾಗೂ ಅದರ ಅಧ್ಯಕ್ಷ ವಿವೇಕ್ ಭಿಮನ್ವಾರ್ ಅವರ ವಿರುದ್ಧ ಕೇಳಿಬಂದಿರುವ ಭ್ರಷ್ಟಾಚಾರದ "ಆರೋಪಗಳ" ಹಿನ್ನೆಲೆಯಲ್ಲಿ ಅವರ ರಾಜೀನಾಮೆಗೆ ಆಗ್ರಹಿಸಿದರು.

ಛತ್ರಪತಿ ಸಂಭಾಜಿನಗರದಲ್ಲಿ ರಾಜ್ಯ ಲೋಕಸೇವಾ ಆಯೋಗದ ಪರೀಕ್ಷಾ ಆಕಾಂಕ್ಷಿಗಳೊಂದಿಗೆ ಸಂವಾದ ನಡೆಸುವಾಗ, ಭಿಮನ್ವಾರ್ ಅವರನ್ನು ಹುದ್ದೆಯಿಂದ ಕೆಳಗಿಳಿಸುವಂತೆ ಒತ್ತಾಯಿಸಿ ಇನ್ಸ್ಟಾಗ್ರಾಮ್‌ನಲ್ಲಿ ಎರಡು ನಿಮಿಷಗಳ ವಿಡಿಯೋವನ್ನು ಪೋಸ್ಟ್ ಮಾಡುವಂತೆ ಅವರು ಸ್ಥಾಪಕರು ಆಕಾಂಕ್ಷಿಗಳಿಗೆ ಕರೆ ನೀಡಿದರು. 15 ರಿಂದ 20 ಲಕ್ಷ ಯುವಕರು ನಿರುದ್ಯೋಗಿಗಳಾಗಿರುವುದು ಯಾವುದೇ ರಾಜ್ಯಕ್ಕೂ ಒಳ್ಳೆಯದಲ್ಲ ಎಂದು ಅವರು ಹೇಳಿದರು.

"ಭಿಮನ್ವಾರ್ (ಮಾಜಿ ಸಾರಿಗೆ ಆಯುಕ್ತರಾಗಿ) ಖಖಿಔ ಹಗರಣ, ಪರವಾನಗಿಗಳು ಮತ್ತು ನಂಬರ್ ಪ್ಲೇಟ್‌ಗಳಿಗೆ ಸಂಬಂಧಿಸಿದಂತೆ ಹಲವಾರು ಭ್ರಷ್ಟಾಚಾರದ ಆರೋಪಗಳನ್ನು ಎದುರಿಸುತ್ತಿದ್ದಾರೆ. ಇದರಲ್ಲಿ ದೇವೇಂದ್ರ ಫಡ್ನವೀಸ್ ಅವರಿಗೆ ಎಷ್ಟು ಪಾಲು (ಕಟ್) ಸಿಕ್ಕಿದೆ ಎಂಬುದು ಪ್ರಶ್ನೆ. ಆದರೆ ಭಿಮನ್ವಾರ್ ತಮ್ಮ ಹುದ್ದೆಯಲ್ಲಿ ಮುಂದುವರಿದರೆ, ಅವರು (ಫಡ್ನವೀಸ್) ಆ ಪಾಲನ್ನು (ಕಮಿಷನ್) ಪಡೆಯುತ್ತಿದ್ದಾರೆ ಎಂದರ್ಥ. ಈ ಹಣವನ್ನು ಬಳಸಿ ಅವರು ಸಂಸದರು ಮತ್ತು ಶಾಸಕರನ್ನು ಖರೀದಿಸುತ್ತಿದ್ದಾರೆಯೇ" ಎಂದು ದೀಪ್ಕೆ ಪ್ರಶ್ನಿಸಿದರು. ಭಿಮನ್ವಾರ್ ಅವರಿಂದ ರಾಜೀನಾಮೆ ಪಡೆಯುವ ಮೂಲಕ ಮಹಾರಾಷ್ಟ್ರ ಲೋಕಸೇವಾ ಆಯೋಗದಲ್ಲಿ "ಸುಧಾರಣೆ"ಗಳನ್ನು ತರಬೇಕೆಂದು ಅವರು ಆಗ್ರಹಿಸಿದರು.

# ದೆಹಲಿ ವಿವಿಯ 4ರ ಪೈಕಿ 3 ಸ್ಥಾನಗಳಲ್ಲಿ ಎಬಿವಿಪಿಗೆ ಜಯ

**ಉಪಾಧ್ಯಕ್ಷ ಸ್ಥಾನ ಗೆದ್ದು ಇತಿಹಾಸ ಬರೆದ ಸ್ವತಂತ್ರ ಅಭ್ಯರ್ಥಿ**

**ನವದೆಹಲಿ,ಸೆ.20:** ದೆಹಲಿ ವಿಶ್ವವಿದ್ಯಾಲಯ ವಿದ್ಯಾರ್ಥಿ ಸಂಘದ 2026ರ ಚುನಾವಣಾ ಫಲಿತಾಂಶಗಳನ್ನು ಪ್ರಕಟಗೊಂಡಿದ್ದು, ನಾಲ್ಕರ ಪೈಕಿ 3 ಸ್ಥಾನಗಳನ್ನು ಎಬಿವಿಪಿ ಗೆದ್ದಿದೆ. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರಮುಖ ಅಧ್ಯಕ್ಷ, ಕಾರ್ಯದರ್ಶಿ ಮತ್ತು ಜಂಟಿ ಕಾರ್ಯದರ್ಶಿ ಸ್ಥಾನಗಳನ್ನು ಗೆದ್ದುಕೊಂಡಿತು.

NSUIನ ವಿಜಯ್ ಶಂಕರ್ ಮೀನಾ (22,523 ಮತಗಳು) ಅವರನ್ನು ಸೋಲಿಸಿ, ABVPಯ ಯಶ್ ದಬಾಸ್ 24,576 ಮತಗಳೊಂದಿಗೆ ಅಧ್ಯಕ್ಷ ಸ್ಥಾನವನ್ನು ಗೆದ್ದರು. ರಿಯಾ ಛಾಬ್ಡಿ 21,650 ಮತಗಳೊಂದಿಗೆ ಕಾರ್ಯದರ್ಶಿ ಸ್ಥಾನವನ್ನು ಗೆದ್ದರೆ, ಲಕ್ಷ್ಯ ರಾಜ್ ಸಿಂಗ್ 16,615 ಮತಗಳೊಂದಿಗೆ ಜಂಟಿ ಕಾರ್ಯದರ್ಶಿಯಾಗಿ ಆಯ್ಕೆಯಾದರು.

ಎನ್‌ಎಸ್‌ಯುಐನ ಮಾಜಿ ಸದಸ್ಯ, ಸ್ವತಂತ್ರ ಅಭ್ಯರ್ಥಿ ದೀಪಾಂಶು ಶೋಕೀನ್ ಅವರು 30,615 ಮತಗಳನ್ನು ಪಡೆದು ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದರು. ಎಬಿವಿಪಿಯ ಇಶು ಮೌರ್ಯ 16,910 ಮತಗಳೊಂದಿಗೆ ಎರಡನೇ ಸ್ಥಾನ ಪಡೆದರೆ, ಎನ್‌ಎಸ್‌ಯುಐನ ವಿರ್ ಛತ್ರತ್ 4,313 ಮತಗಳನ್ನು ಗಳಿಸಿದರು. ಫಲಿತಾಂಶಗಳನ್ನು ಅಧಿಕೃತವಾಗಿ ಘೋಷಿಸುವ ಮುನ್ನ, ದೆಹಲಿ ಹೈಕೋರ್ಟ್‌ನ ನಿರ್ದೇಶನಗಳನ್ವಯ ವಿಜೇತ ಅಭ್ಯರ್ಥಿಗಳು ಮತ್ತು ಅವರ ಬೆಂಬಲಿಗರು ವಿಶ್ವವಿದ್ಯಾಲಯದ ಆವರಣದ ಒಳಗೆ ಅಥವಾ ಹೊರಗೆ ವಿಜಯೋತ್ಸವದ ಮೆರವಣಿಗೆಗಳನ್ನು ನಡೆಸದಂತೆ ಅಧಿಕಾರಿಗಳು ಸೂಚಿಸಿದರು